ರಾಯಚೂರು, ಕೊಪ್ಪಳ, ಯಾದಗಿರಿ, ಕಲಬುರ್ಗಿ, ಬಳ್ಳಾರಿ, ವಿಜಯನಗರ, ಬೀದರ, ಏಕಕಾಲಕ್ಕೆ ಪ್ರಕಟಣೆ
Raichur, Koppal, Yadagiri, Kalburgi, Ballary, Vijaya Nagar, Bidar

ರಾಯಚೂರಿನಿಂದ ರಾಜ್ಯದವರೆಗೆ

# ಕನ್ನಡ ಮಾತೃಭೂಮಿ
ಕನ್ನಡದಿನ ಪತ್ರಿಕೆ

ಸಂಪಾದಕರು : ಶ್ಯಾಮ್ ಸುಂದರ್.ಎಲ್
EDITOR : SHYAM SUNDER L

KANNADA MATHRUBHOOMI
KANNADA DAILY PAPER

mathrubhoomircr@gmail.com
Call : 9886635117

ಸಂಪುಟ : 03 ಸಂಚಿಕೆ 130 | Volume : 03 Issuse : 130
ದಿನಾಂಕ : 18-06-2026 ಗುರುವಾರ | Date : 18-06-2026 Thursday
RNI: Karkan/2023/89199
Post Reg No.: RCR/L/RNP/98/2025-2027
ರಾಯಚೂರು Raichur
ಪುಟ : 04 Pages : 04
ರೂ 2 Rs. 2

### ಸರ್ಕಾರಿಶಾಲೆಗಳಿಗೆ ಸ್ವಯಂ ಸೇವಾ ಸಂಸ್ಥೆಗಳ ಆರ್ಥಿಕ ನೆರವಿನೊಂದಿಗೆ ಅಟೆಂಡರ್ ನೇಮಕಾತಿಗೆ ಅವಕಾಶ

# ಮದ್ಯವರ್ತಿಗಳಿಂದ ಉದ್ಯೋಗ ಕೊಡಿಸುವದಾಗಿ ಹಣವಸೂಲಿ..?

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು, ಜೂ.17-** ಸರ್ಕಾರಿ ಶಾಲೆಗಳಿಗೆ ಸ್ವಯಂ ಸೇವಾ ಸಂಸ್ಥೆಗಳು ಸೇವೆಯನ್ನು ಕೊಡುಗೆ ಪಡೆದು ಶಾಲೆಗಳಿಗೆ ಅಟೆಂಡರ್ ನೇಮಕಾತಿಗೆ ಸಮಗ್ರ ಶಿಕ್ಷಣ ಯೋಜನೆಯಡಿ ಅವಕಾಶ ನೀಡಿರುವದು ಮಧ್ಯವರ್ತಿಗಳ ಹಾವಳಿಗೆ ಅವಕಾಶ ನೀಡಿದಂತಾಗಿ ತಾತ್ಕಾಲಿಕ ಹುದ್ದೆ ಕೊಡಿಸುವದಾಗಿ ಹಣವಸೂಲಿ ಮಾಡುತ್ತಿರುವ ಆರೋಪ ಕೇಳಿಬಂದಿದೆ.

ವಿದ್ಯಾಂಜಲಿ ಪೋರ್ಟಲ್-2.0ನಲ್ಲಿ ಜಿಲ್ಲೆಯ ಎಲ್ಲಾ ಸರ್ಕಾರಿ ಶಾಲೆಗಳಿಗೆ ಸ್ವಯಂಪ್ರೇರಿತ ಹಾಗೂ ಸ್ವಯಂಸೇವಾ ಸಂಸ್ಥೇಗಳು ನೀಡುವ ಕೊಡುಗೆ ಬಳಸಿಕೊಳ್ಳಲು ರಾಜ್ಯ ಯೋಜನಾ ನಿರ್ದೇಶಕರು ಅವಕಾಶ ನೀಡಿ ಆದೇಶಿಸಿದ್ದರು. ಆಯಾ ಜಿಲ್ಲೆಗಳ ಸಮಗ್ರ ಯೋಜನಾ ಸಮನ್ವಯ ಅಧಿಕಾರಿಗಳು ಜಿಲ್ಲೆಯ ಸರ್ಕಾರಿ ಶಾಲೆಗಳಿಗೆ ಅಟೆಂಡರ್ ಹುದ್ದೆ ನೇಮಕಾತಿ ಮಾಡಿಕೊಳ್ಳುವಂತೆಯೂ ಆದೇಶಿಸಿದ್ದರು. ಆದರೆ ಕೆಲ ಮದ್ಯವರ್ತಿಗಳುಮಾಸಿಕ15ಸಾವಿರ ರೂ ವೇತನ ಪಡೆಯುವ




- **ಸಮಗ್ರ ಶಿಕ್ಷಣ ಯೋಜನೆಯಡಿ ಸ್ವಯಂಸೇವಾ ಸಂಸ್ಥೆಗಳ ನೆರವು**
- **ವಿದ್ಯಾಂಜಲಿ ಪೋರ್ಟಲ್ ಮೂಲಕ ಸ್ವಯಂಸೇವಾ ಸಂಸ್ಥೆಗಳ ಆಯ್ಕೆ**
- **ಅಟೆಂಡರ್ ಹುದ್ದೆಗೆ ಪ್ರತಿ ತಿಂಗಳು 15 ಸಾವಿರ ಮಾಸಿಕ ವೇತನ**
- **ಹುದ್ದೆ ಕೊಡಿಸುವದಾಗಿ ಹಣವಸೂಲಿ ಮಾಡಿರುವ ಆರೋಪ**

ತಾತ್ಕಾಲಿಕ ಹುದ್ದೆ ಕೊಡಿಸುವದಾಗಿ ಹಣವಸೂಲಿ ಮಾಡಿರುವ ಆರೋಪಗಳು ಕೇಳಿಬಂದಿವೆ. ಬಿಸಿಯೂಟ ನೌಕರರಗಿಂತ ಹೆಚ್ಚಿನ ವೇತನ ಪಾವತಿಯಾಗುವದರಿಂದ ರಾಜಕೀಯಪ್ರಭಾವ, ವೈಯಕ್ತಿ ಸಂಪರ್ಕದೊಂದಿಗೆ ಉದ್ಯೋಗ ಕೊಡಿಸುವದಾಗಿ ಲಕ್ಷ ಲಕ್ಷ ಹಣವಸೂಲಿ ಮಾಡಿರುವ ದೂರುಗಳು ಕೇಳಿಬಂದಿವೆ. ಇಲ್ಲಿಯವರೆಗ ಸರ್ಕಾರಿ ಶಾಲೆಗಳಲ್ಲಿ ಸ್ವಚ್ಚತಾ ಕಾರ್ಯಕ್ಕೆ ಯಾವುದೇ ಸಿಬ್ಬಂದಿಗಳು ನೇಮಕಾತಿಗೆ ಅವಕಾಶ ಇರಲಿಲ್ಲ. ಈಗ ಸ್ವಯಂಸೇವಾ ಸಂಸ್ಥೆಗಳು,ದಾನಿಗಳ ನೆರವಿನಿಂದ ಸಿಬ್ಬಂದಿ ನೇಮಕಾತಿ ಮಾಡಿಕೊಳ್ಳುವ ಅವಕಾಶ ದೊರೆತಿದ್ದರು ಹೊಸ ಸಮಸ್ಯೆಯಾಗಿ ಪರಿಣಮಿಸಿದೆ.

ಸ್ವಯಂ ಪ್ರೇರಿತವಾಗಿ ಶಾಲೆಗಳಿಗೆ ಅಟೆಂಡರ್‌ಗಳನ್ನು ನೇಮಕ ಮಾಡಲು 8 ಸ್ವಯಂಸೇವಾ ಸಂಸ್ಥೆಗಳು ಮುಂದೆ ಬಂದಿವೆ ಪ್ರತಿ ಶಾಲೆಗೆ ಅಟೆಂಡರ್ ನೇಮಕಾತಿಗೆ ಪ್ರತಿತಿಂಗಳು 15 ಸಾವಿರ ರೂಗಳಂತೆ ಶೈಕ್ಷಣಿಕ ವರ್ಷದ ಅವಧಿಯಲ್ಲಿ ವೇತನ ನೀಡಲು ಸ್ವಯಂ ಸೇವಾ ಸಂಸ್ಥೆಗಳು ಆಸಕ್ತಿ ತೋರಿವೆ. ಹೈದ್ರಾಬಾದನ ಕೇರ್ ಫೌಂಡೇಷನ್, ಬೆಂಗಳೂರಿನ ಸುಚಿತ್ರಾ ಎಜ್ಯುಕೇಷನ್ ಸೂಸೈಟಿ, ಬೆಂಗಳೂರಿನ ಭವಿಷ್ಯ ಬೆಳಕು, ಅನೀಕೇತನಾ ಟ್ರಸ್ಟ್, ಯಾದಗಿರಿಯ ಓಂ ವಿದ್ಯಾವರ್ದಕ ಶಿಕ್ಷಣ ಸಂಸ್ಥೇ, ಧಾರವಾಡ ಕೇರ್ ಸೇವಾ ಫೌಂಡೇಷನ್, ಬೆಂಗಳೂರಿನ ಟ್ರಿನಿಟಿ ಕೇರ್ ಫೌಂಡೇಷನ್‌ಗಳು ಅಟೆಂಡರ್ ನೇಮಕಾತಿ ಮಾಡಿಕೊಂಡು ವೇತನ ನೀಡಲಿವೆ.

ಆದರೆ ನೇಮಕಾತಿಯನ್ನು ಸ್ವಯಂಸೇವಾ ಸಂಸ್ಥೆಗಳೇ ಮಾಡುತ್ತಿದ್ದು ಈ ಮಧ್ಯೆ ರಾಜಕೀಯ ಪ್ರಭಾವಿಗಳು ಉದ್ಯೋಗ ಕೊಡಿಸುವದಾಗಿ ಲಿಂಗಸಗೂರು, ಮಸ್ಕಿ ತಾಲೂಕಗಳಲ್ಲಿ ಹಣವಸೂಲಿ ನಡೆಸಿರುವದು ಬೆಳಕಿಗೆ ಬಂದಿದೆ. ವೇತನ ನೀಡುವ ಜವಬ್ದಾರಿ ಸ್ವಯಂಸೇವಾ ಸಂಸ್ಥೆಗಳಾಗಿರುವದನ್ನು ರಾಜ್ಯ ಯೋಜನಾ ನಿರ್ದೇಶಕರು ಸ್ಪಷ್ಟತೆಯೊಂದಿಗೆ ಸ್ವಯಂಸೇವಾ ಸಂಸ್ಥೆಗಳಿಗೆ ಅನುಮೋದನೆ ನೀಡಿದ್ದಾರೆ. ಶೈಕ್ಷಣಿಕ ಬೆಳವಣಿಗೆ ಸ್ವಯಂ ಸೇವಾ ಸಂಸ್ಥೇಗಳು ಆಸಕ್ತಿ ತೋರಿವೆ. ಆದರೆ ಅಟೆಂಡರ್ ಹುದ್ದೆ ಕೊಡಿಸುವದಾಗಿ ಹೇಳಿ ನಡೆಯುತ್ತಿರುವ ➘4

## ಮಾಜಿ ಶಾಸಕ ಎ.ಪಾಪಾರೆಡ್ಡಿ ಪತ್ನಿ ಪಾರ್ವತಮ್ಮ ನಿಧನ ಗಣ್ಯರಿಂದ ತೀವ್ರ ಸಂತಾಪ

**ರಾಯಚೂರು, ಜೂ.17-**ಮಾಜಿ ಶಾಸಕ ಎ.ಪಾಪಾರೆಡ್ಡಿ ಅವರ ಪತ್ನಿ ಪಾರ್ವತಮ್ಮ ನಿಧನಕ್ಕೆ ಅನೇಕ ಗಣ್ಯರು ತೀವ್ರ ಸಂತಾಪ ಸೂಚಿಸಿದ್ದಾರೆ.



ಮೃತರ ಅಂತ್ಯಕ್ರಿಯೆ ಇಂದು ಮಧ್ಯಾಹ್ನ 2 ಗಂಟೆಗೆ ಮುನ್ನೂರು ಕಾಪು ಸಮಾಜದ ರುದ್ರ ಭೂಮಿಯಲ್ಲಿ ನೆರವೇರಿಸಲಾಗುವುದು ಎಂದು ಕುಟುಂಬಸ್ಥರು ತಿಳಿಸಿದ್ದಾರೆ.

ಮೃತರು ಒಬ್ಬ ಪುತ್ರ,ನಾಲ್ಕು ಜನ ಪುತ್ರಿಯರು, ಹಾಗೂ ಮೊಮ್ಮಕಳನ್ನು ಬಿಟ್ಟು ಆಗಲಿದ್ದಾರೆ. ಪಾರ್ವತಮ್ಮ ಅಗಲಿಕೆಗೆ ಮಾಜಿ ಸಚಿವ ಎನ್.ಎಸ್ .ಬೋಸರಾಜ, ನಗರ ಶಾಸಕರು ಶಿವರಾಜ ➘4

## ಪ್ರತಿಯೊಬ್ಬರು ಒಂದು ಸಸಿಯನ್ನು ನೆಟ್ಟು ಪಾಲನೆ ಮತ್ತು ಪೋಷಣೆ ಮಾಡಿ-ರಾಜೇಶ್ ನಾಯಕ

**ರಾಯಚೂರು, ಜೂ. 17-**ಪ್ರತಿಯೊಬ್ಬರು ಒಂದು ಸಸಿಯನ್ನು ನೆಟ್ಟು ಪಾಲನೆ ಮತ್ತು ಪೋಷಣೆ ಮಾಡುವ ಮೂಲಕ ಜವಾಬ್ದಾರಿಯನ್ನು ವಹಿಸಿಕೊಂಡರೆ ಪರಿಸರ ಸಂರಕ್ಷಣೆಗೆ ಮಹತ್ವದ ಕೊಡುಗೆ ನೀಡಿದಂತಾಗುತ್ತದೆ ಎಂದು ವಲಯ ಅರಣ್ಯ ಇಲಾಖೆಯ ಅಧಿಕಾರಿಗಳಾದ ರಾಜೇಶ್ ನಾಯಕ ಹೇಳಿದರು.

ನಗರದ ಶ್ರೀ ರಾಮಲಿಂಗೇಶ್ವರ ದೇವಸ್ಥಾನದ ಮೈದಾನದಲ್ಲಿ ಶ್ರೀ ವರಸಿದ್ಧಿ ಆಂಜನೇಯ ಸ್ವಾಮಿ ದೇವಸ್ಥಾನದ ಹಾಗೂ ನವೋದಯ ಶಿಕ್ಷಣ ಮಹಾವಿದ್ಯಾಲಯದ ಆಡಳಿತ ಮಂಡಳಿ,ಮಾನವ ಹಕ್ಕುಗಳು ಮತ್ತು ಭ್ರಷ್ಟಾಚಾರ ವಿರೋಧಿ ಸಂಸ್ಥೆ, ವಲಯ ಅರಣ್ಯ ಇಲಾಖೆ ಹಾಗೂ ವೀರಶೈವ ಲಿಂಗಾಯತ ಸಮಾಜ ಸಂಯುಕ್ತ ಆಶ್ರಯದಲ್ಲಿ ಡಾ. ರಾಜಶಂಕರ್ ಎನ್. ಅವರ ಜನ್ಮದಿನದ ಅಂಗವಾಗಿ 100 ಗಿಡಗಳನ್ನು ನೆಡುವ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದರು, ➘4

## ಸರಕಾರ ಜನರ, ರೈತರ ಸಮಸ್ಯೆ ಪರಿಹಾರ ಮಾಡುವುದುಕ್ಕಿಂತ ಸಮಸ್ಯೆ ಸೃಷ್ಟಿ- ಜಿ ವೆಂಕಟರೆಡ್ಡಿ

**ರಾಯಚೂರು,ಜೂ.18-**ರಾಜ್ಯ ಕಾಂಗ್ರೆಸ್ ಸರಕಾರವು ಜನರ, ರೈತರ ಸಮಸ್ಯೆ ಪರಿಹಾರ ಮಾಡುವ ಬದಲು ಸಮಸ್ಯೆ ಸೃಷ್ಟಿಸುತ್ತಿದೆ ಎಂದು ಲೋಕ ಜನ ಶಕ್ತಿ ಪಕ್ಷದ ಕಿಸಾನ್ ಘಟಕದ ರಾಜ್ಯ ಅಧ್ಯಕ್ಷ ಜಿ. ವೆಂಕಟರೆಡ್ಡಿ ಅವರು ಆರೋಪಿಸಿದರು.

ರೈತರಿಗೆ ಅಗತ್ಯಗೆ ಅನುಗುಣವಾಗಿ ಬೀಜ, ರಸ ಗೊಬ್ಬರ ಪೂರೈಕೆ ಮಾಡುವುದು ಸರಕಾರದ ಜವಾಬ್ದಾರಿ. ಆದರೆ ರೈತರಿಗೆ ಸುಲಭವಾಗಿ ಬೀಜ ರಸ ಗೊಬ್ಬರ ಸಿಗದಂತೆ ನಾನಾ ರೀತಿಯ ನಿಯಮಗಳನ್ನು ರೂಪಿಸುತ್ತಿದೆ.ಫೋಟ ಐಡಿ ಮೂಲಕ ಕಡ್ಡಾಯವಾಗಿ ಖರೀದಿ ಮಾಡಬೇಕು ಎಂದು ಷರತ್ತು ಹಾಕಿ ರೈತರಿಗೆ ಯಾವುದೇ ಸೌಲಭ್ಯ ಸರಳವಾಗಿ ಸಿಗದಂತೆ ಮಾಡುತ್ತಿರುವ ಧೋರಣೆ ಖಂಡನೀಯವಾಗಿದೆ.

ಫೋಟ ಐಡಿಯಲ್ಲಿ ನಾನಾ ರೀತಿಯ ಸಮಸ್ಯೆಗಳು ಇವೆ. ಅವುಗಳನ್ನು ಸರಿ ಪಡಿಸುವ ಕೆಲಸ ಮಾಡಬೇಕು. ಕೃತಕ ಅಭಾವ ಸೃಷ್ಟಿಸಿ ಬ್ಲಾಕ್ ನಲ್ಲಿ ಹೆಚ್ಚಿನ ➘4

## ಕಂಚು ಮಾರೆಮ್ಮ ಜಾತ್ರೆ ಅಧಿಕಾರಿಗಳ ಪೂರ್ವಸಿದ್ಧತಾ ಸಭೆ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು, ಜು.17-**ನಗರದ ಹರಿಜನವಾಡದಲ್ಲಿರುವ ಕಂಚು ಮಾರೆಮ್ಮ ದೇವಿಯ ಜಾತ್ರೆ ಹಿನ್ನೆಲೆಯಲ್ಲಿ ಜಿಲ್ಲಾ ಹೆಚ್ಚುವರಿ ಪೊಲೀಸ್ ಅಧೀಕ್ಷಕ ಹರೀಶ್ ಅವರ ಅಧ್ಯಕ್ಷತೆಯಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಪೂರ್ವಸಿದ್ಧತಾ ಸಭೆ ನಡೆಯಿತು.

ಜೂ. 23, 24 ಮತ್ತು 25ರಂದು ಮೂರು ದಿನಗಳ ಕಾಲ ನಡೆಯಲಿರುವ ಜಾತ್ರೆಯನ್ನು ಸುಗಮ ಹಾಗೂ ಶಾಂತಿಯುತವಾಗಿ ನಡೆಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮಹಾನಗರ ಪಾಲಿಕೆಯು ಜಾತ್ರೆ ನಡೆಯುವ ಸ್ಥಳದಲ್ಲಿ ಅಗತ್ಯ ಪ್ರಮಾಣದಲ್ಲಿ ಕುಡಿಯುವ ನೀರು, ಸ್ವಚ್ಛತೆ ಸೇರಿದಂತೆ ಮೂಲಸೌಕರ್ಯಗಳನ್ನು ಕಲ್ಪಿಸಬೇಕು. ಪೊಲೀಸ್ ಇಲಾಖೆಯು ಭದ್ರತಾ ದೃಷ್ಟಿಯಿಂದ ಸಿಸಿ ಕ್ಯಾಮೆರಾಗಳನ್ನು ಅಳವಡಿಸಿ ಸೂಕ್ತ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಬೇಕು ಎಂದು ತಿಳಿಸಿದರು.

ಸಿಎಚ್ ಪೌಡರ್ ಮಿಶ್ರಿತ ಸೇಂದಿ ಮಾರಾಟಕ್ಕೆ ಕಟ್ಟುನಿಟ್ಟಿನ ಕಡಿವಾಣ ಹಾಕುವಂತೆ ಸೂಚಿಸಿದ ಅವರು, ಜಾತ್ರೆ ಆರಂಭಕ್ಕೂ ಮುನ್ನವೇ ಅಬಕಾರಿ ಇಲಾಖೆ ಅಧಿಕಾರಿಗಳು ಈ ಪ್ರದೇಶದಲ್ಲಿ ನಿರಂತರ ಗಸ್ತು ತಿರುಗಿ ಅಕ್ರಮ ಮದ್ಯ ಮಾರಾಟವನ್ನು ತಡೆಯಬೇಕು ಎಂದು ನಿರ್ದೇಶನ ನೀಡಿದರು.

ಜಾತ್ರೆಯ ಸಂದರ್ಭದಲ್ಲಿ ಅಗ್ನಿ ಅವಘಡಗಳು ಸಂಭವಿಸದಂತೆ ಮುನ್ನೆಚ್ಚರಿಕಾ ಕ್ರಮವಾಗಿ ಅಗ್ನಿಶಾಮಕ ದಳದ ➘4

## ಕೆಪಿಎಸ್ ಮ್ಯಾಗ್ನೆಟ್ ಶಾಲೆಗಳ ನೆಪದಲ್ಲಿ ಸರ್ಕಾರಿ ಶಾಲೆಗಳ ವಿಲೀನಕ್ಕೆ ವಿರೋಧಿಸಿ ಪ್ರತಿಭಟನೆ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು, ಜೂ.17-**ಕೆಪಿಎಸ್ ಮ್ಯಾಗ್ನೆಟ್ ಶಾಲೆಗಳ ನೆಪದಲ್ಲಿ ರಾಯಚೂರು ನಗರ ಹಾಗೂ ಗ್ರಾಮೀಣ ವ್ಯಾಪ್ತಿಯ ಹಲವು ಸರ್ಕಾರಿ ಶಾಲೆಗಳನ್ನು ವಿಲೀನಗೊಳಿಸುವ ನಿರ್ಧಾರವನ್ನು ಕೈಬಿಡಬೇಕು ಹಾಗೂ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸಬೇ ಕು ಎಂದು ಆಗ್ರಹಿಸಿ ಎಐಡಿಎಸ್‌ಓ ಮತ್ತು ಸಾರ್ವ ಜನಿಕ ಶಾಲೆ ಉಳಿಸಿ ಸಮಿತಿಯ ನೇತೃತ್ವದಲ್ಲಿ ನಗರ ದ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಲಾಯಿತು.

ಕೆಪಿಎಸ್ ಮ್ಯಾಗ್ನೆಟ್ ಯೋಜನೆಯನ್ನು ಹಿಂಪಡೆಯಬೇಕು ಹಾಗೂ ಅಂದ್ರೂನ್ ಖಿಲ್ಲಾ, ಕೋಟೆಯ ಬಾಲಕಿಯರ ಉರ್ದು ಪ್ರೌಢಶಾಲೆ, ಅಸ್ಕಿಹಾಳ, ಆಶ್ರಯ ಕಾಲೋನಿ, ಶ್ರೀರಾಮನಗರ ಕ್ಯಾಂಪ್, ವಿಜಯನಗರ ಕ್ಯಾಂಪ್, ಗೋಲ್ ➘4




## ಪಶ್ಚಿಮ ಠಾಣೆಯಲ್ಲಿ ಮನೆ ಕಳ್ಳತನ ಮಾಡಿದ್ದ ಅಂತರಾಜ್ಯ ಕಳ್ಳತನನ ಬಂಧಿಸಿದ ಪಶ್ಚಿಮ ಠಾಣೆ ಪೊಲೀಸರು

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.17-**ಮನೆಗಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಯಚೂರು ಪಶ್ಚಿಮ ಪೊಲೀಸ್ ಠಾಣೆ ಪೊಲೀಸರು ಯಶಸ್ವಿ ಕಾರ್ಯಾಚರಣೆ ನಡೆಸಿ, ಒಬ್ಬ ಆರೋಪಿಯನ್ನು ಬಂಧಿಸಿ, ಒಟ್ಟು 7.20 ಲಕ್ಷ ರೂ.ಮೌಲ್ಯದ 40 ಗ್ರಾಂ ತೂಕದ ಬಂಗಾರದ ಆಭರಣಗಳನ್ನು ವಶಪಡಿಸಿಕೊಂಡಿದ್ದಾರೆ.

ಪೊಲೀಸರ ಮಾಹಿತಿ ಪ್ರಕಾರ, 2025ರ ಏಪ್ರಿಲ್ 7ರಂದು ಮಧ್ಯರಾತ್ರಿ 12ರಿಂದ ಬೆಳಿಗ್ಗೆ 5 ಗಂಟೆಯೊಳಗೆ ನಗರದ ಪ್ರಶಾಂತ ಕಾಲೋನಿಯ ನಿವಾಸಿ ಎ.ಕೆ. ವಿರೇಶ ಅವರ ಮನೆಯಲ್ಲಿ ಕಳ್ಳತನ ನಡೆದಿತ್ತು.

ಈ ಸಂಬಂಧ ಪಶ್ಚಿಮ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಳ್ಳಲಾಗಿತ್ತು.

ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಅರುಣಾಂಗ್ಷು ಗಿರಿ ಐಪಿಎಸ್, ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಎಸ್.ಜೆ. ಕುಮಾರಸ್ವಾಮಿ ಹಾಗೂ ಜಿ. ಹರೀಶ, ರಾಯಚೂರು ಉಪವಿಭಾಗದ ಪೊಲೀಸ್ ಉಪಾಧೀಕ್ಷಕ ಶಾಂತವೀರ ಅವರ ಮಾರ್ಗದರ್ಶನದಲ್ಲಿ, ಪಶ್ಚಿಮ ವೃತ್ತದ ಸಿಪಿಐ ಉಮೇಶ ಕಾಂಬ್ಳೆ ನೇತೃತ್ವದಲ್ಲಿ ವಿಶೇಷ ತನಿಖಾ ತಂಡವನ್ನು ರಚಿಸಿ ಕಾರ್ಯಾಚರಣೆ ನಡೆಸಲಾಯಿತು.

ತನಿಖೆಯ ವೇಳೆ ಆರೋಪಿತ 39 ವರ್ಷದ ಆಂಧ್ರಪ್ರದೇಶದ ಕರ್ನೂಲು ಜಿಲ್ಲೆಯ ಆದೋನಿ ತಾಲ್ಲೂಕಿನ ಆಲೂರು ಗ್ರಾಮದ ದಮ್ಮರಿ ಕಾಲೋನಿ ನಿವಾಸಿ ಗೋವಿಂದರಾಜುಲು ದೊಮ್ಮರ ಎಂಬಾತನನ್ನು ಬಂಧಿಸಲಾಗಿದೆ.

ಆರೋಪಿಯಿಂದ ಪ್ರಕರಣಕ್ಕೆ ಸಂಬಂಧಿಸಿದ 25 ಗ್ರಾಂ ತೂಕದ ಬಂಗಾರದ ನೆಕ್‌ಲೆಸ್ (ಅಂದಾಜು ಮೌಲ್ಯ 4.50 ಲಕ್ಷ ರೂ.) ಹಾಗೂ ನೇತಾಜಿನಗರ ಪೊಲೀಸ್ ಠಾಣೆಯ ಅಪರಾಧಕ್ಕೆ ಸಂಬಂಧಿಸಿದ 15 ಗ್ರಾಂ ತೂಕದ ಬಂಗಾರದ ಸರ (ಅಂದಾಜು ಮೌಲ್ಯ 2.70 ಲಕ್ಷ ರೂ.) ಸೇರಿದಂತೆ ಒಟ್ಟು 7.20 ಲಕ್ಷ ಮೌಲ್ಯದ ಬಂಗಾರದ ಆಭರಣಗಳನ್ನು ವಶಪಡಿಸಿಕೊಳ್ಳಲಾಗಿದೆ. ಈ ಕಾರ್ಯಾಚರಣೆಯಲ್ಲಿ ಪಿಎಸ್‌ಐ ಮಂಜುನಾಥ ಟಿ.ಡಿ., ಪಿಎಸ್‌ಐ ಲಕ್ಷ್ಮೀದೇವಿ, ಎಎಸ್‌ಐ ಜಿ. ಶ್ರೀನಿವಾಸ, ಹೆಡ್ ಕಾನ್ಸ್‌ಟೇಬಲ್ ರವಿರಾಜ ಹಾಗೂ ಪೊಲೀಸ್ ಸಿಬ್ಬಂದಿ ವಿನಾಯಕ, ರಮೇಶ, ಚಂದ್ರಶೇಖರ, ಹನುಮೇಶ ಮತ್ತು ಮಂಜುನಾಥ ಅವರು ಭಾಗವಹಿಸಿದ್ದರು.

## ವಾರ್ಡ 27 ರಲ್ಲಿ ಆರ್‌ಆರ್‌ಆರ್ ಕೇಂದ್ರ ಉದ್ಘಾಟನೆ: ಕಸ ಮುಕ್ತಗೊಳಿಸಲು ಜನತೆ ಸಹಕಾರ ಅಗತ್ಯ-ಜೋಬಿನ್ ಮೊಹಪಾತ್ರ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.17-**ನಗರದ ವಾರ್ಡ್ ನಂಬರ್ 27ರಲ್ಲಿ ಸ್ವಚ್ಛ ಸರ್ವೇಕ್ಷಣ ಕಾರ್ಯಕ್ರಮದ ನನ್ನ ಜೀವನ ನನ್ನ ಸ್ವಚ್ಛ ನಗರ ಉಪಕ್ರಮದ ಭಾಗವಾಗಿ ಆರ್‌ಆರ್‌ಆರ್(ರೆಡ್ಯೂಸ್, ರಿಸೈಕಲ್, ರೀಯೂಸ್) ಕೇಂದ್ರವನ್ನು ಶಾಲಾ ಮಕ್ಕಳು ರಿಬ್ಬನ್ ಕತ್ತರಿಸುವ ಮೂಲಕ ಚಾಲನೆ ನೀಡಿದರು.

ಶಾಲಾ ಮಕ್ಕಳಿಗೆ ಆರ್‌ಆರ್‌ಆರ್ ಕಾರ್ಯಕ್ರಮದ ಬಗ್ಗೆ ಅರಿವು ಮೂಡಿಸುವ ಉದ್ದೇಶದಿಂದ ನಾಗರಿಕರು ತಮ್ಮ ಮನೆಗಳಲ್ಲಿ ಬಳಸಬಹುದಾದ

ಗೃಹೋಪಯೋಗಿ ವಸ್ತುಗಳನ್ನು ದಾನ ಮಾಡುವ ನಾಗರೀಕರ ಸಂಗ್ರಹಣಾ ಕೇಂದ್ರವನ್ನು ಬಳಸಬಹುದಾಗಿದ್ದು,

ಮನೆಯಲ್ಲಿರುವ ಅನುಪಯುಕ್ತ ಬಟ್ಟೆ, ಬೂಟು, ಹಳೆಯ ಪುಸ್ತಕಗಳು, ಆಟಿಕೆಗಳು, ಮತ್ತು ಪ್ಲಾಸ್ಟಿಕ್ ವಸ್ತುಗಳನ್ನು ಕೇಂದ್ರದಲ್ಲಿ ಸಂಗ್ರಹಿಸಲಾಗುತ್ತದೆ. ಮನೆಯಲ್ಲಿ ಎಲ್ಲಾ ವಸ್ತುಗಳನ್ನು ಪ್ರತ್ಯೇಕವಾಗಿ ಸಬೇಕು ಎಂದು ಮಕ್ಕಳಲ್ಲಿ ಜಾಗೃತಿ ಮೂಡಿಸಲಾಯಿತು. ಕೇಂದ್ರವು ವಾರ್ಡ್ ನಂಬರ್ 27, 28 ಹಾಗೂ 29ಕ್ಕೆ ಅನ್ವಯಿಸುತ್ತದೆ.

ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮಹೋಪಾತ್ರ ಅವರ ನೇತೃತ್ವದಲ್ಲಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಘನತ್ಯಾಜ್ಯ ವ್ಯವಸ್ಥೆಯ ತಜ್ಞ ಶಫೀ, ಆರೋಗ್ಯ ನಿರೀಕ್ಷಕ ರವಿಕುಮಾರ, ಮೇಲ್ವಿಚಾರಕರಾದ ನಿಜಾಮುದ್ದಿನ್, ರಮೇಶ, ಸೈಯದ್ ಅಕ್ಬರ್ ಹುಸೇನ್, ಸಂತೋಷ್, ಸಮುದಾಯ ಸಂಚಾಲಕರಾದ ಸುನಿತಾ, ಪಿ.ಸಿ.ಸುಜಾತ, ಲಕ್ಷ್ಮೀದೇವಿ ಸೇರಿದಂತೆ ಪೌರಕಾರ್ಮಿಕರು, ಶಾಲಾ ವಿದ್ಯಾರ್ಥಿಗಳು, ಶಿಕ್ಷಕರು ಉಪಸ್ಥಿತರಿದ್ದರು.

## ಕದಳಿ ವೇದಿಕೆಯಿಂದ ಜೂ.20 ರಂದು ಪ್ರಥಮ ಕದಳಿ ಮಹಿಳಾ ಸಮ್ಮೇಳನ ಸಮ್ಮೇಳನಾಧ್ಯಕ್ಷರಾಗಿ ಡಾ.ಗಂಗಮ್ಮ ಸತ್ಯಂಪೇಟೆ ಆಯ್ಕೆ-ಲಲಿತಾ ಬಸನಗೌಡ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.18-**ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ಮೈಸೂರು ಹಾಗೂ ಜಿಲ್ಲಾ ಶರಣ ಸಾಹಿತ್ಯ ಪರಿಷತ್, ಕದಳಿ ಮಹಿಳಾ ಘಟಕಗಳ ಸಹಯೋಗದಲ್ಲಿ ಜೂ.20 ರಂದು ನಗರದ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾ ಪ್ರಥಮ ಕದಳಿ ಮಹಿಳ ಸಮ್ಮೇಳನ ಆಯೋಜಿಸಲಾಗಿದೆ ಎಂದು ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ಲಲಿತಾ. ಎಂ.ಬಸನಗೌಡ ಹೇಳಿದರು.

ಅವರಿಂದು ಮಾಧ್ಯಮಗೋಷ್ಟಿ ಉದ್ದೇಶಿಸಿ ಮಾತನಾಡಿ ಸಮ್ಮೇಳನ ಸರ್ವಾಧ್ಯಕ್ಷರನ್ನಾಗಿ ಡಾ.ಗಂಗಮ್ಮ ಸತ್ಯಂಪೇಟೆ ಇವರನ್ನು ಆಯ್ಕೆ ಮಾಡಲಾಗಿದೆ. ಸಮ್ಮೇಳನದಂದು ರಾಷ್ಟ್ರಧ್ವಜವನ್ನು ಶರಣ ಸಾಹಿತ್ಯ ಪರಿಷತ್ ಗೌರವಾಧ್ಯಕ್ಷ ಬಸಪ್ಪ. ಎಂ.ತಿಪ್ಪಾರೆಡ್ಡಿ ಆರೋಹಣ ಮಾಡಲಿದ್ದಾರೆ. ಪರಿಷತ್ ಧ್ವಜವನ್ನನು ಲಲಿತಾ.ಎಂ.ಬಸನಗೌಡ ಇವರು ನೇರವೇರಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಸಾಹಿತಿ ಲಕ್ಷ್ಮೀದೇವಿ ಶಾಸ್ತ್ರಿ, ಜಗದೇವಿ ಚನ್ನಬಸವ, ಡಾ.ಎಂ.ಭಾರತಿ, ಡಾ.ಶೀಲಾ ಸಗರದ, ಕೆ.ಇ.ನರಸಿಂಹ ಭಾಗಿಯಾಗಲಿದ್ದಾರೆ.

ಬೆಳಿಗ್ಗೆ 9 ಗಂಟೆಗೆ ಬಸವೇಶ್ವರ ವೃತ್ತದಿಂದ ಪ್ರಾರಂಭವಾಗುವ ಸಮ್ಮೇಳನಾಧ್ಯಕ್ಷ ಮೆರವಣಿಗೆಯನ್ನು ಜಿಲ್ಲಾಧಿಕಾರಿ ಪೂವಿತಾ. ಎಸ್.ಉದ್ಘಾಟಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಮಹಾನಗರ ಪಾಲಿಕೆಯ ಆಡಳಿತಾಧಿಕಾರಿ ಸಂತೋಷ ರಾಣಿ, ರೇಖಾ ಕೇಶವರೆಡ್ಡಿ, ವಿಜಯರಾಜೇಶ್ವರಿ ಗೋಪಿಶೆಟ್ಟಿ, ನಂದಾ ಶಿವಾನಂದಚುಕ್ಕಿ, ➘4

## ವಿದ್ಯುತ್ ವಿತರಣಾ ಕೇಂದ್ರಗಳ ಖಾಸಗೀಕರಣ ವಿರೋಧಿಸಿ ಕೆಪಿಟಿಸಿಎಲ್ ನೌಕರರಿಂದ ಪ್ರತಿಭಟನೆ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.18-**ರಾಜ್ಯದ ರೈತರು, ನಿರುದ್ಯೋಗಿ ಯುವಕರು, ಬಡವರು, ವಿದ್ಯುತ್ ಗುತ್ತಿಗೆದಾರರು, ಜನಸಾಮಾನ್ಯರು, ಇಲಾಖೆಯ ಅಧಿಕಾರಿ-ನೌಕರರು ಹಾಗೂ ನಿವೃತ್ತಿ ಮತ್ತು ಕುಟುಂಬ ಪಿಂಚಣಿದಾರರ ಹಿತದೃಷ್ಟಿಯಿಂದ ಟಾಟಾ ಪವರ್ ಕಂಪನಿಗೆ ರಾಜ್ಯದಲ್ಲಿ ವಿದ್ಯುತ್ ಸರಬರಾಜು ಮಾಡಲು ಪರವಾನಿಗೆ ನೀಡಬಾರದು. ವಿದ್ಯುತ್ ವಿತರಣಾ ಕಂಪನಿಗಳು ಸರ್ಕಾರದ ಅಧೀನದಲ್ಲಿಯೇ ಮುಂದುವರಿಯಬೇಕು ಎಂದು ಆಗ್ರಹಿಸಿ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ (ಕೆಪಿಟಿಸಿಎಲ್) ಅಧಿಕಾರಿ ಮತ್ತು ನೌಕರರ ಸಂಘಗಳ ಒಕ್ಕೂಟದ ವತಿಯಿಂದ ನಗರದ ಕೆಪಿಟಿಸಿಎಲ್ ಕಚೇರಿ ಎದುರು ಪ್ರತಿಭಟನೆ ನಡೆಸಲಾಯಿತು.

ಮುಂಬೈನ ಟಾಟಾ ಪವರ್ ಕಂಪನಿಯು ಜೆಸ್ಕಾಂ ವ್ಯಾಪ್ತಿಯ ರಾಯಚೂರು ಸೇರಿದಂತೆ ರಾಜ್ಯದ 19 ಜಿಲ್ಲೆಗಳಲ್ಲಿ ವಿದ್ಯುತ್ ಸರಬರಾಜು ಮಾಡಲು ಪರವಾನಿಗೆ ಕೋರಿ ಸಲ್ಲಿಸಿರುವ ಅರ್ಜಿಯನ್ನು




ವಿರೋಧಿಸಿದರು.

ಗೃಹಜ್ಯೋತಿ, ಭಾಗ್ಯಜ್ಯೋತಿ ಹಾಗೂ ಕುಟೀರ ಜ್ಯೋತಿ ಸರ್ಕಾರದ ಯೋಜನೆಗಳು ರದ್ದಾಗುವ ಸಾಧ್ಯತೆ ಇದ್ದು, ರೈತರಿಗೆ ನೀಡುತ್ತಿರುವ ಉಚಿತ ವಿದ್ಯುತ್ ಹಾಗೂ ಸಬ್ಸಿಡಿ ಸೌಲಭ್ಯಗಳು ಸ್ಥಗಿತಗೊಳ್ಳುವ ಅಪಾಯವಿದೆ ಎಂದು ಆತಂಕ ವ್ಯಕ್ತಪಡಿಸಿದರು.

ವಿದ್ಯುತ್ ವಿತರಣಾ ಕಂಪನಿಗಳ ಖಾಸಗೀಕರಣದಿಂದ ರಾಜ್ಯದಲ್ಲಿ ನಿರುದ್ಯೋಗ ಸಮಸ್ಯೆ ಮತ್ತಷ್ಟು ಹೆಚ್ಚಾಗಲಿದ್ದು, ಬಡವರು, ದೀನದಲಿತರು ಮತ್ತು ಹಿಂದುಳಿದ ವರ್ಗಗಳಿಗೆ ➘4

# 29 ಲಕ್ಷ ವೆಚ್ಚದಲ್ಲಿ ಪೌರಕಾರ್ಮಿಕರ ವಿಶ್ರಾಂತಿ ಗೃಹ ಶಾಸಕರಿಂದ ಉದ್ಘಾಟನೆ

■ ಕನ್ನಡ ಮಾತೃ ಭೂಮಿ ವಾರ್ತೆ

**ಅಣ್ಣಿಗೇರಿ,** ನಗರದ ಜೀವನಾಡಿಗಳಾಗಿರುವ ಗಾಳಿ ಮಳೆ ಬಿಸಿಲು ಚಳಿ ಎನ್ನದೆ ದಿನನಿತ್ಯ ನಸುಕಿನ ಜಾವದಿಂದ ಸ್ವಚ್ಛತಾ ಸೇವ ಕೈಗೊಳ್ಳುವ ಪೌರಕಾರ್ಮಿಕರು ನಿಜವಾದ ಯೋಧರು ಎಂದು ಶಾಸಕ ಎನ್ ಹೆಚ್ ಕೋನರೆಡ್ಡಿ ಹೇಳಿದರು

ಎಲ್ಲ ರಂಗದಲ್ಲೂ ಅಧಿಕಾರಿಗಳಿಗೆ ರಾಜಕಾರಣಿಗಳಿಗೆ ವಿಶ್ರಾಂತಿ ಪಡೆಯಲು ವಿಶ್ರಾಂತಿ ಗ್ರಹ ಇರುತ್ತದೆ ಅದೇ ರೀತಿ ಪೌರಕಾರ್ಮಿಕರಿಗೂ ಸರ್ಕಾರದ ನಿರ್ದೇಶನದಂತೆ ವಿಶ್ರಾಂತಿ ಗ್ರಹ ಕಟ್ಟಿ ಅವರಿಗೆ ಹಸ್ತಾಂತ ಮಾಡಿರುವುದು ನನಗೆ ಅತೀವ ಸಂತೋಷವಾಗುತ್ತದೆ.

ಅದಲ್ಲದೆ 21ನೇ ವಾರ್ಡಿನಲ್ಲಿ 15 ಲಕ್ಷ ವೆಚ್ಚದ ಉದ್ಯಾನವನ ಉದ್ಘಾಟಿಸಲಾಗಿದೆ ಎಂದರು ಪಟ್ಟಣದಲ್ಲಿ 124 ಕೋಟಿ ವೆಚ್ಚದ ಯುಜಿಡಿ ಕಾಮಗಾರಿ ಮಂಜೂರಾಗಿದ್ದು ಟೆಂಡರ್ ಪ್ರಕ್ರಿಯೆ ನಡೆದಿದೆ 50 ಲಕ್ಷ ವೆಚ್ಚದ ಪಂಪ ಸ್ಮಾರಕ ಭವನದ ನಿರ್ಮಾಣವನ್ನು ಸದ್ಯದಲ್ಲಿ ಪ್ರಾರಂಭಿಸಲಾಗುವುದು ಎಂದು ಹೇಳಿದರು.

ಮಂಗಳವಾರ ನಡೆದ ಪುರಸಭೆ ಸಾಮಾನ್ಯ ಸಭೆಯಲ್ಲಿ 14 ವಿಷಗಳ ಬಗ್ಗೆ ಚರ್ಚೆ ನಡೆಯಿತು ಅದರಲ್ಲಿ 13 ವಿಷಯಗಳು ಸಾಮಾನ್ಯ ಸಭೆಯ ಅನುಮೋದನೆ ಪಡೆದುಕೊಂಡವು ಸದಸ್ಯರಾದ ಶ್ರೀಮತಿ ವೀಣಾ ಸಾತಪ್ಪ ಭೋವಿ ಅವರು ಸಲ್ಲಿಸಿದ ಅರ್ಜಿ ವಿಚಾರವಾಗಿ ಡಿಎಸ್ಎಸ್ ನಗರದಲ್ಲಿ ಅಂಗನವಾಡಿ ನಿರ್ಮಾಣ ಹಾಗೂ ಅಂಬೇಡ್ಕರ್



ಭವನ ನಿರ್ಮಾಣಕ್ಕೆ ಜಾಗ ಕ್ಕೆ ಅನುಮೋದನೆ ದೊರೆಯಲಿಲ್ಲ.

ಪುರಸಭೆ ಅಧ್ಯಕ್ಷ ಶಿವಾನಂದ ಬೆಳಹಾರ್ ಉಪಾಧ್ಯಕ್ಷ ನಾಗರಾಜ್ ದಳವಾಯಿ ಸ್ಥಾಯಿ ಸಮಿತಿ ಅಧ್ಯಕ್ಷ ತಿಪ್ಪಣ್ಣ ಕೊರುವರು ಪುರಸಭೆ ಮುಖ್ಯ ಅಧಿಕಾರಿ ವೈಜಿ ಗದ್ದಿಗೌಡ್ರು ಪುರಸಭೆಯ ಎಲ್ಲಾ ಸದಸ್ಯರು ಅಧಿಕಾರಿಗಳು ಉಪಸ್ಥಿತರಿದ್ದರು

# ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ 231 ಜನರಿಗೆ ದಂಡ, 24 ಪ್ರಕರಣ ದಾಖಲು

■ ಕನ್ನಡ ಮಾತೃ ಭೂಮಿ ವಾರ್ತೆ

**ಬೆಂಗಳೂರು,** ಸಾರ್ವಜನಿಕ ಸ್ಥಳಗಳ ಲ್ಲಿ ಧೂಮಪಾನ ಮಾಡುವ ಮೂಲಕ ನಿಯ ಮ ಉಲ್ಲಂಘಿಸುವವರಿಗೆ ಬೆಂಗಳೂರು ಉತ್ತ ರ ವಿಭಾಗದ ಪೊಲೀಸರು ಬಿಸಿ ಮುಟ್ಟಿಸಿ ದ್ದಾರೆ. ಇಂದು ಮುಂಜಾನೆಯಿಂದಲೇ ಉತ್ತರ ವಿಭಾಗದ ವಿವಿಧ ಠಾಣೆಗಳ ವ್ಯಾಪ್ತಿಯಲ್ಲಿ ವಿಶೇಷ ಕಾರ್ಯಾಚರಣೆ ನಡೆಸಿರುವ ಪೊಲೀಸರು, ಒಟ್ಟು 231 ಜನರಿಗೆ ದಂಡ ವಿಧಿಸಿ, 24 ಪ್ರಕರಣಗಳನ್ನು ದಾಖಲಿಸಿಕೊಂಡಿದ್ದಾರೆ. ಉತ್ತರ ವಿಭಾಗದ ಡಿಸಿಪಿ ಬಿ.ಎಸ್. ನೇಮಗೌಡ ಅವರ ನೇತೃತ್ವದಲ್ಲಿ ಉತ್ತರ ವಿಭಾಗದ ಒಟ್ಟು 13 ಪೊಲೀಸ್ ಠಾಣಾ ವ್ಯಾಪ್ತಿ ಗಳಲ್ಲಿ ಸಿಬ್ಬಂದಿ ಒಟ್ಟಾಗಿ ದಾಳಿ ನಡೆಸಿದ್ದಾರೆ.ಸಾರ್ವಜನಿಕ ಸ್ಥಳದಲ್ಲಿ ಧೂಮಪಾನ ಮಾಡುತ್ತಿದ್ದ 231 ಜನರಿಗೆ ಸ್ಥಳದಲ್ಲೇ ದಂಡ ವಿಧಿಸಲಾಗಿದೆ. ಅಂಗಡಿಗಳ ಪ್ರವೇಶ ದ್ವಾರದಲ್ಲಿ ನಿಯಮ ಬಾಹಿರವಾಗಿ ಸಿಗರೇಟು, ಬೀಡಿಗಳ ಜಾಹೀರಾತು ಹಾಕಿದ್ದವರ ವಿರುದ್ಧ ಕೋಟ್ಪಾ ಕಾಯ್ದೆ ಉಲ್ಲಂಘನೆಯ ಆರೋಪದಡಿ 24 ಪ್ರಕರಣ ದಾಖಲಿಸಿಕೊಳ್ಳಲಾಗಿದೆ. ಇದರೊಂದಿಗೆ ಹೆಚ್ಚುವರಿಯಾಗಿ 34 ಲಘು ಪ್ರಕರಣಗಳನ್ನು ಕೂಡ ದಾಖಲಿಸಿಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.



# ಸ್ವಸ್ಥ ಭಾರತ ನಿರ್ಮಾಣಕ್ಕೆ ಪರಿಸರ ಪೂರಕ ಬದುಕು ಅಗತ್ಯ: ಬಿಜೆಪಿ ಮಹಿಳಾ ಮೋರ್ಚಾ ಅಭಿಯಾನ



■ ಕನ್ನಡ ಮಾತೃ ಭೂಮಿ ವಾರ್ತೆ

**ಮಸ್ಕಿ,** ಪಟ್ಟಣದ ಶ್ರೀ ವೆಂಕಟೇಶ್ವರ ದೇವಸ್ಥಾನದ ಆವರಣದಲ್ಲಿ ಮಂಗಳವಾರ ನಾರಿ ಶಕ್ತಿ ಫೋರಂ ಅಡಿಯಲ್ಲಿ 'ಆರೋಗ್ಯಕರ ಭಾರತ,ಆತ್ಮನಿರ್ಭರ ಭಾರತ' ಹಾಗೂ ಪರಿಸರ ಸ್ನೇಹಿ ಜೀವನಶೈಲಿ ಅಳವಡಿಸಿಕೊಳ್ಳುವ ಕುರಿತು ಜಾಗೃತಿ ಕಾರ್ಯಕ್ರಮ ಜರುಗಿತು.

ಮಸ್ಕಿ ಬಿಜೆಪಿ ಮಹಿಳಾ ಮೋರ್ಚಾ ಹಮ್ಮಿಕೊಂಡಿದ್ದ ಈ ಕಾರ್ಯಕ್ರಮದಲ್ಲಿ ಸಾರ್ವಜನಿಕರು ಖಾದ್ಯ ತೈಲದ (ಎಣ್ಣೆ) ಬಳಕೆಯನ್ನು ಕಡಿಮೆ ಮಾಡಿ ಆರೋಗ್ಯ ರಕ್ಷಿಸಿಕೊಳ್ಳುವಂತೆ ಕರೆ ನೀಡಲಾಯಿತು.

ಮಾಜಿ ಶಾಸಕ ಪ್ರತಾಪಗೌಡ ಪಾಟೀಲ್ ಅವರು ಗಿಡಕ್ಕೆ ನೀರು ಹಾಕುವ ಮೂಲಕ ಅತ್ಯಂತ ಅರ್ಥಪೂರ್ಣವಾಗಿ ಕಾರ್ಯಕ್ರಮವನ್ನು ಉದ್ಘಾಟಿಸಿ ನಂತರ ಮಾತನಾಡಿದ ಅವರು,ಪ್ರಧಾನಿ ನರೇಂದ್ರ ಮೋದಿಯವರ ಆತ್ಮನಿರ್ಭರ ಭಾರತದ ಕನಸನ್ನು ನನಸು ಮಾಡಲು ಪ್ರತಿಯೊಂದು ಕುಟುಂಬವೂ ಆರೋಗ್ಯಕರ ಮತ್ತು ಪರಿಸರ ಸ್ನೇಹಿ ಜೀವನಶೈಲಿಯನ್ನು ರೂಢಿಸಿಕೊಳ್ಳಬೇಕು ಎಂದರು.

ಅಡುಗೆಯಲ್ಲಿ ಎಣ್ಣೆಯ ಬಳಕೆಯನ್ನು ಮಿತಿಗೊಳಿಸುವುದರಿಂದ ದೈಹಿಕ ಆರೋಗ್ಯ ಸುಧಾರಿಸುತ್ತದೆ ಎಂದು ಅವರು ಸಾರ್ವಜನಿಕರಲ್ಲಿ ಮನವಿ ಮಾಡಿದರು. ಕುಟುಂಬದ ಸ್ವಾಸ್ಥ್ಯವನ್ನು ಕಾಯುವಲ್ಲಿ ಮಹಿಳೆಯರ ಪಾತ್ರ ದೊಡ್ಡದಾಗಿದ್ದು,ಬಿಜೆಪಿ ಮಹಿಳಾ ಮೋರ್ಚಾ ಹಮ್ಮಿಕೊಂಡಿರುವ ಈ ಸಮಾಜಮುಖಿ ಜಾಗೃತಿ ಅಭಿಯಾನ ಶ್ಲಾಘನೀಯ ಎಂದು ಪ್ರತಾಪಗೌಡ ಪಾಟೀಲ್ ಪ್ರಶಂಸಿಸಿದರು. ಈ ವೇಳೆ ಬಿಜೆಪಿ ಪಕ್ಷದ ಪ್ರಮುಖ ಮುಖಂಡರು,ಹಾಗೂ ಮಹಿಳಾ ಮೋರ್ಚಾದ ಪ್ರಮುಖ ಪದಾಧಿಕಾರಿಗಳು,ಸ್ಥಳೀಯ ಮುಖಂಡರು ಹಾಗೂ ನಾರಿ ಶಕ್ತಿ ಫೋರಂನ ಸದಸ್ಯರು ಉಪಸ್ಥಿತರಿದ್ದರು.

## ಕಲ್ಯಾಣ ಕರ್ನಾಟಕದ ರಸ್ತೆ ಮೂಲಸೌಕರ್ಯ ಅಭಿವೃದ್ಧಿಗೆ ವೇಗ

# ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಅಧ್ಯಕ್ಷರಿಗೆ ಕುಮಾರ ನಾಯಕ ಭೇಟಿ ಯೋಜನೆಗಳ ಪ್ರಗತಿ ಕುರಿತು ಚರ್ಚೆ

■ ಕನ್ನಡ ಮಾತೃ ಭೂಮಿ ವಾರ್ತೆ

**ನವದೆಹಲಿ,**ಕಲ್ಯಾಣ ಕರ್ನಾಟಕ ಭಾಗದ ಸಮಗ್ರ ಅಭಿವೃದ್ಧಿಗೆ ಪೂರಕವಾಗುವ ರಸ್ತೆ ಮೂಲಸೌಕರ್ಯ ವ್ಯವಸ್ಥೆಯನ್ನು ಮತ್ತಷ್ಟು ಬಲಿಷ್ಠಗೊಳಿಸುವನಿಟ್ಟಿನಲ್ಲಿ ರಾಯಚೂರು-ಯಾದಗಿರಿ ಲೋಕಸಭಾ ಕ್ಷೇತ್ರದ ಸಂಸದ ಜಿ. ಕುಮಾರ ನಾಯಕ ಅವರು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ (ಘೆಏಅಐ) ಉನ್ನತಅಧಿಕಾರಿಗಳೊಂದಿಗೆ ಮಹತ್ವದ ಸಭೆ ನಡೆಸಿ, ವಿವಿಧ ರಾಷ್ಟ್ರೀಯ ಹೆದ್ದಾರಿ ಯೋಜನೆಗಳ ಪ್ರಗತಿ ಕುರಿತು ಸವಿಸ್ತಾರವಾಗಿ ಚರ್ಚಿಸಿದರು.

ನವದೆಹಲಿಯಲ್ಲಿನಡೆದಸಭೆಯಲ್ಲಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧ್ಯಕ್ಷ ಸಂತೋಷ್ ಯಾದಿವ್ ಹಾಗೂ ಯೋಜನೆಗಳ ಸದಸ್ಯ ಅನಿಲ್ ಚೌಧರಿ ಅವರನ್ನು ಭೇಟಿ ಮಾಡಿದ ಸಂಸದರು, ಕಲ್ಯಾಣ ಕರ್ನಾಟಕದ ಪ್ರಮುಖ ಸಂಪರ್ಕ ಮಾರ್ಗಗಳ ಅಭಿವೃದ್ಧಿ, ರಸ್ತೆ ಅಗಲೀಕರಣ, ಕಾಮಗಾರಿಗಳ ವೇಗವರ್ಧನೆಹಾಗೂಸಾರ್ವಜನಿಕರಿಗೆ ಗುಣಮಟ್ಟದ ಸಾರಿಗೆ ವ್ಯವಸ್ಥೆ ಕಲ್ಪಿಸುವ ಕುರಿತು ಹಲವು ಮಹತ್ವದ ವಿಷಯಗಳನ್ನು ಪ್ರಸ್ತಾಪಿಸಿದರು.

ಸಭೆಯಲ್ಲಿ ರಾಯಚೂರು-ಯಾದಗಿರಿ ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸಾಗುವ ಪ್ರಮುಖ ರಾಷ್ಟ್ರೀಯ ಹೆದ್ದಾರಿ ಯೋಜನೆಗಳಾದ ಘೆಏ-150ಅ ಹೆದ್ದಾರಿಯ ಎರಡು ಪ್ಯಾಕೇಜ್‌ಗಳು, ಓಊ-748ರ ಮೂರು ಪ್ಯಾಕೇಜ್‌ಗಳು, ಹೊಸದಾಗಿ ಪ್ರಸ್ತಾಪಿಸಲಾದ ಘೆಏ-167 ಮಾರ್ಗ ಹಾಗೂ ಘೆಏ-150ಅರಸ್ತೆ ಅಗಲೀಕರಣ ಯೋಜನೆಗಳ ಪ್ರಗತಿ ಸ್ಥಿತಿಗತಿ ಕುರಿತು ಸಮಗ್ರ ಪರಿಶೀಲನೆ ನಡೆಸಲಾಯಿತು.

ಈ ಸಂದರ್ಭದಲ್ಲಿ ಹೆದ್ದಾರಿ ಕಾಮಗಾರಿಗಳ ಅನುಷ್ಠಾನದಲ್ಲಿ ಎದುರಾಗುತ್ತಿರುವ ತಾಂತ್ರಿಕ ಸಮಸ್ಯೆಗಳು,ಭೂಸ್ವಾಧೀನ ಪ್ರಕ್ರಿಯೆಯ ಪ್ರಗತಿ, ಅಗತ್ಯ ಅನುಮೋದನೆಗಳ ವೇಗ, ಕಾಮಗಾರಿಗಳ ಗುಣಮಟ್ಟ ಹಾಗೂ ನಿಗದಿತ



ಅವಧಿಯಲ್ಲಿ ಯೋಜನೆಗಳನ್ನು ಪೂರ್ಣಗೊಳಿಸುವ ಕುರಿತು ಅಧಿಕಾರಿಗಳೊಂದಿಗೆ ಗಂಭೀರ ಚರ್ಚೆ ನಡೆಸಲಾಯಿತು.

ಅಲ್ಲದೆ, ವಾಹನ ಸಂಚಾರದ ಹೆಚ್ಚಳಕ್ಕೆ ಅನುಗುಣವಾಗಿ ಅಗತ್ಯವಿರುವ ಕಡೆಗಳಲ್ಲಿ ಬೈಪಾಸ್ ರಸ್ತೆನಿರ್ಮಾಣ, ಸರ್ವಿಸ್ ರಸ್ತೆ ಅಭಿವೃದ್ಧಿ,ಅಪಘಾತ ಪ್ರಮಾಣ ಕಡಿಮೆ ಮಾಡಲು ವೈಜ್ಞಾನಿಕ ಸುರಕ್ಷತಾ ಕ್ರಮಗಳ ಅಳವಡಿಕೆ ಹಾಗೂ ಪ್ರಯಾಣಿಕರ ಅನುಕೂಲಕ್ಕಾಗಿ ಆಧುನಿಕ ರಸ್ತೆ ಸೌಲಭ್ಯಗಳನ್ನು ಕಲ್ಪಿಸುವ ಅಗತ್ಯದ ಬಗ್ಗೆ ಸಂಸದರು ಒತ್ತಿ ಹೇಳಿದರು.

ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಉತ್ತಮ ರಸ್ತೆ ಸಂಪರ್ಕವೇ ಪ್ರಮುಖ ಆಧಾರ. ಗುಣಮಟ್ಟದ ಹೆದ್ದಾರಿ ಜಾಲ ನಿರ್ಮಾಣವಾದರೆ ಈ ಭಾಗದ ಕೃಷಿ, ಕೈಗಾರಿಕೆ, ವ್ಯಾಪಾರ, ಶಿಕ್ಷಣ, ಆರೋಗ್ಯಸೇರಿದಂತೆ ಎಲ್ಲ ಕ್ಷೇತ್ರಗಳಲ್ಲೂ ಹೊಸ ಅಭಿವೃದ್ಧಿಯ ಅವಕಾಶಗಳು ಸೃಷ್ಟಿಯಾಗಲಿವೆ ಎಂದು ಸಂಸದ ಜಿ. ಕುಮಾರ ನಾಯಕ ಹೇಳಿದರು.

ರಸ್ತೆ ಸಂಪರ್ಕ ವ್ಯವಸ್ಥೆಯ ಸುಧಾರಣೆಯಿಂದ ರೈತರು ತಮ್ಮ ರುಕಟ್ಟೆಗೆ ಉತ್ಪನ್ನಗಳನ್ನು ಮಾರುಕಟ್ಟೆಗೆ ತಲುಪಿಸಲು ಅನುಕೂಲವಾಗುವುದರ ಜೊತೆಗೆ ಕೈಗಾರಿಕೆಗಳ ಸ್ಥಾಪನೆ, ಹೂಡಿಕೆ ಆಕರ್ಷಣೆ ಹಾಗೂ ಸ್ಥಳೀಯ ಯುವಕರಿಗೆ ಉದ್ಯೋಗ ಸೃಷ್ಟಿಗೂ ಸಹಕಾರಿಯಾಗಲಿದೆ ಎಂದು ಅವರು ತಿಳಿಸಿದರು.


ಕಲ್ಯಾಣ ಕರ್ನಾಟಕವು ಹಲವು ವರ್ಷಗಳಿಂದ ಉತ್ತಮ ಮೂಲಸೌಕರ್ಯಕ್ಕಾಗಿನಿರೀಕ್ಷಿಸುತ್ತಿದ್ದು, ರಾಷ್ಟ್ರೀಯ ಹೆದ್ದಾರಿ ಯೋಜನೆಗಳ ಪೂರ್ಣಗೊಳಿಸುವಿಕೆಯಿಂದ ಈ ಭಾಗದ ಆರ್ಥಿಕ ಚಟುವಟಿಕೆಗಳಿಗೆ ಹೊಸ ಚೈತನ್ಯ ದೊರೆಯಲಿದೆ.ರಾಯಚೂರು-ಯಾದಗಿರಿ ಮಾತ್ರವಲ್ಲದೆ ಇಡೀ ಕಲ್ಯಾಣ ಕರ್ನಾಟಕದ ಸಂಪರ್ಕ ವ್ಯವಸ್ಥೆ ಮತ್ತಷ್ಟುಸುಗಮವಾಗಲಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ಸಭೆಯಲ್ಲಿ ಓಊಂಖ ಅಧ್ಯಕ್ಷ ಸಂತೋಷ್ ಯಾದವ್ ಅವರು ಯೋಜನೆಗಳ ಅನುಷ್ಠಾನಕ್ಕೆ ಅಗತ್ಯ ಸಹಕಾರ ನೀಡುವ ಭರವಸೆ ನೀಡಿದರು. ಸಾರ್ವಜನಿಕರಿಗೆ ಸುರಕ್ಷಿತ ಹಾಗೂ ಗುಣಮಟ್ಟದ ರಸ್ತೆ ಸೌಲಭ್ಯ ಒದಗಿಸುವುದು ಪ್ರಾಧಿಕಾರದ ಪ್ರಮುಖ ಆದ್ಯತೆ-ಯಾಗಿದ್ದು,ಕಾಮಗಾರಿಗಳನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಹೆದ್ದಾರಿಯೋಜನೆಗಳ ಪ್ರಗತಿಯಲ್ಲಿ ಗುಣಮಟ್ಟ, ಪಾರದರ್ಶಕತೆ ಹಾಗೂ ಸಮಯಪಾಲನೆಗೆ ಹೆಚ್ಚಿನ ಆದ್ಯತೆ ನೀಡಲಾಗುವುದು ಎಂದು ಅಧಿಕಾರಿಗಳು ಭರವಸೆ ನೀಡಿದರು.

ಈಯೋಜನೆಗಳು ಪೂರ್ಣಗೊಂಡ ಬಳಿಕ ರಾಯಚೂರು-ಯಾದಗಿರಿ ಕ್ಷೇತ್ರದ ಸಂಪ ರ್ಕ ವ್ಯವಸ್ಥೆಯಲ್ಲಿ ಮಹತ್ವದ ಬದಲಾವಣೆ ಉಂಟಾಗಲಿದ್ದು, ರಸ್ತೆ ಸುರಕ್ಷತೆ ಹೆಚ್ಚುವುದರ ಜೊತೆಗೆ ವ್ಯಾಪಾರ, ಕೈಗಾರಿಕೆಹಾಗೂಆರ್ಥಿಕಬೆಳವಣಿಗೆಗೆ ಹೊಸ ದಿಕ್ಕು ಸಿಗಲಿದೆ ಎಂದು ಸಂಸದ ಜಿ. ಕುಮಾರ ನಾಯಕ ಅಭಿಪ್ರಾಯಪಟ್ಟರು.

# ಅನಾಮಧೇಯ ವೃದ್ಧೆಯಾಗಿ ಸಿಕ್ಕಿದ್ದ ತಾಯಿಯನ್ನು ರಕ್ಷಿಸಿ ಅವರ ಕುಟುಂಬಕ್ಕೆ ಒಪ್ಪಿಸಿದ ಕಾರುಣ್ಯಾಶ್ರಮ




■ ಕನ್ನಡ ಮಾತೃ ಭೂಮಿ ವಾರ್ತೆ

**ಸಿಂಧನೂರು,**ಸಿಂಧನೂರು ತಾಲೂಕಿನ ಜವಳಗೇರಾ ಸಾರ್ವಜನಿಕ ಆಸ್ಪತ್ರೆಯಲ್ಲಿ ಅನಾಮಧೇಯ ವೃದ್ದೆಯಾಗಿ ಇದ್ದ ಅಂಬಮ್ಮ ವಯಸ್ಸು-78 ಸಾ. ಅರಳಹಳ್ಳಿ ಇವರನ್ನು ದಿನಾಂಕ 26-05-2026 ರಂದು ಆಸ್ಪತ್ರೆಯ ಸಿಬ್ಬಂದಿಗಳ ಮಾಹಿತಿ ಮೇರೆಗೆ ನಗರದ ಒಳಬಳ್ಳಾರಿ ರಸ್ತೆಯಲ್ಲಿರುವ ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮಕ್ಕೆ ಕರೆತಂದು ಆಶ್ರಯ ಕಲ್ಪಿಸಿಕೊಡಲಾಗಿತ್ತು.

ಆಶ್ರಮದ ಸಿಬ್ಬಂದಿಗಳು ಈ ತಾಯಿಯ ಕುಟುಂಬವನ್ನು ಪತ್ತೆ ಹಚ್ಚಿ ಮಗ ಹಾಗೂ ಮಗಳಿಗೆ ಬುದ್ಧಿ ಹೇಳಿ ಮರಳಿ ಅವರ ಕುಟುಂಬಕ್ಕೆ ಒಪ್ಪಿಸಿದ ಘಟನೆ ನಡೆದಿದೆ.

ಈ ಸಂದರ್ಭದಲ್ಲಿ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸವ ಸ್ವಾಮಿ ಹಿರೇಮಠ ಮಾತನಾಡಿ ವಿವಿಧ ಕಡೆ ನಿರ್ಗತಿಕರು ನಿರಾಶ್ರಿತರ ಮಾಹಿತಿಯನ್ನು ಕೊಟ್ಟಾಗ ನಾವು ಅವರನ್ನು ಕರೆತಂದು ತಾತ್ಕಾಲಿಕ ಆಸೆಯ ಕಲ್ಪಿಸುತ್ತೇವೆ. ನಂತರ ಅವರ ಸಂಪೂರ್ಣ ವಿಳಾಸ ಹಾಗೂ ಅವರ ಬದುಕಿನ ಸ್ಥಿತಿಯನ್ನು ತಿಳಿದುಕೊಂಡು ಸಂಬಂಧಪಟ್ಟವರಿಗೆ ಸಂಪರ್ಕಿಸಿ ಅವರಿಗೆ ಬುದ್ಧಿ ಹೇಳಿ ಅವರವರ ಮನೆಗೆ ಕಳುಹಿಸುವ ಕಾರ್ಯ ನಿರಂತರವಾಗಿ ನಡೆಯುತ್ತಿದೆ. ಆಶ್ರಮ ಹುಟ್ಟಿದಾಗಿನಿಂದಲೂ ಸಹ ಸುಮಾರು 90ಕ್ಕೂ ಹೆಚ್ಚು ಜನರನ್ನು ಮಕ್ಕಳೊಂದಿಗೆ ಮತ್ತು ಸಂಬಂಧಿಗಳೊಂದಿಗೆ ಸೇರಿಸಿರುತ್ತೇವೆ.

ನಮ್ಮ ಉದ್ದೇಶ ಇಷ್ಟೆ ನಿಜವಾದ ಅನಾಥರಿಗೆ ನೊಂದ ಜೀವಿಗಳಿಗೆ ಆಶ್ರಯ ನೀಡುತ್ತಿದ್ದೇವೆ. ನಿಜವಾದ ಅನಾಥರ ಅನಿವಾರ್ಯಕ್ಕಾಗಿ ಹುಟ್ಟಿಕೊಂಡಿರುವ ಕಾರುಣ್ಯ ಆಶ್ರಮ ಸಾರ್ವಜನಿಕರಲ್ಲಿಯೂ ಕೂಡ ಹಲವಾರು ಅಭಿಯಾನಗಳ ಮೂಲಕ ನಿಮ್ಮ ಹೆತ್ತವರನ್ನು ದಯಮಾಡಿ ನಮ್ಮಂತಹ ವೃದ್ಧಾಶ್ರಮಕ್ಕೆ ತಳ್ಳಬೇಡಿ ಎನ್ನುವ ಸಂಕಲ್ಪದ ಹಲವಾರು ಕಾರ್ಯಕ್ರಮಗಳನ್ನು ರೂಪಿಸುತ್ತಾ ಬಂದಿದೆ.

ಎಲ್ಲಾ ಕಾರ್ಯಗಳಿಗೆ ದಾನಿಗಳೇ ದೇವರಾಗಿ ಕಾರುಣ್ಯ ಸಂಸ್ಥೆಯ ನಿರ್ವಹಣೆಯನ್ನು ಮಾಡುತ್ತಿದ್ದಾರೆ.

ಈ ತಾಯಿಯು ಮೂಲತ ಸಿಂಧನೂರು ತಾಲೂಕಿನ ಅರಳಹಳ್ಳಿ ಗ್ರಾಮದ ಸಿದ್ದಪ್ಪ ಹಾಗೂ ಶರಣಮ್ಮ ಎನ್ನುವರ ಜನ್ಮದಾತೆಯಾಗಿದ್ದು.

ಇಬ್ಬರು ಮಕ್ಕಳಿಗೂ ಬುದ್ಧಿವಾದ ಹೇಳುವ ಮೂಲಕ ಪುನಃ ಕುಟುಂಬಕ್ಕೆ ಸೇರಿಸಿರುವುದು ನಮಗೆ ಆತ್ಮ ತೃಪ್ತಿ ತಂದಿದೆ

ಮುಂದಿನ ದಿನಮಾನಗಳಲ್ಲಿ ನಿಮ್ಮ ತಾಯಿಯನ್ನು ಸರಿಯಾಗಿ ನೋಡಿಕೊಳ್ಳಬೇಕು ಎನ್ನುವ ಎಚ್ಚರದ ಸಂದೇಶಗಳೊಂದಿಗೆ ಅಂಬಮ್ಮಳನ್ನು ಅವರ ಕುಟುಂಬಕ್ಕೆ ಒಪ್ಪಿಸಿದರು.

ಈ ಸಂದರ್ಭದಲ್ಲಿ ಅವರ ಮಕ್ಕಳಾದ ಗಿಡ್ಡಪ್ಪ. ಶರಣಮ್ಮ ಗಂ.ತಿಪ್ಪಣ್ಣ. ಸಾಕ್ಷಿದಾರರಾದ ಈರಪ್ಪ ತಾಯಿ ಹುಸೇನಮ್ಮ. ಮತ್ತು ಆಶ್ರಮದ ಸಿಬ್ಬಂದಿಗಳಾದ ಸುಜಾತ ಮಲದಗುಡ್ಡ. ಸಿದ್ದಯ್ಯ ಸ್ವಾಮಿ. ಮರಿಯಪ್ಪ ಜ್ಯೋತಿ ಅನೇಕರು ಉಪಸ್ಥಿತರಿದ್ದರು.

# ಅಜ್ಜನ ಸ್ವಯಾರ್ಜಿತ ಆಸ್ತಿಯಲ್ಲಿ ಮೊಮ್ಮಗಳು ಪಾಲುದಾರರಾಗಲು ಅವಕಾಶವಿಲ್ಲ: ಹೈಕೋರ್ಟ್


■ ಕನ್ನಡ ಮಾತೃ ಭೂಮಿ ವಾರ್ತೆ

**ಬೆಂಗಳೂರು,**ತಾತನು ತನ್ನ ಜೀವಿತಾವಧಿಯಲ್ಲಿ ಸ್ವಂತವಾಗಿ ಸಂಪಾದಿಸಿದ ಆಸ್ತಿಯು ವಿಭಜನೆಯ ನಂತರ ತಂದೆಯ ಕೈಸೇರಿದರೂ, ಅದು ತಂದೆಯ ವೈಯಕ್ತಿಕ ಆಸ್ತಿಯಾಗುತ್ತದೆಯೇ ವಿನಃ ಹಿಂದೂ ಅವಿಭಕ್ತ ಕುಟುಂಬದ ಆಸ್ತಿಯಾಗುವುದಿಲ್ಲ ಎಂದು ತಿಳಿಸಿರುವ ಹೈಕೋರ್ಟ್, ಈ ರೀತಿಯಲ್ಲಿ ವಿಭಜನೆಯಾದ ಆಸ್ತಿಯಲ್ಲಿ ಮೊಮ್ಮಗಳು ಪಾಲು ಕೇಳುವುದಕ್ಕೆ ಅವಕಾಶವಿಲ್ಲ ಎಂದು ತಿಳಿಸಿದೆ.

ಅಮೆರಿಕದಲ್ಲಿ ನೆಲೆಸಿರುವ ಉಷಾ ಎನ್ ಸ್ವಾಮಿ ಎಂಬುವರು ಸಲ್ಲಿಸಿದ್ದ ಮೇಲ್ಮನವಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಡಿ. ಕೆ. ಸಿಂಗ್ ಮತ್ತು ನ್ಯಾಯಮೂರ್ತಿ ಟಿ. ಎಂ. ನದಾಫ್ ಅವರಿದ್ದ ವಿಭಾಗೀಯ ಪೀಠ ಈ ಆದೇಶ ನೀಡಿದೆ.

ಅರ್ಜಿದಾರರಾದ ಉಷಾ ಅವರು ಉಲ್ಲೇಖಿಸಿರುವ ಆಸ್ತಿಗಳನ್ನು ಆಕೆಯ ತಾತ, ಅಂದರೆ ತಂದೆಯ ತಂದೆ ಸ್ವಂತವಾಗಿ ಸಂಪಾದಿಸಿದ್ದರು ಎಂಬುದು ದಾಖಲೆಗಳಿಂದ ಗೊತ್ತಾಗಲಿದೆ. ಈ ಆಸ್ತಿಯನ್ನು ಅವರ ತಾತ, ಅವರ ಮಕ್ಕಳಿಗೆ ಕೌಟುಂಬಿಕ ಒಪ್ಪಂದದ ಮೂಲಕ ಆಸ್ತಿ ಹಂಚಿಕೆ ಮಾಡಿದ್ದಾರೆ. ತಾತನ ಸ್ವಯಾರ್ಜಿತ ಆಸ್ತಿ ಭಾಗವಾಗಿ ತಂದೆಗೆ ಬಂದಾಗ, ಅದು ಆ ತಂದೆಯ ವೈಯಕ್ತಿಕ ಆಸ್ತಿಯಾಗುತ್ತದೆ. ಆದರೆ, ಪಿತ್ರಾರ್ಜಿತ ಆಸ್ತಿಯಾಗುವುದಿಲ್ಲ ಎಂದು ತಿಳಿಸಿದೆ.

ಮಿತಾಕ್ಷರ ಕಾನೂನಿನ ಪ್ರಕಾರ, ತಂದೆಗೆ ತನ್ನ ಸ್ವಯಾ ರ್ಜಿತ ಆಸ್ತಿಯನ್ನು ಯಾರಿಗಾದರೂ ವಿಲೇವಾರಿ ಮಾಡುವ ಸಂಪೂರ್ಣ ಹಕ್ಕಿರುತ್ತದೆ. ಈ ಆಸ್ತಿಗಳು ಹಿಂದೂ ಅವಿಭಕ್ತ ಕುಟುಂಬದ ಆಸ್ತಿಗಳಾಗಿದ್ದವು ಎಂಬುದನ್ನು ಸಾಬೀತುಪಡಿಸಲು ಮೇಲ್ಮನವಿದಾರರು



ಸಾಕ್ಷ್ಯಗಳನ್ನು ಒದಗಿಸಿಲ್ಲ. ಆದ್ದರಿಂದ ಅರ್ಜಿದಾರರಿಗೆ ಈ ಆಸ್ತಿಗಳಲ್ಲಿ ಯಾವುದೇ ಕಾನೂನಾತ್ಮಕ ಹಕ್ಕು ಇರುವುದಿಲ್ಲ ಎಂದು ಎಂದು ನ್ಯಾಯಪೀಠ ತಿಳಿಸಿದೆ.

ಅಲ್ಲದೆ, ಅರ್ಜಿದಾರರು ಪಿತ್ರಾರ್ಜಿತ ಆಸ್ತಿಯಾಗಿದೆ ಎಂಬುದನ್ನು ಸಾಬೀತುಪಡಿಸಲು ವಿಫಲಳಾಗಿದ್ದಾರೆ. ಆದ್ದರಿಂದ ಈ ಆಸ್ತಿಯಲ್ಲಿನ ಹಕ್ಕುಗಳಲ್ಲಿ ಭಾಗ ಪಡೆಯಲು ಅರ್ಹಳಾಗುವುದಿಲ್ಲ. ತಾತನ ಸ್ವಯಂ ಸಂಪಾದಿತ ಆಸ್ತಿಗಳನ್ನು ಜಂಟಿ ಕುಟುಂಬದ ಆಸ್ತಿಗಳೆಂದು ಹೇಳಿ, ತಾನು ಭಾಗ ಪಡೆಯಬಹುದು ಎಂದು ವಾದಿಸಲು ಸಾಧ್ಯವಿಲ್ಲ. ಆದ್ದರಿಂದ ವಿಚಾರಣಾ ನ್ಯಾಯಾಲಯದ ಆದೇಶದಲ್ಲಿ ಯಾವುದೇ ದೋಷವಿಲ್ಲ ಎಂದು ತಿಳಿಸಿ ಮೇಲ್ಮನವಿಯನ್ನು ವಜಾಗೊಳಿಸಿ ಆದೇಶಿಸಿದೆ.

ಪ್ರಕರಣದ ಹಿನ್ನೆಲೆ: ಅರ್ಜಿದಾರರಾದ ಉಷಾ ಎನ್ ಸ್ವಾಮಿ ಅವರು 1979ರಲ್ಲಿ ವೈದ್ಯರಾಗಿರುವ ಜವರಯ್ಯ ಎನ್ ಸ್ವಾಮಿ ಎಂಬುವರನ್ನು ವಿವಾಹವಾಗಿದ್ದರು. ವಿವಾಹದ ಬಳಿಕ ತನ್ನ ಪತಿಯೊಂದಿಗೆ ಅಮೆರಿಕದಲ್ಲಿ ವಾಸಿಸುತ್ತಿದ್ದರು.

ಈ ನಡುವೆ ಅರ್ಜಿದಾರರ ಗಮನಕ್ಕೆ ಬಾರದೆ ಕುಟುಂಬಕ್ಕೆ ಸೇರಿದ 10 ಎಕರೆ ಜಮೀನನ್ನು ಪೋಷಕರು ಮಾರಾಟ ಮಾಡಿದ್ದಾರೆ. ತಂದೆಗೆ ಸೇರಿದ ಪಿತ್ರಾರ್ಜಿತ ಆಸ್ತಿಯಲ್ಲಿ ಕಲ್ಲು ಗಣಿಗಾರಿಕೆ ನಡೆಸಿ ಲಾಭ ಗಳಿಸಿದ್ದಾರೆ. ಈ ಲಾಭಾಂಶದ ಹಣದಲ್ಲಿ ಇತರೆ ಆಸ್ತಿಗಳನ್ನು ಗಳಿಸಿದ್ದಾರೆ.

ಈ ಮೂಲ ಆಸ್ತಿಗಳು ಪೂರ್ವಜರಿಂದ ಬಂದ ಜಂಟಿ ಕುಟುಂಬದ ಆಸ್ತಿಗಳಾಗಿದ್ದು, ತಮಗೆ ಪಾಲು ಸಿಗಬೇಕು. ಈ ಎಲ್ಲ ಆಸ್ತಿಗಳು ಮತ್ತು ಬ್ಯಾಂಕ್ ಠೇವಣಿಯಲ್ಲಿಯೂ ತಾನೂ ಭಾಗ ಪಡೆಯುವುದಕ್ಕೆ ಅಧಿಕಾರವಿದೆ. ಆದ್ದರಿಂದ ಆಸ್ತಿಯಲ್ಲಿ ತನಗೆ ಭಾಗ ನೀಡಲು ನಿರ್ದೇಶನ ನೀಡಬೇಕು ಎಂದು ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದರು.

ಅರ್ಜಿಯ ವಿಚಾರಣೆ ನಡೆಸಿದ್ದ ವಿಚಾರಣಾ ನ್ಯಾಯಾಲಯ ಅರ್ಜಿಯನ್ನು ವಜಾಗೊಳಿಸಿತ್ತು. ಇದನ್ನು ಪ್ರಶ್ನಿಸಿ ಉಷಾ ಅವರು ಹೈಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸಿದ್ದರು.

ಅರ್ಜಿಗೆ ಆಕ್ಷೇಪಿಸಿದ್ದ ಪೋಷಕರು, ಅರ್ಜಿದಾರರು ತಿಳಿಸಿರುವ ಆಸ್ತಿಗಳು ಪೂರ್ವಜರಿಂದ ಬಂದಿಲ್ಲ. ಅಲ್ಲದೆ, ಹಿಂದೂ ಅವಿಭಜಿತ ಕುಟುಂಬಕ್ಕೆ ಸೇರಿದ ಆಸ್ತಿಯಲ್ಲ. ಆದ್ದರಿಂದ ಅರ್ಜಿಯನ್ನು ವಜಾಗೊಳಿಸಬೇಕು ಎಂದು ಕೋರಿದ್ದರು.

# ಆರ್‌ಎಸ್‌ಎಸ್ ಲೆಕ್ಕ ಕೇಳಲು ಪ್ರಿಯಾಂಕ್ ಖರ್ಗೆ ಯಾರು? -ಕೆ.ಎಸ್.ಈಶ್ವರಪ್ಪ



■ ಕನ್ನಡ ಮಾತೃ ಭೂಮಿ ವಾರ್ತೆ

**ಶಿವಮೊಗ್ಗ,**ಕಾನೂನು ಜ್ಞಾನ ಇಲ್ಲದ ಗೃಹಮಂತ್ರಿ ಕರ್ನಾಟಕದಲ್ಲಿದ್ದಾರೆ. ಆರ್‌ಎಸ್‌ಎಸ್ ಲೆಕ್ಕ ಕೇಳಲು ಪ್ರಿಯಾಂಕ್ ಖರ್ಗೆ ಯಾರು ಎಂದು ಮಾಜಿ ಡಿಸಿಎಂ ಕೆ.ಎಸ್.ಈಶ್ವರಪ್ಪ ಪ್ರಶ್ನಿಸಿದ್ದಾರೆ.

ಶಿವಮೊಗ್ಗ ಪ್ರೆಸ್ ಟ್ರಸ್ಟ್‌ನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಿಯಾಂಕ್ ಖರ್ಗೆ ಎಂಬ ಕಸವನ್ನು ಸೈಡ್‌ಗೆ ಹಾಕಬೇಕು. ಪ್ರಿಯಾಂಕ್ ಖರ್ಗೆ ಪ್ರಚಾರಕ್ಕೋಸ್ಕರ ಆರ್‌ಎಸ್‌ಎಸ್ ಇಟ್ಟುಕೊಂಡು ಹೊರಟಿದ್ದಾರೆ. ತಾಕತ್ತು ಇದ್ದರೆ ಕಾನೂನು ಕ್ರಮ ತೆಗೆದುಕೊಳ್ಳಿ, ಅದನ್ನು ಬಿಟ್ಟು ಪ್ರಚಾರಕ್ಕಾಗಿ ಹೀಗೆ ಮಾಡುವುದು ಸರಿ ಅಲ್ಲ. ಮಂತ್ರಿಯಾಗಿ ಏನು ಬೇಕಾದರೂ ಕ್ರಮ ತೆಗೆದುಕೊಳ್ಳಬಹುದು. ಅವರು ಕಾನೂನು ಪ್ರಕಾರ ಕ್ರಮ ಕೈಗೊಳ್ಳಲು ಹೋದರೆ ವಿಫಲರಾಗ್ತಾರೆ ಅಂತ ಗೊತ್ತಿದೆ. ಆರ್‌ಎಸ್ ಎಸ್ ಬಗ್ಗೆ ಮಾತಾಡಿದರೆ ಪ್ರಚಾರ ಸಿಗುತ್ತೆ ಅಂತ ಮಾತಾಡುತ್ತಿದ್ದಾರೆ ಎಂದು ಹೇಳಿದರು.

ಆರ್‌ಎಸ್‌ಎಸ್ ಅಂದವರು ಎಲ್ಲಾ ನೆಲಕಚ್ಚಿ ಹೋಗಿದ್ದಾರೆ. ಪ್ರಿಯಾಂಕ್ ಖರ್ಗೆ ಸಹ ನೆಲ ಕಚ್ಚಿ ಹೋಗುತ್ತಾರೆ. ನೀವು ಯಾರು ಲೆಕ್ಕ ಕೇಳೋಕೆ? ನೀವು ಎಷ್ಟು ಕೊಟ್ಟಿದ್ದೀರಿ? ಇವರೊಬ್ಬ ಮಂತ್ರಿಯಾಗಿ ಹೇಳೋಕೆ ಅಧಿಕಾರ ಕೊಟ್ಟವರ್ಯಾರು? ಎಂದು ಏಕ ವಚನದಲ್ಲಿಯೇ ಪ್ರಶ್ನಿಸಿದರು.

ಆರ್‌ಎಸ್‌ಎಸ್‌ನ ಹಿರಿಯರಾದ ಮೋಹನ್ ಭಾಗವತ್ ಅವರು ಈ ಚಿಲ್ಲರೆಗೆ ಉತ್ತರ ಕೊಟ್ಟಿದ್ದಾರೆ. ರಾಜ್ಯದಲ್ಲಿ ಸಾವಿರಾರು ಕಡೆ ಆರ್‌ಎಸ್‌ಎಸ್ ಪಥಸಂಚಲನ ನಡೆಯಿತು. ಸಣ್ಣ ಗಲಾಟೆ ಸಹ ಆಗಲಿಲ್ಲ. ನಿಮ್ಮ ಎದುರಿಗೇನೇ ನಿಮ್ಮ ರಾಜ್ಯಸಭಾ ಸದಸ್ಯರು ಪಾಕಿಸ್ತಾನ ಜಿಂದಾಬಾದ್ ಎಂದರು. ಏನು ಕ್ರಮ ತೆಗೆದುಕೊಂಡಿದ್ದೀರಿ ಎಂದು ಪ್ರಶ್ನಿಸಿದರು.

ಇಂತಹ ಚಿಲ್ಲರೆಗೆ ಉತ್ತರ ಕೊಡಬೇಡಿ ಅಂತ ಮೋಹನ್ ಭಾಗವತ್ ಅವರಿಗೆ ಕೇಳ್ಕೊಳ್ಳುತ್ತೇನೆ. ನಮ್ಮ ದೇಶದಲ್ಲಿ ಭಯೋತ್ಪಾದಕ ಶಕ್ತಿಗಳು ಜಾಸ್ತಿ ಇದೆ. ಹಾಗಾಗಿ ಮೋಹನ್ ಭಾಗವತ್ ಅವರಿಗೆ ಝೆಡ್ ಪ್ಲಸ್ ಭದ್ರತೆ ಕೊಟ್ಟಿದ್ದಾರೆ.

ಇವನ್ಯಾರು ಇವನ್ನೆಲ್ಲ ಕೇಳೋಕೆ ಎಂದರು. ಪ್ರಚಾರಕ್ಕಾಗಿ ಪ್ರಿಯಾಂಕ್ ಖರ್ಗೆ ಹುಚ್ಚು ಹುಚ್ಚು ಹೇಳಿಕೆ ಕೊಡುತ್ತಿದ್ದಾರೆ. ಮೋಹನ್ ಭಾಗವತ್ ಅಮೆರಿಕಾಗೆ ಹೋಗಿರೋದನ್ನ ಕೇಳೋಕೆ ಇವರ ಅಪ್ಪನ ಮನೆಯಿಂದ ಹಣ ಕೊಟ್ಟಿದ್ದಾರಾ? ಎಂದು ಏಕವಚನದಲ್ಲಿ ಪ್ರಶ್ನಿಸಿದರು. ಆರ್‌ಎಸ್‌ಎಸ್ ಬಗ್ಗೆ ಹೀಗೆ ಮಾತನಾಡಿ ದೊಡ್ಡ ಮನುಷ್ಯ ಆಗೋಗೆ ಹೊರಟಿದ್ದಾರೆ. ಕಸದಂತಿರುವ ಇವರಿಗೆ ಉತ್ತರ ಕೊಡಬೇಡಿ. ಕಸದ ಬುಟ್ಟಿಗೆ ತಳ್ಳಿ. ಇಂತಹ ಚಿಲ್ಲರೆ ನಮ್ಮ ಆರ್‌ಎಸ್‌ಎಸ್‌ಬಗ್ಗೆ ಮಾತಾಡುತ್ತಿದ್ದಾರೆ ಎನ್ನುವ ನೋವು ಇದೆ ಎಂದರು.

# ಬಳ್ಳಾರಿ:ಜೂ.19 ರಂದು ನೇರ ಸಂದರ್ಶನ

ಕನ್ನಡ ಮಾತೃ ಭೂಮಿ ವಾರ್ತೆ

**ಬಳ್ಳಾರಿ,**ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಹಾಗೂ ಆದಿತ್ಯ ಬಿರ್ಲಾ ಸನ್ ಲೈಫ್ ಇನ್ಶೂರೆನ್ಸ್ ಕಂಪನಿ ಇವರ ಜಂಟಿ ಆಶ್ರಯದಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗಾಗಿ ಜೂನ್ 19 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 02 ಗಂಟೆಯವರೆಗೆ ನೇರ ಸಂದರ್ಶನವನ್ನು ಆಯೋಜಿಸಲಾಗಿದೆ.

***ಸಂದರ್ಶನ ನಡೆಯುವ ಸ್ಥಳ:*** ಆದಿತ್ಯ ಬಿರ್ಲಾ ಸನ್ ಲೈಫ್ ಇನ್ಶೂರೆನ್ಸ್ ಕಚೇರಿ, 2ನೇ ಮಹಡಿ, ಅಯ್ಯಪ್ಪನ್ ಡು-ಟರ್ವ, ಎಂಐಜಿ -3 ಕೆಹೆಚ್‌ಬಿ ಕಾಲೋನಿ, ಪಾರ್ವತಿ ನಗರ, ಕೆಎಫ್‌ಸಿ ಕಚೇರಿ ಎದುರು, ಬಳ್ಳಾರಿ - 583103.ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳು ಈ ಸುವರ್ಣಾವಕಾಶವನ್ನು ಬಳಸಿಕೊಳ್ಳಬಹುದು ಎಂದು ಜಿಲ್ಲಾ ಉದ್ಯೋಗಾಧಿಕಾರಿಗಳು ತಿಳಿಸಿದ್ದಾರೆ.ಪಿಯುಸಿ ಅಥವಾ ಯಾವುದೇ ಪದವಿ ಉತ್ತೀರ್ಣರಾದವರು ಭಾಗವಹಿಸಬಹುದು. ಪುರುಷರು ಮತ್ತು ಮಹಿಳೆಯರಿಬ್ಬರಿಗೂ ಅವಕಾಶವಿದೆ. ಈ ನೇರ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ರೀತಿಯ ಶುಲ್ಕ ಇರುವುದಿಲ್ಲ (ಉಚಿತ ಪ್ರವೇಶ).ಸಂದರ್ಶನಕ್ಕೆ ಬರುವ ಅಭ್ಯರ್ಥಿಗಳು ತಮ್ಮ ಇತ್ತೀಚಿನ ಸ್ವ-ವಿವರಗಳ ಮಾಹಿತಿ ಪ್ರತಿ ಹಾಗೂ ಆಧಾರ್ ಕಾರ್ಡ್ ನಕಲು ಪ್ರತಿಯೊಂದಿಗೆ ಹಾಜರಾಗಬೇಕು. ಹೆಚ್ಚಿನ ವಿವರಗಳಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಅಥವಾ 7619207762, 9663263086, 7676774293, 6360408094 ಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಟಾಟಾ ಪವರ್ ಸಂಸ್ಥೆ ಪ್ರಸ್ತಾವನೆ ತಿರಸ್ಕರಿಸಲು ಜೆಸ್ಕಾಂ ನೌಕರರ ಒತ್ತಾಯ



ಕನ್ನಡ ಮಾತೃ ಭೂಮಿ ವಾರ್ತೆ

**ಕಲಬುರ್ಗಿ,** ಕರ್ನಾಟಕದ 19 ಜಿಲ್ಲೆಗಳಲ್ಲಿ ವಿದ್ಯುತ್ ವಿತರಣೆಗಾಗಿ ಸಮಾಂತರ ಪರವಾನಗಿ ಕೋರಿ ಟಾಟಾ ಪವರ್ ಸಂಸ್ಥೆಯು ಕೆಇಆರ್‌ಸಿಗೆ ಸಲ್ಲಿಸಿರುವ ಪ್ರಸ್ತಾವನೆಗೆ ಯಾವುದೇ ಕಾರಣಕ್ಕೂ ಅನುಮೋದನೆ ನೀಡಬಾರದು ಎಂದು ಸೋಮವಾರ ಜೆಸ್ಕಾಂ ನೌಕರರ ಸಂಘದ ಉಪಾಧ್ಯಕ್ಷರು, ಕಾರ್ಯನಿರ್ವಾಹಕ ಇಂಜಿನಿಯರ್ಸ್‌ಗಳು, (ಇಇ), ಅಧೀಕ್ಷಕ ಇಂಜಿನಿಯರ್‌ಗಳು, ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್‌ಗಳು ಹಾಗೂ ಸಮಸ್ತ ಸಿಬ್ಬಂದಿ ವರ್ಗದವರು ಜೆಸ್ಕಾಂ ಅಧ್ಯಕ್ಷ ಪ್ರವೀಣ್ ಪಾಟೀಲ್ ಹರವಾಳ್ ಅವರನ್ನು ಭೇಟಿ ಮಾಡಿ ಅಧಿಕೃತವಾಗಿ ಮನವಿ ಸಲ್ಲಿಸಿದರು.

ಸಂಸ್ಥೆಯ ಹಿತ ಕಾಯುವಲ್ಲಿ ಮತ್ತು ನೌಕರರ ಭವಿಷ್ಯದ ರಕ್ಷಣೆಯಲ್ಲಿ ಜೆಸ್ಕಾಂ ಅಧ್ಯಕ್ಷನಾಗಿ ನಾನು ಸದಾ ನಿಮ್ಮೊಂದಿಗಿ ರುತ್ತೇನೆ ಎಂದು ಸಿಬ್ಬಂದಿ ವರ್ಗಕ್ಕೆ ಪ್ರವೀಣ್ ಪಾಟೀಲ್ ಹರವಾಳ್ ಅವರು ಭರವಸೆ ನೀಡಿದರು. ನಮ್ಮ ಹೆಮ್ಮೆಯ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳ ಹಿತದೃಷ್ಟಿ ಯಿಂದ, ನ್ಯಾಯಯುತ ಬೇಡಿಕೆಯನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಹಾಗೂ ಇಂಧನ ಸಚಿವ ಕೆ. ಜೆ. ಜಾರ್ಜ್ ಗಮನಕ್ಕೆ ತಂದು ಸೂಕ್ತವಾಗಿ ಚರ್ಚಿಸಲಾಗುವುದು. ಸಾರ್ವಜನಿಕರ ಮತ್ತು ನೌಕರರ ಹಿತರಕ್ಷಣೆಗೆ ನಮ್ಮ ಸರ್ಕಾರ ಬದ್ಧವಾಗಿದೆ ಎಂದು ಅವರು ಹೇಳಿದರು.

# ಬಳ್ಳಾರಿ: ಪರಿಶಿಷ್ಟ ಜಾತಿಯವರ ಕುಂದುಕೊರತೆ ಸಭೆಯ ಸಮಯ, ಸ್ಥಳ ಬದಲಾವಣೆ

ಕನ್ನಡ ಮಾತೃ ಭೂಮಿ ವಾರ್ತೆ



**ಬಳ್ಳಾರಿ,** ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರ ಅಧ್ಯಕ್ಷತೆ ಯಲ್ಲಿ ನಡೆಯಬೇಕಾಗಿದ್ದ ಪರಿಶಿಷ್ಟ ಜಾತಿಯವರ ಕುಂದುಕೊರತೆಗಳ ಸಭೆಯ ಸಮಯ ಹಾಗೂ ಸ್ಥಳದಲ್ಲಿ ಕಾರಣಾಂತರಗಳಿಅದ ಬದಲಾವಣೆ ಮಾಡಲಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಮೊದಲು ಈ ಸಭೆಯನ್ನು ಜೂ.18 ರಂದು ಬೆಳಿಗ್ಗೆ 11 ಗಂಟೆಗೆ ನೂತನ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ನಡೆಸಲು ತೀರ್ಮಾನಿಸಲಾಗಿತ್ತು.

ಪ್ರಸ್ತುತ ಅದೇ ದಿನ ಜೂ.18 ರಂದು ಮಧ್ಯಾಹ್ನ 03 ಗಂಟೆಗೆ ಜಿಲ್ಲಾಧಿಕಾರಿಗಳ ಹಳೆಯ ಕಚೇರಿ ಸಭಾಂಗಣದಲ್ಲಿ ಸಭೆಯನ್ನು ಮರು ನಿಗದಿಪಡಿಸಲಾಗಿದೆ.

ಜಿಲ್ಲೆಯ ಪರಿಶಿಷ್ಟ ಜಾತಿ ಸಂಘದ ಮುಖ್ಯಸ್ಥರು, ಸದಸ್ಯರು ಹಾಗೂ ದಲಿತ ಮುಖಂಡರು ಪರಿಶಿಷ್ಟ ಜಾತಿಯ ಜನರ ಸಮಸ್ಯೆಗಳಿಗೆ ಸಂಬಅಧಿಸಿದ ಅಹವಾಲು ಅಥವಾ ಮನವಿ ಪತ್ರಗಳೊಂದಿಗೆ ಅಂದು ಮಧ್ಯಾಹ್ನ 03 ಗಂಟೆಗೆ ನಡೆಯುವ ಸಭೆಗೆ ಹಾಜರಾಗಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಜಾಪ್ರಭುತ್ವಕ್ಕೆ ಭದ್ರಬುನಾದಿ ಹಾಕಿದ್ದು ಬಸವಣ್ಣನವರು - ಡಾ. ಶಿವರಾಜ್ ಕೊಪ್ಪರ್

ಕನ್ನಡ ಮಾತೃ ಭೂಮಿ ವಾರ್ತೆ




**ರಾಯಚೂರು,** 12ನೇ ಶತಮಾನದ ಶರಣರು ಅನುಭವ ಮಂಟಪದಲ್ಲಿ ಎಲ್ಲಾ ಸಮು ದಾಯದ ವಚನಕಾರರು ಹಾಗೂ ಮಹಿ ಳೆಯರು ತಮ್ಮ ಅನುಭವದ ಸಮಾಜ ದಲ್ಲಿನ ವಸ್ತು ಸ್ಥಿತಿಗಳನ್ನು ವಚನಗಳ ರೂಪದಲ್ಲಿ ಪ್ರಸ್ತುತ ಪಡಿಸಿ ಸಮಾಜದ ಅಂಕು ಡೊಂಕುಗಳನ್ನು ತಿದ್ದುವ ಕಾರ್ಯ ನಡೆದಿದ್ದು ಇಂದಿಗೂ ಆ ವಚ ನಗಳು ಪ್ರಸ್ತುತವಾಗಿವೆ ಹಾಗಾಗಿ ವಚನ ಸಾಹಿತ್ಯ ಮತ್ತು ಸಂವಿಧಾನ ಒಂದೇ ನಾಣ್ಯದ ಎರಡು ಮುಖಗಳಿ ದ್ದಂತೆ ವಚನಗಳು ಏಕರೂಪವಾಗಿರಲಿಲ್ಲ ಶರಣರ ಅನುಭವದ ವಾಸ್ತವ ಸ್ಥಿತಿಯ ಅರಿವು ವಿಚಾರಗಳನ್ನು ಸಮಾಜಕ್ಕೆ ನೀಡಿದರು.

ಹಾಗಾಗಿ ಪ್ರಜಾಪ್ರಭುತ್ವದ ಪರಿಕಲ್ಪ ನೆಯಲ್ಲಿ ವಚನಗಳ ಸಾರವನ್ನು ನೋಡು ತ್ತೇವೆ ಹಾಗಾಗಿ ಪ್ರಜಾಪ್ರಭುತ್ವಕ್ಕೆ ಭದ್ರ ಬುನಾದಿ ಹಾಕಿದ್ದು ಬಸವಣ್ಣನವರು ಎಂದು ತಮ್ಮ ಉಪನ್ಯಾಸದ ನೆರವೇರಿಸಿ ಡಾ. ಶಿವರಾಜ್ ಕೊಪ್ಪರ್ ಸಹಾಯಕ ಪ್ರಾಧ್ಯಾಪಕರು ಮಾತನಾಡಿದರು.

ಅವರಿಂದು ಮಾರುತಿ ನಗರದ ಶ್ರೀಗಿರಿ ಅಭಯ ಆಂಜನೇಯ ಸ್ವಾಮಿ ದೇವಸ್ಥಾನದಲ್ಲಿ ನಡೆದ 55ನೇ ಶಿವಾ ನುಭವ ಚಿಂತನಾಗೋಷ್ಠಿಯ ಉಪನ್ಯಾಸ ವನ್ನು ನೆರವೇರಿಸಿ ಮುಂದುವರೆದು ಮಾತನಾಡುತ್ತ 1947ರವರೆಗೆ ಬ್ರಿಟಿಷರು ಭಾರತವನ್ನ ಆಳಿದ ಮೇಲೆ ನಮಗೆ ಸ್ವಾತಂತ್ರ ಸಿಕ್ಕ ನಂತರ ನಮ್ಮ ದೇಶಕ್ಕೆ ಸಂವಿಧಾನದ ಅಗತ್ಯ ಬೇಕಾಗಿತ್ತು ಸಂವಿಧಾನಕ್ಕೆ ಪ್ರಭಾವ ಬೀರಿದ ಮೂರು ಅಂಶಗಳು

12ನೇ ಶತಮಾನದ ಕಾಯಕ ತತ್ವ ದಾಸೋಹ ಸಾಮಾಜಿಕ ಸಮಾನತೆ ಬ್ರಾತತ್ವ ಈ ಮೌಲ್ಯಗಳಿಗೆ ಮಹತ್ವವನ್ನು ನೀಡಿದ್ದಾರೆ. ನಾವು ಸಮೃದ್ಧಿಯಿಂದ ಜೀವನ ಮಾಡಿದ್ದೇವೆ ಎಂದರೆ ಸಂವಿಧಾ ನದಲ್ಲಿ ನಮಗೆ ನೀಡಿದ ಹಕ್ಕುಗಳು ಮುಖ್ಯ ಕಾರಣವಾಗಿದೆ ಬಸವಣ್ಣ ನವರು ತಮ್ಮ ಒಂದು ವಚನದಲ್ಲಿ ಹಕ್ಕುಗಳ ಬಗ್ಗೆ ಮಾರ್ಮಿಕವಾಗಿ ತಿಳಿಸಿದ್ದಾರೆ.

ಕಳಬೇಡ ಕೊಲಬೇಡ ಹುಸಿಯ ನುಡಿಯಲುಬೇಡ ಮುನಿಯಬೇಡ ಅನ್ಯರಿಗೆ ಅಸಹ್ಯ ಪಡಬೇಡ ತನ್ನ ಬಣ್ಣಿಸಬೇಡ ಇದಿರ ಹಳಿಯಲು ಬೇಡ ಇದೇ ಅಂತರಂಗ ಶುದ್ದಿ , ಇದೇ ಬಹಿರಂಗ ಸುದ್ದಿ ಇದೇ ನಮ್ಮ ಕೂಡಲ ಸಂಗಮ ದೇವರ ನೊಲಿಸುವ ಪರಿ.

ಈ ಏಳು ತತ್ವಗಳು ನಮ್ಮ ಸಂವಿ ಧಾನದಲ್ಲಿ ಮೂಲಭೂತ ಹಕ್ಕುಗಳನ್ನು ನೀಡಲಾಗಿದೆ ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಬರೆದ ಸಂವಿಧಾನ ಯಾವ ಎಡಪಂಥಕ್ಕೂ ಅಲ್ಲದೆ ಬಲಪಂ ಥಕ್ಕೂ ಅಲ್ಲದೆ ಮನುಷ್ಯನನ್ನು ಕೇಂದ್ರೀ ಕರಿಸಿ ಬರೆದದ್ದಾಗಿದೆ ಮಾನವತಾ ವಾದ ವನ್ನು ಆಧರಿಸಿ ಬರೆದಿದ್ದಾರೆ 12ನೇ ಶತಮಾನದಲ್ಲಿ ಶರಣರು ಅಂತರ್ಜಾತಿ ವಿವಾಹಗಳಿಗೆ ಪ್ರೋತ್ಸಾಹ ನೀಡಿದರು ಮಹಿಳಾ ಹಕ್ಕುಗಳ ಬಗ್ಗೆ ಲಿಂಗಸಮಾ ನತೆಯ ಕುರಿತು ಸಮ ಸಮಾಜವನ್ನು ನಿರ್ಮಿಸಲು ಹೋರಾಡಿದರು. ಹಾಗಾಗಿ ಪ್ರಜಾಪ್ರಭುತ್ವ ವ್ಯವಸ್ಥೆಯು ಭಾರತವೇ ಜಗತ್ತಿನ ಮೊದಲ ಪ್ರಜಾಪ್ರಭುತ್ವ ರಾಷ್ಟ್ರ ವೆಂದು ಘಂಟಾಘೋಷವಾಗಿ ಹೇಳಬೇ ಕಾಗಿದೆ.

ಮಾನವತವಾದಕ್ಕೆ ಹೆಚ್ಚು ನೀಡಿ ದರು ಮಹತ್ವ ನೀಡಿದ ಸಂವಿಧಾನದಲ್ಲಿ ತುಳಿತಕ್ಕೆ ಒಳಗಾದವರು ಮೇಲೆ ಬರಬೇಕಾಗಿದೆ ಅತ್ಯುತ್ತಮವಾದದ್ದನ್ನು ನಾವು ಬೆಂಬಲಿಸಿ ಆ ತತ್ವಗಳನ್ನು ಅಳವಡಿಸಿಕೊಂಡು ನಮ್ಮ ಪೀಳಿಗೆಗೆ ಒಯ್ಯಬೇಕಾಗಿದೆ ಎಂದು ಕರೆ ನೀಡು ತ್ತಾ ಉತ್ತಮ ಸಂಸ್ಕಾರವನ್ನು ನಮ್ಮ ಮಕ್ಕಳಿಗೆ ಕಲಿಸಬೇಕಾಗಿದೆ ಇಂತಹ ಕಾರ್ಯಕ್ರಮಗಳು ನಾಡಿನೆಲ್ಲಡೆ ಮಾಡಿ ದರೆ ಸಮ ಸಮಾಜವನ್ನು ನಿರ್ಮಿಸು ವುದರಲ್ಲಿ ಯಾವುದೇ ಸಂಶಯವಿಲ್ಲ ಎಂದು ಹೇಳುತ್ತಾ ಅನೇಕ ಶಿವಶರಣರ ವಚನಗಳ ಪ್ರಸ್ತುತಪಡಿಸುತ್ತಾ ಉದಾಹರ ಣೆಗಳನ್ನ ತಿಳಿಸಿದರು.

ಉದ್ಘಾಟನೆಯನ್ನು ನೆರವೇರಿಸಿ ಶ್ರೀದೇವಿ ಆರ್ ವಿ ನಾಯಕ್ ರಾಷ್ಟ್ರೀ ಯ ಮಹಿಳಾ ಕಾಂಗ್ರೆಸ್ ನವದೆಹಲಿ ರವರು ಮಾತನಾಡುತ್ತ ಇಂದಿನ ಗಿರಿ ಅಭಯ ಆಂಜನೇಯ ದೇವಸ್ಥಾನದಲ್ಲಿ ಧರ್ಮ ಚಿಂತನ ಶಿವಾನುಭವ ಗೋಷ್ಠಿ ಯು 12ನೇ ಶತಮಾನದ ಶರಣರ ಅನುಭವ ಮಂಟಪವನ್ನು ನೆನಪಿಸುತ್ತದೆ ಭಾರತದ ಧರ್ಮ ಮತ್ತು ಸಂಸ್ಕೃತಿ ಯನ್ನು ಎತ್ತಿ ಹಿಡಿಯಬೇಕಾಗಿದೆ ಮಕ್ಕ ಳಿಗೂ ಉತ್ತಮ ಸಂಸ್ಕಾರವನ್ನು ಕಲಿಸಬೇ ಕಾಗಿದೆ ನಮ್ಮ ತಾತ ರಾಯಚೂರಿನ ದಿವಂಗತ ಎ.ವೆಂಕಟೇಶ್ ನಾಯಕ್ ಮಾಜಿ ಸಂಸದರು ಅವರು ಹಾಕಿಕೊಟ್ಟ ಮಾರ್ಗದಲ್ಲಿ ನಾವು ಅವರ ತತ್ವಗಳನ್ನು ಆಧರಿಸಿ ಮುನ್ನಡೆಯುತ್ತಿದ್ದೇವೆ ಅವರ ಒಂದು ಮಾತು ನೆನಪಿಗೆ ಬರುತ್ತದೆ ಮೊದಲು ನಿನಗೆ ಸಹಾಯ ಕೇಳಲು ಬಂದರೆ ಅದು ನಿನ್ನ ಪಾಲಿನ ಭಾಗ್ಯ ಎಂದು ಭಾವಿಸಿ ಅವರಿಗೆ ಸಹಾಯ ಮಾಡು ಅವರು ದೇವರ ರೂಪದಲ್ಲಿ ನಿನ್ನ ಕೇಳಲು ಬಂದಿದ್ದಾರೆ ಎಂದು ಭಾವಿಸಿ ಅವರಿಗೆ ಸಹಾಯ ಹಸ್ತ ಚಾಚು ಅವರಿಗೆ ನೆರವಾಗು ಎಂದು ಹೇಳಿದ ಮಾತಿನಂತೆ ನಡೆಯುತ್ತಿದ್ದೇವೆ. ಶ್ರೀ ಗಿರಿ ಅವಯಂಜನೇಯ ಸ್ವಾಮಿ ದೇವಸ್ಥಾನದ ಅಧ್ಯಕ್ಷರಾದ ಬಸವರಾಜ್ ಅಣ್ಣನವರು ಅವರ ತಂಡ ಅತ್ಯುತ್ತಮ ಕಾರ್ಯ ಮಾಡುತ್ತಿದ್ದಾರೆ ನಾವೆಲ್ಲ ಅವರಿಗೆ ಎಲ್ಲಾ ರೀತಿಯಲ್ಲಿ ಬೆಂಬಲಿಸಬೇಕಾಗಿದೆ ಎಂದು ತಿಳಿಸಿದರು.

ಬಾದ್ಮಿ ಅಮಾವಾಸ್ಯೆ ಅನ್ನ ದಾಸೋ ಹಿಗಳಾದ ಸೋಮಶೆಟ್ಟಿ ಶ್ರೀನಿವಾಸ್, ಮ್ಯಾದರ್ ರಾಮಣ್ಣ, ಶಿವಕುಮಾರ್ ರೈಲ್ವೆ ಪೊಲೀಸ್, ಅಮರೆ ಗೌಡ ಎಸ್ ಬಿ ಐ ಪವನ್ ಗೌಡ ಮಹಾಲಕ್ಷ್ಮಿ ಜುವೆಲರ್ಸ್, ಎಚ್ ಎಂ ಸುರೇಶ್ ಶಿವ ಶಂಕರ್, ಹುಲಿಗೆಪ್ಪ ಉಪ್ಪಾಳ್, ಕೆ ವೇಣುಗೋಪಾಲ್ ಕನಕಲಕ್ಷ್ಮಿ ಸಹಕಾರ ಬ್ಯಾಂಕ್, ಕೆ ರಾಮಚಂದ್ರ, ಕರ್ಲೆ ಗಂಜ್ ವರ್ತಕರು ಶಿವಪ್ಪ ಗಾಣದಾಳ್ ವಾರ್ಡನ್ ರಾಮಕೃಷ್ಣ ಜೆಸ್ಕಾ ಇಲಾಖೆ, ಬಬುಲ್ ರೆಡ್ಡಿ ಶಿಲ್ಪ ಮೆಡಿಕೇರ್ ಹನು ಮಂತಿ, ಕೆ, ರೇವಣಸಿದ್ದಪ್ಪ ಗರಡಿ ಶಿಕ್ಷಕರು ಮಲಿಯಾಬಾದ ಸೋಮ ಶೇಖರ್, ಸುಧಾಕರ್ ಇವರನ್ನು ಸನ್ಮಾನಿ ಸಲಾಯಿತು.

ಈ ಕಾರ್ಯಕ್ರಮದಲ್ಲಿ ಸಮಿತಿಯ ಪದಾಧಿಕಾರಿಗಳು ಸೂರ್ಯೋದಯ ವಾಕಿಂಗ್ ಕ್ಲಬ್ಬಿನ ಪದಾಧಿಕಾರಿಗಳು ಹಾಗೂ ಬಡಾವಣೆಯ ಮುಖಂಡರು ಭಾಗವಹಿಸಿದ್ದರು .

# ವಿವಿದೆಡೆ ವಿದ್ಯುತ್ ವ್ಯತ್ಯಯ

ಕನ್ನಡ ಮಾತೃ ಭೂಮಿ ವಾರ್ತೆ

**ಯಾದಗಿರಿ,**ಜಿಲ್ಲೆಯ ಶೋರಾಪುರ ಹಾಗೂ ದೇವಾಪುರ 110 ಕೆ.ವ್ಹಿ. ವಿದ್ಯುತ್ ವಿತರಣಾ ಕೇಂದ್ರಗಳ ಹಾಗೂ 110 ಕೆವ್ಹಿ ಹತ್ತಿಗೂಡುರು-ದೇವಾಪೂರ ಮಾರ್ಗದ ಮೊದಲ ತ್ರೆ5ಬಮಾಸಿಕ ನಿರ್ವಹಣೆಯ ಕಾಮಗಾರಿಯನ್ನು ಕೈಗೊಳ್ಳುತ್ತಿರುವು ದರಿಂದ 110 ಕೆವ್ಹಿ ವಿದ್ಯುತ್ ಕೇಂದ್ರದಿಅದ ಹೊರ ಹೋಗುವ ಎಲ್ಲಾ 11/33 ಕೆವ್ಹಿ ಮಾರ್ಗ ಗಳು ಹಾಗೂ ಐಪಿಪಿ ಮಾರ್ಗಗಳಲ್ಲಿ ಜೂನ್.18 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 5 ಗಂಟೆಯವರೆಗೆ ವಿದ್ಯುತ್ ಸಂಪರ್ಕದಲ್ಲಿ ವ್ಯತ್ಯಯ ಉಂಟಾ ಗಲಿದೆ.

ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು: 110/33/11 ಕೆವ್ಹಿ ವಿದ್ಯುತ್ ವಿತರಣಾ ಕೇಂದ್ರ, ಶೋರಾ ಪೂರು, 110/33/11 ಕೆವ್ಹಿ ವಿದ್ಯುತ್ ವಿತರಣಾ ಕೇಂದ್ರ ದೇವಾಪೂರ, ಮೆ: ಪರಮಪೂಜ್ಯ ಸೋಲಾರ್ ಪ್ರೆ5ಬವೆಟ್ ಲಿಮಿಟೆಡ್ ಹಾಗೂ ಎಲ್ಲಾ ಐಪಿಪಿ ಹಾಗೂ ಮಿನಿ ಹೈಡ್ರೋ.

ಆದ್ದರಿಂದ ಶೋರಾಪುರ, ರಂಗಅಪೇಠ, ದೇವಾಪುರ, ತಿಂಥಣಿ, ಪೇಠ ಅಮ್ಮಾಪುರ, ಮಂಗಳೂರು, ದೇವರಗೋನಾಲ, ಬಾದ್ಯಾಪೂರ, ಮಾಲಗತ್ತಿ, ಸೂಗೂರು, ಕರ್ನಾಳ, ದೇವಿಕೇರಾ, ಕೃಷ್ಣಾಪೂರ ಹಾಗೂ ಸುತ್ತಮುತ್ತಲಿನ ತಾಂಡಾ ಮತ್ತು ದೊಡ್ಡ ಗ್ರಾಮಗಳ ಸಾರ್ವಜನಿಕರು ಹಾಗೂ ಗ್ರಾಹಕರು ಜೇಸ್ಕಾಂಗೆ ಸಹಕರಿಸಬೇಕೆಂದು ಶೋರಾಪುರದ ಕಾರ್ಯ ಮತ್ತು ಪಾಲನೆ ವಿಭಾಗದ ಕಾರ್ಯನಿರ್ವಾಹಕ ಅಭಿಯಂತ ರರು(ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನರೇಗಾ ಕೂಲಿಕಾರರಿಗೆ ಉಚಿತ ಆರೋಗ್ಯ ತಪಾಸಣಾ ಶಿಬಿರ

ಕನ್ನಡ ಮಾತೃ ಭೂಮಿ ವಾರ್ತೆ

**ಗುರುಮಠಕಲ್,** ಪ್ರತಿಯೊಬ್ಬರೂ ಕಡ್ಡಾಯವಾಗಿ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳ ಬೇಕು ಎಂದು ಯಲ್ಹೇರಿ ಪ್ರಾಥಮಿಕ ಆರೋಗ್ಯ ಕೇಂದ್ರ ವೈದ್ಯಧಿ ಕಾರಿ ಜ್ಞಾನೇಶ್ವರ್ ಹೇಳಿದರು.

ಜಿಲ್ಲಾ ಪಂಚಾಯಿತಿ ಯಾದಗಿರಿ, ತಾಲೂಕು ಪಂಚಾಯಿತಿ ಗುರುಮಠ ಕಲ್, ಹಾಗೂ ಪಸಪೂಲ ಗ್ರಾಮ ಪಂಚಾ ಯಿತಿ ಇವರ ಸಹಯೋಗ ದೊಂದಿಗೆ ಐಇಸಿ ಚಟುವಟಿಕೆಯಡಿ ಪಸಪೂಲ ಗ್ರಾಮ ಪಂಚಾಯತಿ ವ್ಯಾಪ್ತಿ ಯಲ್ಲಿರುವ ಗೋಪಾಲಪುರ ಗ್ರಾಮದಲ್ಲಿ ಮಂಗಳ ವಾರ ಹಳ್ಳ ಹುಳೆತ್ತುವ ಕಾಮಗಾರಿ ಸ್ಥಳದಲ್ಲಿ ನರೇಗಾ ಕೂಲಿಕಾರರಿಗೆ ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಪ್ರತಿಯೊಬ್ಬರು ಕಡ್ಡಾಯವಾಗಿ ಮೂರು ತಿಂಗಳಿಗೊಮ್ಮೆ, ಆರು ತಿಂಗಳಿ ಗೊಮ್ಮೆ, ಆರೋಗ್ಯ ತಪಾಸಣೆ ಮಾಡಿಸಿ ಕೊಳ್ಳಬೇಕು. ಹೀಗೆ ಮಾಡುವುದರಿಂದ ಆರಂಭದಲ್ಲಿಯೇ ರೋಗ ಹರಡುವು ದನ್ನು ಪತ್ತೆ ಹೆಚ್ಚಿ ತಡೆಗಟ್ಟಲು ಸಾಧ್ಯವಾಗುತ್ತದೆ ಎಂದರು.

ಆಹಾರದಲ್ಲಿ ಉಪ್ಪು ಕಡಿಮೆ ಸೇವಿಸಿ, ಪದೇಪದೇ ಚಹಾ ಕುಡಿಯ ಬೇಡಿ. ಹಸಿಮೆಣಸಿನ ಕಾಯಿ ಖಾರದ ಪುಡಿಯನ್ನು ಅಧಿಕ ಸೇವಿಸುವುದರಿಂದ ಹೊಟ್ಟೆಯಲ್ಲಿ ಅಲ್ಸರ್ ಆಗುವ ಸಾಧ್ಯತೆ ಇರುತ್ತದೆ. ಅದಕ್ಕೆ ಮಿತವಾಗಿ ಆಹಾರ ಸೇವಿಸಿ ಮತ್ತು ಹೆಚ್ಚು ನೀರು ಕುಡಿಯಿರಿ ಎಂದು ಸಲಹೆ ನೀಡಿದರು.

ಗ್ರಾ.ಪಂ. ಅಭಿವೃದ್ಧಿ ಅಧಿಕಾರಿ ಮಲ್ಲಿಕಾರ್ಜುನ್ ಸಜ್ಜನ್ ಮಾತನಾಡಿ, ಕೂಲಿಕಾರರು ಆರೋಗ್ಯ ದಿಂದ್ದರೆ, ಕೆಲ ಸ ಮಾಡಲು ಸಾಧ್ಯವಾಗುತ್ತದೆ. ಆದ್ದ ರಿಂದ ಪ್ರತಿಯೊಬ್ಬರೂ ತಮ್ಮ ಆರೋ ಗ್ಯದ ಕಡೆ ಗಮನ ಹರಿಸಬೇಕು ಎಂದರು.

ಮಲೇರಿಯಾ, ಕೊಲೆಸ್ಟ್ರಾಲ್ ರಕ್ತದೊತ್ತಡ, ಸಕ್ಕರೆ ಕಾಯಿಲೆ, ಮಂಡಿ ನೋವು ಹಾಗೂ ರಕ್ತಹೀನತೆ ತಪಾಸಣೆ ಮಾಡಲಾ ಯಿತು. ಈ ಕಾಯಿಲೆಗಳ ನ್ಯೂನತೆ ಯಿಂದ ಬಳಲುತ್ತಿರುವವರಿಗೆ ಮಾತ್ರೆ ಗಳು ಹಂಚಲಾಯಿತು. ಜೊತೆಗೆ ವಿಟಮಿನ್ಸ್ ಮಾತ್ರೆಗಳು ಮತ್ತು ಒ ಆರ್ ಎಸ್ ಪೌಡರ್ ಕೊಡಲಾಯಿತು. ಒಟ್ಟು 71 ನರೇಗಾ ಕೂಲಿಕಾರರಿಗೆ ಆರೋಗ್ಯ ತಪಾಸಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಗ್ರಾಮ ಪಂಚಾ ಯಿತಿ ಕಾರ್ಯದರ್ಶಿ ಉಮಾಪತಿ ಹಿರೇಮಠ್, ಡಿ ಇಒ ಬಸವರಾಜ್ ಅಂಗಡಿ, ಐಇಸಿ ತಾಲೂಕು ಸಂಯೋ ಜಕ ರಾಘವೇಂದ್ರ, ಟಿಎಇ ವಿಜಯ್ ಪರ್ತ್ಯಾ, ಬಿ ಎಫ್ ಟಿ ಬಸಲಿಂಗಪ್ಪ, ಆರೋಗ್ಯ ಇಲಾಖೆಯ ಸಿ ಹೆಚ್ ಓ ಕೃನಾಲ್ ಕುಮಾರ್, ಎಚ್‌ಐಒ ಶರಣು, ಪಿಎಚ್ ಸಿಒ ಮಂಜುಳಾ ಸೇರಿದಂತೆ ಆರೋಗ್ಯ ಇಲಾಖೆ ಸಿಬ್ಬಂದಿ ವರ್ಗದ ವರು ಮತ್ತು ಗ್ರಾಮ ಪಂಚಾಯಿತಿ ಸಿಬ್ಬಂದಿ ವರ್ಗದವರು, ಕಾಯಕ ಬಂಧುಗಳು ಹಾಗೂ ಕೂಲಿಕಾರರು ಇದ್ದರು.

# ಮಾಧ್ಯಮ ಅಕಾಡೆಮಿಯಿಂದ ರಾಷ್ಟಮಟ್ಟದ ಸುದ್ದಿ ಛಾಯಾಚಿತ್ರ ಸ್ಪರ್ಧೆ, ಪ್ರದರ್ಶನ

ಕನ್ನಡ ಮಾತೃ ಭೂಮಿ ವಾರ್ತೆ

**ಬಳ್ಳಾರಿ,** ಕರ್ನಾಟಕ ಮಾಧ್ಯಮ ಅಕಾಡೆಮಿಯು ಸುದ್ದಿ ಛಾಯಾಚಿತ್ರಗ್ರಾಹಕ ರಿಗಾಗಿ ಫೋಕಸ್ ಆನ್ ನ್ಯೂಸ್ ಎಂಬ ರಾಷ್ಟಮಟ್ಟದ ಪತ್ರಿಕಾ ಛಾಯಾಚಿತ್ರ ಸ್ಪರ್ಧೆ ಏರ್ಪಡಿಸಿದೆ.

ಈ ಸ್ಪರ್ಧೆಯಲ್ಲಿ ಆಯ್ಕೆಯಾಗುವ ಮೊದಲ ಮೂರು ಛಾಯಾಚಿತ್ರಗಳಿಗೆ ಕ್ರಮವಾಗಿ 35 ಸಾವಿರ ರೂ. 25 ಸಾವಿರ ರೂ. ಹಾಗೂ 15 ಸಾವಿರ ರೂ. ನಗದು ಬಹುಮಾನ ನೀಡಲಾಗುವುದು. ಆಯ್ದ 50 ಛಾಯಾಚಿತ್ರಗಳ ಪ್ರದರ್ಶನವನ್ನು ಏರ್ಪಡಿಸಲಾಗುವುದು.

**ಸ್ಪರ್ಧೆಯ ಷರತ್ತುಗಳು:**

ಈ ಸ್ಪರ್ಧೆಗೆ ಪ್ರವೇಶ ಉಚಿತವಾಗಿದ್ದು, 01-01-2025 ರಿಂದ 31-5-2026 ರ ಅವಧಿಯಲ್ಲಿ ಚಿತ್ರಿಸಿರುವ ಚಿತ್ರ ಗಳನ್ನು ಮಾತ್ರ ಸ್ಪರ್ಧೆಗೆ ಸ್ವೀಕರಿಸಲಾಗು ವುದು. ಪ್ರತಿ ಸುದ್ದಿ ಛಾಯಾಚಿತ್ರ ಗ್ರಾಹಕರು ತಾವೇ ಚಿತ್ರಿಸಿರುವ ಹಾಗೂ ಪ್ರಕಟವಾಗಿರುವ ಯಾವುದಾದರೂ ಎರಡು ಸುದ್ದಿ ಛಾಯಾಚಿತ್ರಗಳನ್ನು ಮಾತ್ರ ಸ್ಪರ್ಧೆಗೆ ಸಲ್ಲಿಸಬಹುದು.

ಸುದ್ದಿ ಛಾಯಾಚಿತ್ರಗಳನ್ನು ಚಿತ್ರಿಸಿ ರುವುದಕ್ಕೆ ಯಾವುದೇ ಭೌಗೋಳಿಕ ಪರಿಮಿತಿ ಇರುವುದಿಲ್ಲ. ಈ ಸ್ಪರ್ಧೆಯನ್ನು ಸುದ್ದಿ ಛಾಯಾಗ್ರಾಹಕರಿಗಾಗಿ ಮಾತ್ರ ಆಯೋಜಿಸಲಾಗಿದೆ. ಪ್ರತಿಯೊಬ್ಬ ಸ್ಪರ್ಧಿಯೂ ಅವರು ಸುದ್ದಿ ಛಾಯಾಚಿತ್ರ ಗ್ರಾಹಕರಾಗಿ ಕಾರ್ಯನಿರ್ವಹಿಸುತ್ತಿರುವ ಪತ್ರಿಕೆಯ

ಸಂಪಾದಕರಿಅದ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ದೃಢೀಕರಣ ಪತ್ರ ಅಥವಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಅಥವಾ ಪಿಐಬಿಯು ಪತ್ರಕರ್ತರಿಗಾಗಿ ನೀಡುವ ಮಾಧ್ಯ ಮಾನ್ಯತೆ ಕಾರ್ಡ್ ಹೊಂದಿರುವವರು ಅದರ ದೃಢೀಕೃತ ಪ್ರತಿಯನ್ನು ಕಡ್ಡಾಯ ವಾಗಿ ಅರ್ಜಿಯೊಂದಿಗೆ ಲಗತ್ತಿಸಬೇಕು.

ಛಾಯಾಚಿತ್ರಗಳ ಮೇಲೆ ಹೆಸರು, ಶೀರ್ಷಿಕೆ ಹಾಗೂ ವಾಟರ್ ಮಾರ್ಕ್ಗಳು ಇರಬಾರದು. ಸ್ಪರ್ಧೆಗೆ ಕಳಿಸುವ ಛಾಯಾಚಿತ್ರಗಳ ಅಂದರೆ ಡಿಜಿಟಲ್ ಇಮೇಜ್ ಗಳನ್ನು ಜೆಪಿಇಜಿ ಫಾರ್ಮಟ್ (ಎಕಇಉ ಜಿಟಡಿಇಚಿಣ) ನಲ್ಲಿ ಮಾತ್ರ ಸಲ್ಲಿಸಬೇಕು.

ಪ್ರದರ್ಶನಕ್ಕೆ ಆಯ್ಕೆಯಾಗುವ ಛಾಯಾಚಿತ್ರಗಳನ್ನು 20''★30'' ಅಳತೆ ಯಲ್ಲಿ ಮುದ್ರಣ ಮಾಡಿಸಬೇಕಾಗಿರು ವುದರಿಂದ ಕಳಿಸುವ ಇಮೇಜ್ ಗಳು 20''★30'' ಅಳತೆಯ, 300 ಡಿಪಿಐ ನಲ್ಲಿದ್ದು, ಕನಿಷ್ಠ 5 ಎಂಬಿ ಗಾತ್ರದಲ್ಲಿರಬೇಕು.

# ಕರ್ನಾಟಕದಲ್ಲಿ ಕರ್ತವ್ಯ ಕ್ರಾಂತಿ : ಸ್ವದೇಶಿ ಎಐ ತಂತ್ರಜ್ಞಾನದ ಹೊಸ ಹೆಜ್ಜೆ

ಕನ್ನಡ ಮಾತೃ ಭೂಮಿ ವಾರ್ತೆ

**ಬೆಂಗಳೂರು,**ರಾಜ್ಯ ಸಾರ್ವಜನಿಕ ಆಡಳಿತದಲ್ಲಿ ಪಾರದರ್ಶಕತೆ, ಹೊಣೆಗಾರಿಕೆ ಮತ್ತು ದಕ್ಷತೆಯನ್ನು ಹೆಚ್ಚಿಸಲು ಕರ್ನಾಟಕ ಸರ್ಕಾರವು ಕರ್ತವ್ಯ' (KAAMS & Karnataka Advanced Attendance Management System) ಎಂಬ ನೂತನ ಮುಂದುವರಿದ ಹಾಜರಾತಿ ನಿರ್ವಹಣಾ ತಂತ್ರಜ್ಞಾನವನ್ನು ಜಾರಿಗೆ ತಂದಿದೆ.

ಮಾನ್ಯ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರು ಇಲಾಖಾ ಕಾರ್ಯದರ್ಶಿಗಳೊಂದಿಗೆ ನಡೆಸಿದ ಮೊದಲ ಸಭೆಯಲ್ಲೇ ಸರ್ಕಾರಿ ನೌಕರರು ಹಾಗೂ ಅಧಿಕಾರಿಗಳು ಕಚೇರಿ ವೇಳೆಯಲ್ಲಿ ಕಡ್ಡಾಯವಾಗಿ 100% ಹಾಜರಿರಬೇಕು ಮತ್ತು ಸಾರ್ವಜನಿಕರ ಕುಂದು ಕೊರತೆಗಳಿಗೆ ತಕ್ಷಣ ಸ್ಪಂದಿಸಬೇಕು ಎಂದು ಖಡಕ್ ಸೂಚನೆ ನೀಡಿದ್ದರು.

ಈ ಹಿಂದೆ ಜಾರಿಯಲ್ಲಿದ್ದ ಬಯೋಮೆಟ್ರಿಕ್ ವ್ಯವಸ್ಥೆಯಲ್ಲಿ ಉದ್ಯೋಗಿಗಳು ಕೇವಲ ಡಿಜಿಟಲ್ ಸಹಿ ಮಾಡಿ ಕಚೇರಿಯಿಂದ ಗೈರಾಗುವ ಸಾಧ್ಯತೆಗಳಿದ್ದವು. ಈ ದೋಷವನ್ನು ನಿವಾರಿಸಲು, ಉದ್ಯೋಗಿಗಳ ಭೌತಿಕ ಉಪಸ್ಥಿತಿ ಮತ್ತು ಕಚೇರಿಯ ಭೌಗೋಳಿಕ ಸ್ಥಳವನ್ನು ನಿಖರವಾಗಿ ಪತ್ತೆಹಚ್ಚುವ ಈ ಹೊಸ ವ್ಯವಸ್ಥೆಯನ್ನು ರೂಪಿಸಲಾಗಿದೆ.

ಸಂಪೂರ್ಣ ಮೇಡ್-ಇನ್-ಕರ್ನಾಟಕ ಆವಿಷ್ಕಾರ ಯಾವುದೇ ಬಾಹ್ಯ ಖಾಸಗಿ ತಂತ್ರಜ್ಞಾನ ಸಂಸ್ಥೆಗಳ ನೆರವಿಲ್ಲದೆ, ಸಂಪೂರ್ಣವಾಗಿ ಸರ್ಕಾರದ ಪರಿಸರ ವ್ಯವಸ್ಥೆಯಲ್ಲೇ ಕರ್ತವ್ಯ ಸಾಫ್ಟ್‌ವೇರ್ ಅನ್ನು ವಿನ್ಯಾಸಗೊಳಿಸಿ ಅಭಿವೃದ್ಧಿಪಡಿಸಲಾಗಿದೆ. ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಇ-ಆಡಳಿತ) ಉಸ್ತುವಾರಿಯಲ್ಲಿ, ಸೆಂಟರ್ ಫಾರ್ ಇ-ಗವರ್ನೆನ್ಸ್ (ಇಛಿಎ) ಮತ್ತು ಕರ್ನಾಟಕ ಎಐ ಸೆಲ್ ಜಂಟಿಯಾಗಿ ಇದನ್ನು ಸಿದ್ಧಪಡಿಸಿವೆ. ಇದರಿಂದಾಗಿ ಸರ್ಕಾರದ ಬೊಕ್ಕಸಕ್ಕೆ ಕೋಟ್ಯಂತರ ರೂಪಾಯಿ ವೆಂಡರ್ ವೆಚ್ಚ ಉಳಿತಾಯವಾಗಿದ್ದು, ದತ್ತಾಂಶ ಸುರಕ್ಷತೆ ಮತ್ತು ಸ್ವಾಯತ್ತತೆ ಹೆಚ್ಚಾಗಿದೆ. ಕರ್ನಾಟಕದ ಈ ಯಶಸ್ವಿ ಮಾದರಿಯನ್ನು ದೇಶದ ಇತರೆ ರಾಜ್ಯಗಳೂ ಅಳವಡಿಸಿಕೊಳ್ಳಬಹುದಾಗಿದೆ.

**ತಂತ್ರಜ್ಞಾನದ ಪ್ರಮುಖ ವೈಶಿಷ್ಟ್ಯಗಳು :**

ಕೃತಕ ಬುದ್ಧಿಮತ್ತೆ (ಅಐ) ಆಧಾರಿತ ಮುಖ ಗುರುತಿಸುವಿಕೆ - ವಂಚನೆಯ ಹಾಜರಾತಿಯನ್ನು ತಡೆಯಲು ಲೈವ್‌ನೆಸ್ ಡಿಟೆಕ್ಷನ್ (Liveness Detection) ತಂತ್ರಜ್ಞಾನದೊಂದಿಗೆ ಎಐ ಫೇಶಿಯಲ್ ರೆಕಗ್ನಿಷನ್ ಬಳಸಲಾಗಿದೆ. ಜಿಯೋಫೆನ್ಸಿಂಗ್ - ಜಿಪಿಎಸ್ ತಂತ್ರಜ್ಞಾನದ ಮೂಲಕ ಉದ್ಯೋಗಿ ತನ್ನ ಕಚೇರಿಯ ನಿಗದಿತ ಪರಿಧಿಯೊಳಗೆ ಇದ್ದಾಗ ಮಾತ್ರ ಹಾಜರಾತಿ ದಾಖಲಿಸಲು ಸಾಧ್ಯವಾಗುತ್ತದೆ.

ಸಂಯೋಜಿತ ಡೇಟಾಬೇಸ್ - ಇದನ್ನು ಆಧಾರ್ ಇ-ಕೆವೈಸಿ ಮತ್ತು ಮಾನವ ಸಂಪನ್ಮೂಲ ನಿರ್ವಹಣಾ ವ್ಯವಸ್ಥೆ ಯೊಂದಿಗೆ ಸಂಯೋಜಿಸಲಾಗಿದೆ.

ಮೊಬೈಲ್ ಆಪ್ ಮತ್ತು ರಜೆ ನಿರ್ವಹಣೆ - ಆಂಡ್ರಾಯ್ಡ್ ಮತ್ತು ಐಒಎಸ್ ಆಪ್‌ಗಳ ಮೂಲಕ ಹಾಜರಾತಿ, ರಜೆ ಮತ್ತು ಅಧಿಕೃತ ಹೊರಗಿನ ಕೆಲಸದ (ಣಣಈ) ವಿವರಗಳನ್ನು ದಾಖಲಿಸುವ ಸೌಲಭ್ಯವಿದೆ.

ಇಲಾಖೆಗಳಲ್ಲಿ ದಾಖಲೆ ವೇಗದ ಅನುಷ್ಠಾನ ಮುಖ್ಯಮಂತ್ರಿಗಳ ಕಟ್ಟುನಿಟ್ಟಿನ ಆದೇಶದ ಬೆನ್ನಲ್ಲೇ ಈ ತಂತ್ರಜ್ಞಾನವು ಇಲಾಖೆಗಳಲ್ಲಿ ಅತ್ಯಂತ ವೇಗವಾಗಿ ಅನುಷ್ಠಾನಗೊಳ್ಳುತ್ತಿದೆ.

ಕಳೆದ ವಾರ ಅಂದಾಜು 2,46,000 ರಷ್ಟಿದ್ದ ಒಟ್ಟು ನೋಂದಾಯಿತ ಉದ್ಯೋಗಿಗಳ ಸಂಖ್ಯೆ ಪ್ರಸ್ತುತ ವಾರದಲ್ಲಿ 3,01,034 ಕ್ಕೆ ಏರಿಕೆಯಾಗಿದೆ. ಇದು ಕೇವಲ ಒಂದೇ ವಾರದಲ್ಲಿ ಶೇಕಡಾ 25% ಕ್ಕಿಂತಲೂ ಹೆಚ್ಚು (55,000ಕ್ಕೂ ಅಧಿಕ ಹೊಸ ಸೇರ್ಪಡೆ) ಬೆಳವಣಿಗೆಯಾಗಿದೆ. ಇದೇ ಅವಧಿಯಲ್ಲಿ, ಆ್ಯಪ್ ಮೂಲಕ ಪ್ರತಿದಿನ ದಾಖಲಾಗುವ ದೈನಂದಿನ ಹಾಜರಾತಿ ಸಂಖ್ಯೆಯು ಸಹ 1,85, 308 ರಿಂದ 2,32,612 ಕ್ಕೆ ಜಿಗಿದಿದ್ದು, ಸಕ್ರಿಯ ಬಳಕೆಯಲ್ಲಿ ಶೇಕಡಾ 25% ರಷ್ಟು ಭಾರಿ ಏರಿಕೆ ದಾಖಲಾಗಿದೆ.

ಪ್ರಸ್ತುತ 42 ಇಲಾಖೆಗಳ 4,78, 522 ನೌಕರರನ್ನು ಈ ವ್ಯವಸ್ಥೆಗೆ ಒಳಪಡಿಸಲಾಗಿದ್ದು, ಈ ಪೈಕಿ 3.01 ಲಕ್ಷಕ್ಕೂ ಹೆಚ್ಚು ಉದ್ಯೋಗಿಗಳು ಈಗಾಗಲೇ ನೋಂದಾಯಿಸಿಕೊಂಡಿ ದ್ದಾರೆ. ಕೇವಲ ಒಂದೇ ವಾರದಲ್ಲಿ ನೋಂದಣಿ ಪ್ರಕ್ರಿಯೆಯಲ್ಲಿ ಶೇಕಡಾ 25 ರಷ್ಟು ಅಭೂತಪೂರ್ವ ಪ್ರಗತಿ ಕಂಡುಬಂದಿದೆ.

ಶಾಲಾ ಶಿಕ್ಷಣ ಇಲಾಖೆ: ಒಟ್ಟು 1,76,055 ಉದ್ಯೋಗಿಗಳಲ್ಲಿ ಈಗಾಗಲೇ 1,68,252 ನೌಕರರು ನೋಂದಾಯಿಸಿಕೊಂಡಿದ್ದು, 1,41,800ಕ್ಕೂ ಹೆಚ್ಚು ದೈನಂದಿನ ಚೆಕ್-ಇನ್‌ಗಳೊಂದಿಗೆ ಮೊದಲ ಸ್ಥಾನದಲ್ಲಿದೆ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ: 66,969 ನೋಂದಣಿ ಹಾಗೂ 54,400ಕ್ಕೂ ಹೆಚ್ಚು ದೈನಂದಿನ ಹಾಜರಾತಿಯೊಂದಿಗೆ ಎರಡನೇ ಸ್ಥಾನದಲ್ಲಿದೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಶಾಲಾ ಶಿಕ್ಷಣ ಇಲಾಖೆಗಳಲ್ಲಿ ಪ್ರಾಯೋಗಿಕವಾಗಿ ಯಶಸ್ವಿಯಾದ ನಂತರ, ಶಾಲಾ ಶಿಕ್ಷಣ ಇಲಾಖೆಯ ಸಿಬ್ಬಂದಿ ಇದನ್ನು ಸಕ್ರಿಯವಾಗಿ ಬಳಸುತ್ತಿದ್ದಾರೆ. ಇನ್ನುಳಿದ ಹಲವು ಇಲಾಖೆಗಳು ಈಗಾಗಲೇ ಶೇಕಡಾ 90 ಕ್ಕಿಂತ ಹೆಚ್ಚು ನೋಂದಣಿ ಮೈಲಿಗಲ್ಲನ್ನು ದಾಟಿವೆ.

**ಇತರ ಇಲಾಖೆಗಳು:** ಪದವಿ ಪೂರ್ವ ಮಂಡಳಿ, ಆಯುಷ್ (ಅ್ಗಖಿಖಎ), ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಮತ್ತು ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಗಳು ಈಗಾಗಲೇ 90% ಕ್ಕಿಂತ ಹೆಚ್ಚು ನೋಂದಣಿ ಗುರಿಯನ್ನು ಯಶಸ್ವಿಯಾಗಿ ತಲುಪಿವೆ.

ಮುಖ್ಯಮಂತ್ರಿಗಳು, ಮುಖ್ಯ ಕಾರ್ಯದರ್ಶಿಗಳು ಮತ್ತು ಜಿಲ್ಲಾ ಮಟ್ಟದಲ್ಲಿ ಡಿಸಿ/ಸಿಇಒಗಳು ದಿನನಿತ್ಯ ಈ ವ್ಯವಸ್ಥೆಯ ಡ್ಯಾಶ್‌ಬೋರ್ಡ್ ಅನ್ನು ಮೇಲ್ವಿಚಾರಣೆ ಮಾಡುತ್ತಿದ್ದಾರೆ. ಕಚೇರಿ ಅವಧಿಯಲ್ಲಿ ಅಧಿಕಾರಿಗಳು ಸಾರ್ವಜನಿಕರಿಗೆ ಸಿಗದಿರುವ ಬಗ್ಗೆ ನಾಗರಿಕರು ನೀಡುವ ಪ್ರತಿಕ್ರಿಯೆ (Feedback) ಈ ಸುಶಾಸನದ ಗುರಿಯನ್ನು ತಲುಪಲು ಪ್ರಮುಖ ಪಾತ್ರ ವಹಿಸಲಿದೆ.

**ಸಾರ್ವಜನಿಕರಿಗೆ ಸಿಗಲಿದೆ ಉತ್ತಮ ಸೇವೆ:**

ಸಾರ್ವಜನಿಕ ಸೇವೆಗೆ ಹೊಸ ವೇಗ

ಮೊಬೈಲ್ ಮೂಲಕವೇ ಹಾಜರಾತಿ ದಾಖಲಿಸುವ ಸೌಲಭ್ಯ ಇರುವುದರಿಂದ ಕಚೇರಿಗಳ ಮುಂಭಾಗದಲ್ಲಿ ಬಯೋಮೆಟ್ರಿಕ್‌ಗಾಗಿ ಸಾಲಿನಲ್ಲಿ ನಿಲ್ಲುವುದು ತಪ್ಪಿದೆ ಎಂದು ಸರ್ಕಾರಿ ನೌಕರರು ಸಂತಸ ವ್ಯಕ್ತಪಡಿಸಿದ್ದಾರೆ.

ಕರ್ತವ್ಯ ಆ್ಯಪ್ ಪ್ರತಿಯೊಬ್ಬ ಸರ್ಕಾರಿ ನೌಕರನೂ ತನ್ನ ಜವಾಬ್ದಾರಿಯನ್ನು ಹೆಮ್ಮೆ, ಶಿಸ್ತು ಮತ್ತು ನಿರ್ದಿಷ್ಟ ಉದ್ದೇಶದೊಂದಿಗೆ ನಿರ್ವಹಿಸಲು ಶಕ್ತಿ ತುಂಬುತ್ತಿದೆ.

ಅಂತಿಮವಾಗಿ, ಕಚೇರಿಗಳಲ್ಲಿ ಅಧಿಕಾರಿಗಳ ಭೌತಿಕ ಲಭ್ಯತೆ ಮತ್ತು ವಿಶ್ವಾಸಾರ್ಹತೆಯನ್ನು ಖಾತರಿಪಡಿಸುವ ಮೂಲಕ ಸಾರ್ವಜನಿಕರಿಗೆ ಸಿಗುವ ಸೇವೆಗಳು ಇನ್ನು ಮುಂದೆ ಹೆಚ್ಚು ಸುಲಭ ಹಾಗೂ ತಡೆರಹಿತವಾಗಲಿವೆ.

ಈ ಮೂ ಲಕ ಕರ್ನಾಟಕವು ಡಿಜಿಟಲ್ ಆಡಳಿತ ಮತ್ತು ನಾಗರಿಕ ಕೇಂದ್ರಿತ ಸುಧಾರಣೆ ಯಲ್ಲಿ ದೇಶದಲ್ಲೇ ಮುಂಚೂಣಿ ರಾಜ್ಯವಾಗಿ ಹೊರಹೊಮ್ಮಿದೆ ಎಂದು

ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾರ್ಥಿಗಳು ಶೈಕ್ಷಣಿಕವಾಗಿ ಪ್ರಗತಿ ಹೊಂದಲು ಗಾದೆಪ್ಪ ಕರೆ




ಕನ್ನಡ ಮಾತೃ ಭೂಮಿ ವಾರ್ತೆ

**ಬಳ್ಳಾರಿ,**ವಿದ್ಯಾರ್ಥಿ ಜೀವನ ಬಂಗಾರದ ದಿನಗಳ ಜೀವನ, ನೀವು ನಿಮ್ಮ ಪದವಿ ಮುಗಿಸಿಕೊಂಡು ಇನ್ನೂ ಉನ್ನತ ವಿದ್ಯಾಭ್ಯಾಸ ಮಾಡಿ ಒಳ್ಳೆಯ ಉದ್ಯೋಗ ಪಡೆದು ನಿಮ್ಮ ತಾಯಿ ತಂದೆಗಳಿಗೆ, ವಿದ್ಯೆ ಕಲಿಸಿದ ಸಂಸ್ಥೆಗೆ ಹೆಸರು ತರುವಂತಹ ಈ ದೇಶದ ಸತ್ಪ್ರಜೆಗಳಾಗಿ ಬಾಳಿರಿ ಎಂದು ಬಳ್ಳಾರಿ ಮಹಾನಗರ ಪಾಲಿಕೆಯ ಪೂಜ್ಯ ಮಹಾಪೌರರಾದ ಪಿ ಗಾದೆಪ್ಪ ಅವರು ಅಭಿಪ್ರಾಯ ಪಟ್ಟರು. ಶನಿವಾರ ನಗರದ ಜೋಳದರಾಶಿ ದೊಡ್ಡನಗೌಡ ರಂಗ ಮಂದಿರದಲ್ಲಿ ಆಯೋಜಿಸಲಾಗಿದ್ದ ಲಾಡ್ಸ್ ವಿದ್ಯಾಸಂಸ್ಥೆಯ ಇಂಡೋ-ಅಮೆರಿಕನ್ ಪದವಿ ಕಾಲೇಜು ವಿದ್ಯಾರ್ಥಿಗಳ ಬಿಳ್ಕೋಡಿಗೆ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಆರಂಭದಲ್ಲಿ ಲಾಡ್ಸ್ ವಿದ್ಯಾಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷರಾದ ಪಿ ಎಚ್ ನಾಯ್ಡು ಅವರು ಪ್ರಾಸ್ತಾವಿಕ ನುಡಿಗಳನ್ನು ಆಡುತ್ತಾ ವಿದ್ಯಾರ್ಥಿಗಳು ಇಂದಿನ ಸ್ಪರ್ಧಾತ್ಮಕ ಹಾಗೂ ತಂತ್ರಜ್ಞಾನದ ಯುಗದಲ್ಲಿ ಇಂದು ಅಐಯ (ಕೃತಕ ಬುದ್ಧಿಮತ್ತೆ) ಅವಶ್ಯಕತೆ ತುಂಬಾ ಇದ್ದು ಇದರ ಜ್ಞಾನವನ್ನು ವಿದ್ಯಾರ್ಥಿಗಳು ತಿಳಿದುಕೊಂಡು ಇಂದಿನ ಎಐ ತಂತ್ರಜ್ಞಾನಕ್ಕೆ ಹೊಂದಿಕೊಳ್ಳಬೇಕು ಎಂದು ಕರೆಕೊಟ್ಟು ಮುಂದಿನ ದಿನಗಳಲ್ಲಿ ನಿಮ್ಮ ಭವಿಷ್ಯ ಸುಖಮಯವಾಗಿರಲಿ ಎಂದು ಆಶಿಸಿದರು.

ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದ ಬಳ್ಳಾರಿಯ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಶ್ರೀ ಎನ್ ನವೀನ ಕುಮಾರ ಅವರು ಮಾತನಾಡುತ್ತಾ ವಿದ್ಯಾರ್ಥಿಗಳು ಕೇವಲ ಪದವಿಗಳನ್ನು ಪಡೆದು ಸಾಮಾನ್ಯ ಉದ್ಯೋಗಗಳನ್ನು ಮಾಡುವುದರ ಬದಲು ಐ ಅ ಖ , ಐ ಕ ಖ , ಐ ಊ ಖ ಮುಂತಾದ ಸ್ಪರ್ಧಾತ್ಮಕ ಜಗತ್ತಿನ ಉನ್ನತ ಹುದ್ದೆಗಳನ್ನು ಅಲಂಕರಿಸಬೇಕೆಂದು ಕಿವಿ ಮಾತು ಹೇಳಿದರು. ವೇದಿಕೆಯಲ್ಲಿ ಕಾಲೇಜಿನ ಉಪ-ಪ್ರಾಚಾರ್ಯರಾದ ಸುಧೀರ ಕುಮಾರ ಕೆ ಪಿ ಹಾಗೂ ಇಂಡೋ-ಅಮೆರಿಕನ್ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರಾದ ರಾಜೇಶ ಬಿ.ವಿ ಆಡಳಿತಾಧಿಕಾರಿ ಪಿ ಉದಯ ಭಾಸ್ಕರ ಮತ್ತು ಪಿ ಆರ್ ಓ ರಾಜ ವಿ ಅವರು ಉಪಸ್ಥಿತರಿದ್ದರು.

# ...ಮೊದಲನೇ ಪುಟದಿಂದ

## ಮಾಜಿ ಶಾಸಕ ಎ.ಪಾಪಾರೆಡ್ಡಿ ಪತ್ನಿ ಪಾರ್ವತಮ್ಮ ನಿಧನ ಗಣ್ಯರಿಂದ ತೀವ್ರ ಸಂತಾಪ

ಪಾಟೀಲ್, ವಿಧಾನ ಪರಿಷತ್ ಸದಸ್ಯ ಎ.,ವಸಂತಕುಮಾರ, ಮಾಜಿ ಸಚಿವ ಶಿವನಗೌಡ ನಾಯಕ, ಮಾಜಿ ಸಂಸದ ಬಿ.ವಿ ನಾಯಕ, ಗಂಗಾಧರ ನಾಯಕ, ಮಾಜಿ ತಿಪ್ಪರಾಜು ಹವಾಲ್ದಾರ್, ಕೃಷಿ ವಿಶ್ವ ವಿದ್ಯಾಲಯದ ಕುಲಪತಿ ಎಂ. ಹನುಮಂತಪ್ಪ, ಪಾರಸಮಲ್ ಸುಖಾಣಿ, ತ್ರಿವಿಕ್ರಮ ಜೋಷಿ, ರಾಘವೇಂದ್ರ ಕುಷ್ಟಗಿ, ಸ್ಮಿತಾ ಅಕ್ಕ, ಕಾಂಗ್ರೆಸ್ ಮುಖಂಡರು ಶಾಂತಪ್ಪ, ಜಯಣ್ಣ, ಸೇರಿದಂತೆ ಅನೇಕ ಗಣ್ಯರು ಅವರ ಅಂತಿಮ ದರ್ಶನ ಪಡೆದು ಪಾರ್ವತಮ್ಮ ಆತ್ಮಕ್ಕೆ ಶಾಂತಿ ಸಿಗಲಿ, ಅವರ ಕುಟುಂಬಸ್ಥರ ಅವರ ಅಗಲಿಕೆ ದುಃಖ ಭರಿಸುವ ಶಕ್ತಿಯನ್ನು ಕರುಣಿಸಲಿ ಎಂದು ತೀವ್ರ ಸಂತಾಪ ಸೂಚಿಸಿದ್ದಾರೆ.

## ಪ್ರತಿಯೊಬ್ಬರು ಒಂದು ಸಸಿಯನ್ನು ನೆಟ್ಟು ಪಾಲನೆ ಮತ್ತು ಪೋಷಣೆ ಮಾಡಿ-ರಾಜೇಶ್ ನಾಯಕ

ಪರಿಸರ ಸಂರಕ್ಷಣೆ ಮತ್ತು ಹಸಿರು ವಾತಾವರಣ ನಿರ್ಮಾಣದ ಉದ್ದೇಶದಿಂದ ಗಿಡ ನೆಡುವ ಕಾರ್ಯಕ್ರಮ ಹಮ್ಮಿಕೊಂಡಿದ್ದು,ವಿವಿಧ ಜಾತಿಯ ಗಿಡಗಳನ್ನು ನೆಟ್ಟು ಪರಿಸರ ಸಂರಕ್ಷಣೆಯ ಸಂಕಲ್ಪ ಮಾಡಲಾಗಿದೆ.

ಪ್ರತಿಯೊಬ್ಬರು ತಮ್ಮ ವಿಶೇಷ ದಿನಗಳಲ್ಲಿ ಸಮಾಜಕ್ಕೆ ಉಪಯುಕ್ತವಾಗುವ ಕಾರ್ಯಗಳ ಮೂಲಕ ಗಿಡಗಳನ್ನು ನೆಡುವ ಕೆಲಸ ಮಾಡುವುದು ಮಾದರಿಯಾಗಿದೆ ಎಂದರು.

ಪ್ರತಿಯೊಬ್ಬರೂ ತಮ್ಮ ಜೀವನದ ವಿಶೇಷ ದಿನಗಳಲ್ಲಿ ಕನಿಷ್ಠ ಒಂದು ಗಿಡವನ್ನು ನೆಟ್ಟು ಅದರ ಪೋಷಣೆಯ ಜವಾಬ್ದಾರಿಯನ್ನು ವಹಿಸಿಕೊಂಡರೆ ಪರಿಸರ ಸಂರಕ್ಷಣೆಗೆ ಮಹತ್ವದ ಕೊಡುಗೆ ನೀಡಿದಂತಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶರಣರೆಡ್ಡಿ, ಜನಾರ್ದನ ರೆಡ್ಡಿ ಅಂಹನಾಳ, ವಿಜಯ್ ಭಾಸ್ಕರ್ ರೆಡ್ಡಿ, ಮೌನೇಶ್, ಭೀಮೇಶ್, ಶಿಲ್ಪಾ ಮ್ಯಾಡಂ, ಹನುಮಾನ್ ಚಾಲೀಸಾ ಜನಸೇವಾ ಅಧ್ಯಕ್ಷ ವೀರೇಶ್ ಪಿ., ಶ್ರೀ ವರಸಿದ್ಧಿ ಆಂಜನೇಯ ಸ್ವಾಮಿ ದೇವಸ್ಥಾನದ ಕಾರ್ಯದರ್ಶಿ ರವಿಕಿರಣ್ ಗೌಡ, ಸದಸ್ಯರಾದ ರಾಘವೇಂದ್ರ, ಲಕ್ಷ್ಮಣ್ ಮಾಸ್ಟರ್, ಶಾಂತಯ್ಯ ಸ್ವಾಮಿಗಳು ಸೇರಿದಂತೆ ಅನೇಕ ಗಣ್ಯರು, ಸಮಾಜದ ಮುಖಂಡರು, ಪರಿಸರ ಪ್ರೇಮಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

## ಕೆಪಿಎಸ್ ಮ್ಯಾಗ್ನೆಟ್ ಶಾಲೆಗಳ ನೆಪದಲ್ಲಿ ಸರ್ಕಾರಿ ಶಾಲೆಗಳ ವಿಲೀನಕ್ಕೆ ವಿರೋಧಿಸಿ ಪ್ರತಿಭಟನೆ

ಮಾರ್ಕೆಟ್, ದೇವರ ಕಾಲೋನಿ, ಕುಲಸುಂಬಿ ಕಾಲೋನಿ, ಮಲಿಯಾಬಾದ್ ಕ್ಯಾಂಪ್ ಸೇರಿದಂತೆ ವಿವಿಧ ಸರ್ಕಾರಿ ಶಾಲೆಗಳನ್ನು ವಿಲೀನಗೊಳಿಸುವ ಕ್ರಮವನ್ನು ಕೈಬಿಡುವಂತೆ ಒತ್ತಾಯಿಸಿದರು.

ಅಸ್ಕಿಹಾಳ ಸರ್ಕಾರಿ ಪ್ರಾಥಮಿಕ ಶಾಲೆಯ ನೂತನ ಕಟ್ಟಡ ನಿರ್ಮಾಣವನ್ನು ಕೂಡಲೇ ಆರಂಭಿಸಬೇಕು. ಅಲ್ಲಿಯವರೆಗೆ ವಿದ್ಯಾರ್ಥಿ ಗಳಿಗೆ ಸಂಪೂರ್ಣ ತರಗತಿಗಳು ನಡೆಯುವಂತೆ ವಾರದೊಳಗೆ ತಾತ್ಕಾಲಿಕ ವ್ಯವಸ್ಥೆ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ವಿಜಯನಗರ ಕ್ಯಾಂಪ್‌ನಲ್ಲಿರುವ ಶಿಥಿಲಾವ ಸ್ಥೆಯ ಸರ್ಕಾರಿ ಶಾಲೆಯ ಕಟ್ಟಡವನ್ನು ತೆರವುಗೊಳಿಸಿ ನೂತನ ಕಟ್ಟಡ ನಿರ್ಮಿಸಬೇಕು. ಹೊಸ ಕಟ್ಟಡ ನಿರ್ಮಾಣವಾಗುವವರೆಗೆ ವಿದ್ಯಾರ್ಥಿಗಳಿಗೆ ಸುರಕ್ಷಿತ ಸ್ಥಳದಲ್ಲಿ ತರಗತಿಗಳನ್ನು ನಡೆಸಲು ವ್ಯವಸ್ಥೆ ಮಾಡಬೇಕು ಎಂದು ಒತ್ತಾಯಿಸಿದರು.

ರಾಜ್ಯದಲ್ಲಿ ಖಾಲಿ ಇರುವ 5,624 ಶಿಕ್ಷಕರ ಹುದ್ದೆಗಳನ್ನು ಕೂಡಲೇ ಭರ್ತಿ ಮಾಡಬೇಕು. ಜೊತೆಗೆ 266 ಏಕೋಪಾಧ್ಯಾಯ ಶಾಲೆಗಳಿಗೆ ಹೆಚ್ಚುವರಿ ಶಿಕ್ಷಕರನ್ನು ನೇಮಕ ಮಾಡಬೇಕು. ದುಸ್ಥಿತಿಯಲ್ಲಿರುವ 874 ಶಾಲಾ ಶೌಚಾಲಯಗಳನ್ನು ತುರ್ತು ಆಧಾರದ ಮೇಲೆ ದುರಸ್ತಿಗೊಳಿಸಿ, ಎಲ್ಲ ಸರ್ಕಾರಿ ಶಾಲೆಗಳಲ್ಲಿ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಚನ್ನಬಸವ ಜಾನಕಲ್, ಮಹೇಶ್, ಸೂರ್ಯ ನಾರಾಯಣ, ಶಿವಪ್ಪ, ರವಿಕುಮಾರ್, ಬಸವರಾಜ್ ಹಾಗೂ ವಿವಿಧ ಗ್ರಾಮಗಳ ಗ್ರಾಮಸ್ಥರು, ಪೋಷಕರು ಮತ್ತು ಸಾರ್ವಜನಿಕರು ಭಾಗವಹಿಸಿದ್ದರು.

## ಸರಕಾರ ಜನರ, ರೈತರ ಸಮಸ್ಯೆ ಪರಿಹಾರ ಮಾಡುವುದುಕ್ಕಿಂತ ಸಮಸ್ಯೆ ಸೃಷ್ಟಿ- ಜಿ ವೆಂಕಟರೆಡ್ಡಿ

ದರಕ್ಕೆ ಮಾರಾಟ ಮಾಡುದಕ್ಕೆ ಕಡಿವಾಣ ಹಾಕಬೇಕು. ರೈತರಿಗೆ ಬೇಡವಾದ ರಸ ಗೊಬ್ಬರವನ್ನು ಕಂಪ್ಲೇಂಕ್ಸ್ ಗೊಬ್ಬರವನ್ನು ಕಡ್ಡಾಯವಾಗಿ ತೆಗೆದುಕೊಂಡು ಹೋಗಬೇಕೆಂದು ಬಲವಂತ ಮಾಡುವ ವ್ಯಾಪಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು. ರೈತರಿಗೆ ಬೇಡವಾದ ಅನವಶ್ಯಕ ಗೊಬ್ಬರ ತೆಗೆದುಕೊಂಡು ಹೋಗಬೇಕೆಂದು ಒತ್ತಡ ಹೇರಬಾರದು ಎಂದು ಅಗ್ರಹಿಸಿದ್ದಾರೆ.

ಗೃಹಲಕ್ಷ್ಮಿ ಯೋಜನೆ ಹಾಗೂ ಗೃಹ ಜ್ಯೋತಿ ಯೋಜನೆ ಪರಿಸ್ಕರಣೆ ಹೆಸರಿನಲ್ಲಿ ನಾನಾ ರೀತಿಯ ಷರತ್ತು ಹಾಕಿ ಗ್ಯಾರಂಟಿ ಯೋಜನೆ ಲಾಭ ಜನರಿಗೆ ಗಗನ ಕುಸುಮ ಆಗಬಾರದು. ಸರಕಾರದ ಯೋಜನೆಗಳ ಲಾಭ ಜನರಿಗೆ ಸುಲಭವಾಗಿ ಸಿಗುವಂತೆ ಸರಕಾರದ ಯೋಜನೆಗಳು ಇರಬೇಕು ಎಂದು ಅವರು ತಿಳಿಸಿದ್ದಾರೆ.

ಇಗಾಗಲೇ ಶಾಲಾ ಕಾಲೇಜುಗಳು ಆರಂಭವಾಗಿವೆ. ಆದ್ರೆ ಹಾಸ್ಟೆಲ್ಗಳು ಇನ್ನು ಆರಂಭ ಆಗಿಲ್ಲ. ಹೀಗಾಗಿ ವಿದ್ಯಾರ್ಥಿಗಳಿಗೆ ತುಂಬ ಸಮಸ್ಯೆ ಉಂಟಾಗಿದೆ. ತಕ್ಷಣವೇ ಹಾಸ್ಟೆಲ್ ಆರಂಭ ಮಾಡಿ ವಿದ್ಯಾರ್ಥಿಗಳ ಸಮಸ್ಯೆ ಪರಿಹಾರ ಮಾಡಬೇಕು ಎಂದು ಒತ್ತಾಯಿದ್ದಾರೆ.

ಇನ್ನು ಅನೇಕ ರೈತರಿಗೆ ಬೆಂಬಲ ಬೆಲೆಯಲ್ಲಿ ಜೋಳ ಖರೀದಿ ಮಾಡಿದ ರೈತರಿಗೆ ಶೀಘ್ರದಲ್ಲಿ ಬಾಕಿ ಹಣ ಪಾವತಿ ಮಾಡಬೇಕು ಎಂದು ಅಗ್ರಯಿಸಿದ್ದಾರೆ.

ಜನರ ರೈತರ ವಿದ್ಯಾರ್ಥಿಗಳ ಇಂತಹ ಗಂಭೀರವಾದ ಸಮಸ್ಯೆಗಳನ್ನು ಸರಕಾರ ಪರಿಹಾರ ಮಾಡುವುದನ್ನು ಬಿಟ್ಟು ಜನರನ್ನು ದಿಕ್ಕು ತಪ್ಪಿಸಲು ಸರಕಾರ ಗ್ಯಾರಂಟಿ ಯೋಜನೆ ಪರಿಸ್ಕರಣೆ ಮಾಡಲು ಹೊರಟಿದೆ. ಸರ್ಕಾರ ಅನರ್ಹರಿಗೆ ಗ್ಯಾರಂಟಿ ಯೋಜನೆ ತಲುಪದಂತೆ ಕಡಿವಾಣ ಹಾಕ್ಲಿ. ಆದ್ರೆ ಅರ್ಹ ಫಲಾನುಭವಿ ಯೋಜನೆಯಿಂದ ವಂಚಿತ ವಾಗದಂತೆ ಸರಕಾರ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಜಿ ವೆಂಕಟರೆಡ್ಡಿ ಅವರು ಅಗ್ರಹಿಸಿದ್ದಾರೆ.

## ಸಮ್ಮೇಳನಾಧ್ಯಕ್ಷರಾಗಿ ಡಾ.ಗಂಗಮ್ಮ ಸತ್ಯಂಪೇಟೆ ಆಯ್ಕೆ-ಲಲಿತಾ ಬಸನಗೌಡ

ಅನ್ನಪೂರ್ಣ ಮೇಟಿ, ಪ್ರೇಮಲತಾರೆಡ್ಡಿ, ಉಮಾದೇವಿ ಡಾ.ಜಿ.ಮಹಾಲಿಂಗಪ್ಪ, ಮುನಿಯಪ್ಪ ನಾಗೋಲಿ ಭಾಗವಹಿಸಲಿದ್ದಾರೆ. ಸಮ್ಮೇಳನವನ್ನು ಬೆಂಗಳೂರು ಮಹಾರಾಣಿ ವಿಶ್ವವಿದ್ಯಾಲಯದ ಸಹಪ್ರಾಧ್ಯಾಪಕಿ ಡಾ.ಎಂ.ಎಸ್.ಆಶಾದೇವಿ ಉದ್ಘಾಟಿಸಲಿದ್ದಾರೆ. ಅಧ್ಯಕ್ಷತೆಯನ್ನು ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ.ಸಿ.ಸೋಮಶೇಖರವಹಿಸಲಿದ್ದಾರೆ. ಹೊಸ ಕೃತಿಗಳನ್ನು ಕದಳಿ ವೇದಿಕೆ ಸಂಚಾಲಕರಾದ ಸುಶೀಲ ಸೋಮಶೇಖರ ಬಿಡುಗಡೆಗೊಳಿಸಲಿದ್ದಾರೆ. ಲಲಿತಾ ಬಸನಗೌಡ ಇವರ ಅನುಭಾವ ಗೀತೆ ಮತ್ತು ಎಚ್.ಜಿ.ಹಂಪಣ್ಣ ಇವರು ರಚಿಸಿದ ಲಿಂಗಜ್ಯೋತಿಇ ಹಡಪದ ಲಿಂಗಯ್ಯ ಕೃತಿಗಳು ಬಿಡುಗಡೆಯಾಗಲಿವೆ. ಮುಖ್ಯ ಅತಿಥಿಗಳಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಉತ್ತರಾದೇವಿ ಮಠಪತಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕಿ ಶರಣಮ್ಮ, ಬಸ್ಸಪ್ಪ ತಿಪ್ಪಾರೆಡ್ಡಿ, ನಾಗರಾಜ ಮಸ್ಕಿ, ದಾನಮ್ಮ ಸುಭಾಷಚಂದ್ರ, ಭಾಗವಹಿಸಲಿದ್ದಾರೆ, ಗೌರವ ಉಪಸ್ಥಿತಿಯನ್ನು ಚನ್ನಬಸಮ್ಮ ಡಾ.ಎಂ.ನಾಗಪ್ಪ, ಸುದನಮ್ಮ ಗುಂಡಪ್ಪ ಪಾಟೀಲ್, ಸುಮಂಗಲ ಸೂಗುರಯ್ಯಯ ಹಿರೇಮಠ, ಅಂಬುಜಾ ಚಂದ್ರಶೇಖರ ಮಿರ್ಜಾಪುರ ಭಾಗವಹಿಸುತ್ತಾರೆ ಎಂದರು.

ನಂತರ ಮೂರು ಗೋಷ್ಠಿಗಳು ನಡೆಯಲಿವೆ. ಮೊದಲ ಗೋಷ್ಠಿ ರಾಯಚೂರು ಜಿಲ್ಲೆಯ ವಚನಕಾರ್ತಿಯರು ವಿಷಯವಾಗಿ ನಡೆಯಲಿದ್ದು ಅಧ್ಯಕ್ಷತೆಯನ್ನು ನಿವೃತ್ತ ಶಿಕ್ಷಣಾಧಿಕಾರಿ ಆರ್.ಇಂದಿರಾವಹಿಸಲಿದ್ದಾರೆ.ಶರಣೆ ಮುಕ್ತಾಯಕ್ತ ವಿಷಯವಾಗಿ ಡಾ.ಈರಮ್ಮ ಹಿರೇಮಠ ಮಸ್ಕಿ, ಶರಣೆ ಆಯ್ದಕ್ಕಿ ಲಕ್ಕಮ್ಮ ವಿಷಯವಾಗಿ ಬಸನಗೌಡ ಉಪನ್ಯಾಸ ನೀಡಲಿದ್ದಾರೆ.

ಎರಡನೇ ಗೋಷ್ಠಿ ಶರಣರ ವಚನಗಳಲ್ಲಿ ಸ್ವಾತಂತ್ರ್ಯದ ಹೊಳಪು ವಿಷಯವಾಗಿ ಡಾ.ರಾಜೇಶ್ವರಿ ವಿರಕ್ತಮಠ, ಕಾಯಕ ನಿಷ್ಠೆ ಮತ್ತು ಶರಣೆಯರು ವಿಷಯವಾಗಿ ಡಾ.ಕಟ್ಟಿ ವಿಜಯಲಕ್ಷ್ಮೀ ಗುರಿಕಾರ ಸಿಂಧನೂರ ಉಪನ್ಯಾಸ ನೀಡಲಿದ್ದಾರೆ. ಅಧ್ಯಕ್ಷತೆಯನ್ನು ಕೊಪ್ಪಳ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷೆ ಸಾವಿತ್ರಿ ಮುಜಂದಾರವವಹಿಸಲಿದ್ದಾರೆ.

ಮೂರನೇ ಗೋಷ್ಠಿ ಅಧುನಿಕ ವಚನ ವಾಚನ ನಡೆಯಲಿದೆ. ಅದ್ಯಕ್ಷತೆಯನ್ನು ಡಾ.ಸರ್ವಮಂಗಳ ಸಕ್ರಿವಹಿಸಲಿದ್ದಾರೆ. ಅನೇಕರು ವಚನವಾಚನ ಮಾಡಲಿದ್ದಾರೆ. ಸಂಜೆ 5.30ಕ್ಕೆ ಸಮಾರೋಪ ಸಮಾರಂಭ ನಡೆಯಲಿದೆ. ಅಧ್ಯಕ್ಷತೆಯನ್ನು ಲಲಿತಾ ಬಸನಗೌಡ ವಹಿಸಲಿದ್ದಾರೆ. ಸಮಾರೋಪ ನುಡಿಗಳನ್ನು ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಶಿವಾನಂದ ಕೆಳಗಿನಮನೆ ನುಡಿಯಲಿದ್ದಾರೆ. ಶರಣರ ವಚನ, ಭಾವಾರ್ಥ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಣೆ ನಡೆಲಿದೆ. ಅಂಬಾಪತಿ ಪಾಟೀಲ್, ಮಹಾಂತೇಶ ಮಸ್ಕಿ, ಮಲ್ಲಿಕಾರ್ಜುನ ವಕೀಲ, ಡಾ.ರೇಖಾ ಪಾಟೀಲ್, ಸುಂಗಮಲಾ ಸಕ್ರಿ, ಸವಿತಾ ಬಡಿಗೇರ, ಪಾರ್ವತಿ ಎಸ್. ಅಮರಖೇಡ, ಅನುರಾಧ ಪೊಂಪನಗೌಡ ಪಾಟೀಲ್, ಜಯಲಕ್ಷ್ಮೀ ಸಿದ್ದನಗೌಡ ಪಾಟೀಲ್, ಪರಿಮಳ ನಾಗರಾಜ ಮಸ್ಕಿ, ಜ್ಯೋತಿ ಐದನಾಳ, ಸರಸ್ವತಿ ಮಲ್ಲಿಕಾರ್ಜುನ,ಶೇಖಪ್ಪ ಇಜೇರಿ, ಸಂಗೀತಾ ಸಾರಂಗಮಠ ಭಾಗವಹಿಸಲಿದ್ದಾರೆ ಎಂದರು. ನಂತರ ವಿವಿಧ ತಂಡಗಳಿಂದ ಶರಣ ಸಂಸ್ಕೃತಿ ಕಾರ್ಯಕ್ರಮಗಳು ಪ್ರದರ್ಶನವಾಗಲಿವೆ ಎಂದರು. ಈ ಸಂದರ್ಬದಲ್ಲಿ ಬಸ್ಸಪ್ಪ ತಿಪ್ಪಾರೆಡ್ಡಿ, ನಾಗರಾಜ ಮಸ್ಕಿ, ಅಂಬಾಪತಿ ಪಾಟೀಲ್, ಡಾ.ಸರ್ವಮಂಗಳ ಸಕ್ರಿ, ಡಾ. ರೇಖಾಪಾಟೀಲ್ ಉಪಸ್ಥಿತರಿದ್ದರು.

## ಕಂಚು ಮಾರೆಮ್ಮ ಜಾತ್ರೆ ಅಧಿಕಾರಿಗಳ ಪೂರ್ವಸಿದ್ಧತಾ ಸಭೆ

ಸಿಬ್ಬಂದಿ ಪ್ರತಿದಿನ ಸಂಜೆ 4ರಿಂದ ರಾತ್ರಿ 11 ಗಂಟೆಯವರೆಗೆ ಅಗ್ನಿಶಾಮಕ ವಾಹನದೊಂದಿಗೆ ಸ್ಥಳದಲ್ಲೇ ಸನ್ನದ್ಧರಾಗಿ ರಬೇಕು ಎಂದು ಸೂಚಿಸಿದರು.

ಈ ಸಂದರ್ಭದಲ್ಲಿ ಪಶ್ಚಿಮ ಪೊಲೀಸ್ ಠಾಣೆಯ ಸಿಪಿಐ ಉಮೇಶ್ ಕಾಂಬ್ಳೆ, ಎಸ್ಐ ಮಹ್ಮದ್ ಇಸಾಕ್, ಮಹಾನಗರ ಪಾಲಿಕೆ, ಆರೋಗ್ಯ ಇಲಾಖೆ, ಜೆಸ್ಕಾಂ, ಅಬಕಾರಿ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿದ್ದರು.

# ಬಿಜೆಪಿ ಜಿಲ್ಲಾ ಮಹಿಳಾ ಮೋರ್ಚಾ ಕಾರ್ಯಕಾರಿಣಿ ಸದಸ್ಯೆಯಾಗಿ ಆಯ್ಕೆಯಾದ ಅನ್ನಪೂರ್ಣ ಪಾಟೀಲ್‌ಗೆ ಸನ್ಮಾನ

■ ಕನ್ನಡ ಮಾತೃ ಭೂಮಿ ವಾರ್ತೆ



**ಹುಬ್ಬಳ್ಳಿ,**ಬಿಜೆಪಿ ಪಕ್ಷದ ಹುಬ್ಬಳ್ಳಿ- ಧಾರವಾಡ ಜಿಲ್ಲಾ ಮಹಿಳಾ ಮೋರ್ಚಾ ಕಾರ್ಯಕಾರಿಣಿ ಸದಸ್ಯೆಯಾಗಿ ಆಯ್ಕೆಯಾದ ಅನ್ನಪೂರ್ಣ ಪಾಟೀಲ್ ಅವರನ್ನು ವಾರ್ಡ್ ಸಂಖ್ಯೆ 36ರ ಏಕತಾ ನಗರ, ಉಣಕಲ್‌ನ ಶ್ರೀ ವರಮಹಾಲಕ್ಷ್ಮೀ ದೇವಸ್ಥಾನ ಸಮಿತಿ ಹಾಗೂ ಕಾಲೋನಿಯ ಸನ್ಮಾನಿಸಿ ಗೌರವಿಸಿದರು. ನಿವಾಸಿಗಳು

ಈ ಸಂದರ್ಭದಲ್ಲಿ ದೇವಸ್ಥಾನ ಪದಾಧಿಕಾರಿಗಳು ಸಮಿತಿಯ ಹಾಗೂ ಸ್ಥಳೀಯ ಮುಖಂಡರು ಅನ್ನಪೂರ್ಣ ಪಾಟೀಲ್ ಅವರಿಗೆ ಶಾಲು ಹೊದಿಸಿ, ಪುಷ್ಪಗುಚ್ಛ ನೀಡಿ ಅಭಿನಂದನೆ ಸಲ್ಲಿಸಿದರು.

ಮಹಿಳಾ ಸಂಘಟನೆ ಹಾಗೂ ಸಮಾಜ ಸೇವಾ ಕ್ಷೇತ್ರದಲ್ಲಿ ಅವರು ಸಲ್ಲಿಸುತ್ತಿರುವ ಸೇವೆಯನ್ನು ಶ್ಲಾಘಿಸಿ, ಮುಂದಿನ ದಿನಗಳಲ್ಲಿ ಪಕ್ಷ ಸಂಘಟನೆ ಬಲವರ್ಧನೆಗೆ ಅವರಿಂದ ಇನ್ನಷ್ಟು ಉತ್ತಮ ಕಾರ್ಯಗಳು ನಡೆಯಲಿ ಎಂದು ಹಾರೈಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಅನ್ನಪೂರ್ಣ ಪಾಟೀಲ್, ನನ್ನನ್ನು ಸನ್ಮಾನಿಸಿ ಶುಭ ಹಾರೈಸಿರುವುದು

ನನಗೆ ಮತ್ತಷ್ಟು ಪ್ರೇರಣೆ ಮತ್ತು ಜವಾಬ್ದಾರಿಯ ಭಾವನೆಯನ್ನು ಮೂಡಿಸಿದೆ. ಪಕ್ಷದ ಹಿರಿಯರು ಹಾಗೂ ಕಾರ್ಯಕರ್ತರು ನನ್ನ ಮೇಲೆ ಇಟ್ಟಿರುವ ವಿಶ್ವಾಸಕ್ಕೆ ತಕ್ಕಂತೆ ಸಂಘಟನೆಯನ್ನು ಬಲಪಡಿಸಲು ಮತ್ತು ಸಮಾಜ ಸೇವೆಗೆ ಹೆಚ್ಚಿನ ಆದ್ಯತೆ ನೀಡಲು ಪ್ರಾಮಾಣಿಕವಾಗಿ ಕೆಲಸ ಮಾಡುತ್ತೇನೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶ್ರೀ ವರಮಹಾಲಕ್ಷ್ಮಿ ದೇವಸ್ಥಾನ ಸಮಿತಿಯ ಸದಸ್ಯರು, ಬಿಜೆಪಿ ಕಾರ್ಯಕರ್ತರು, ಮಹಿಳಾ ಮುಖಂಡರು ಹಾಗೂ ಏಕತಾ ನಗರ ಕಾಲೋನಿಯ ನಿವಾಸಿಗಳು ಉಪಸ್ಥಿತರಿದ್ದರು.

# ಹುಬ್ಬಳ್ಳಿಯಲ್ಲಿ ಸದ್ದು ಮಾಡಿದ ಜೆಸಿಬಿ; ಪಾಲಿಕೆ ಅಂಗಡಿಗಳನ್ನು ತೆರವುಗೊಳಿಸಿದ ಪಾಲಿಕೆ ಆಯುಕ್ತರು



■ ಕನ್ನಡ ಮಾತೃ ಭೂಮಿ ವಾರ್ತೆ

**ಹುಬ್ಬಳ್ಳಿ,**ಸುಮಾರು ವರ್ಷಗಳಿಂದ ಪಾಲಿಕೆ ಜಾಗದಲ್ಲಿ ವ್ಯಾಪಾರ ಮಾಡ್ತಿದ್ದ, ವ್ಯಾಪಾರಸ್ಥರಿಗೆ ಏಕಾಏಕಿಯಾಗಿ ಪಾಲಿಕೆ ಅಧಿಕಾರಿಗಳು ಶಾಕ್ ಕೊಟ್ಟಿದ್ದಾರೆ. 2018 ರಿಂದ ನೋಟಿಸ್ ನೀಡಿದ್ರೂ ಕ್ಯಾರೆ ಮಾಡದೆ ವ್ಯಾಪಾರ ಮಾಡ್ತಿದ್ದ ಇವರಿಗೆ ಇಂದು ಮಹಾನಗರ ಪಾಲಿಕೆಯ ಆಯುಕ್ತರು ರುದ್ರೇಶ ಘಾಳಿ ಅವರು ತಮ್ಮ ಸಿಬ್ಬಂದಿ ಜೊತೆಗೆ ಫೀಲ್ಡ್ ಗೆ ಇಳಿದು ತೆರವು ಕಾರ್ಯಾಚರಣೆ ನಡೆಸಿದ್ದಾರೆ.

ಹಳೇ ಹುಬ್ಬಳ್ಳಿಯ ಅಂಬೇಡ್ಕರ್ ಮಾರುಕಟ್ಟೆ ಹಿಂಭಾಗದಲ್ಲಿ ಸುಮಾರು 53 ಪಾಲಿಕೆಯ ಅಂಗಡಿಗಳಿದ್ದವು. ಅವುಗಳನ್ನು ವ್ಯಾಪಾರಿಗಳು ಬಾಡಿಗೆಗೆ ತೆಗೆದುಕೊಂಡಿದ್ದರು. ಆದ್ರೆ ಪಾಲಿಕೆ ಅಧಿಕಾರಿಗಳು 2018 ರಿಂದ ನೋಟಿಸ್ ನೀಡ್ತಾ ಬಂದಿದೆ. ಇದನ್ನು ವಿರೋಧಿಸಿ ವ್ಯಾಪಾರಸ್ಥರು ಕೋರ್ಟ್ ಮೊರೆ ಹೋಗಿದ್ದರು. ಆದ್ರೆ ಮಾನ್ಯ ನ್ಯಾಯಾಲಯ ಪಾಲಿಕೆ ಪರ ಆದೇಶ ಮಾಡಿದೆ.

ಇದರಿಂದ ಇಂದು ಮಹಾನಗರ ಪಾಲಿಕೆಯ ಅಧಿಕಾರಿಗಳು ಪೊಲೀಸ್ ಇಲಾಖೆ ಸಹಕಾರದಿಂದ ಎಲ್ಲ ಅಂಗಡಿಗಳನ್ನು ತೆರವು ಕಾರ್ಯಾಚರಣೆ ಮಾಡಿದರು.

# ಕುಡಿಯುವ ನೀರಿನ ಪೂರೈಕೆ ಕುರಿತು ಕುಂದುಕೊರತೆಗಳನ್ನು ಆಲಿಸಿದ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ವಿ.ಅಂಜಿನಪ್ಪ



■ ಕನ್ನಡ ಮಾತೃ ಭೂಮಿ ವಾರ್ತೆ

**ಹರಪನಹಳ್ಳಿ,**ಹರಪನಹಳ್ಳಿ ನಗರ ಸಭೆ ವ್ಯಾಪ್ತಿಯ ವಾರ್ಡ್ ಸಂಖ್ಯೆ 18 ರ ನಟರಾಜ ಬಡಾವಣೆಗೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಎಂ.ವಿ.ಅಂಜಿನಪ್ಪ ಅವರು ಇಂದು ಭೇಟಿ ನೀಡಿ, ಸಾರ್ವಜನಿಕರಿಂದ ಕುಡಿಯುವ ನೀರಿನ ಪೂರೈಕೆ ಕುರಿತು ಕುಂದುಕೊರತೆಗಳನ್ನು ಆಲಿಸಿದರು.

(ಇಂದು ಬೆಳಿಗ್ಗೆಯೇ ನಟರಾಜ ಬಡಾವಣೆಯಲ್ಲಿರುವ ಶ್ರೀ ವರಸಿದ್ಧಿ ವಿನಾಯಕ ದೇವಸ್ಥಾನದಿಂದ ಕಾಲ್ನಡಿಗೆ ಮೂಲಕ ನಟರಾಜ ಕಾಲಭವನದವರೆಗೆ ಕುಡಿಯುವ ನೀರು ಸಮರ್ಪಕವಾಗಿ ಪೂರೈಕೆಯಾಗುತ್ತಿದೆಯೇ, ಏನಾದರೂ ಸಮಸ್ಯೆ ಇದೆಯೇ ಎಂದು ಅಧ್ಯಕ್ಷರು ಅಲ್ಲಿನ ನಿವಾಸಿಗಳನ್ನು ವಿಚಾರಿಸಿದರು.

ಅಲ್ಲದೇ ಬಡಾವಣೆಯಲ್ಲಿ ಅನಾಧಿಕೃತವಾಗಿ ನೀರಿನ ಪೈಪ್ ಲೈನ್ ಒಡೆದು ಉಪಯೋಗಿಸುವವರ ವಿರುದ್ಧ ದೂರು ದಾಖಲಿಸಿ,ಹಾಗೂ ಸ್ಥಳೀಯ ಸಮಸ್ಯೆಗಳನ್ನು ತ್ವರಿತವಾಗಿ ಪರಿಹರಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಗುಡಿ ನಾಗರಾಜ್,ಪುರಸಭೆ ಮಾಜಿ ಅಧ್ಯಕ್ಷರಾದ ಮಂಜುನಾಥ್ ಇಜಂರ್ಟ್ಕ, ನೀರು ಸರಬರಾಜು ಸಹಾಯಕರಾದ ಮಂಜುನಾಥ್ ಗೌಡ,

ಗುತ್ತಿಗೆದಾರ ಅಬ್ದುಲ್ ಮಜೀದ್, ಪ್ರಸನ್ನ ಕುರ್ಮಾ, ವಾಗೀಶ್, ನಿವೃತ್ತ ಶಿಕ್ಷಕರಾದ ಮಂಜುನಾಥ್,ಸೇರಿದಂತೆ ಬಡಾವಣೆ ನಿವಾಸಿಗಳು ಇದ್ದರು.

# ಮುಖ್ಯ ಶಿಕ್ಷಕ ಡಾ. ಎಚ್.ಬಿ. ಕೊರವರರಿಗೆ ಆತ್ಮೀಯ ಸನ್ಮಾನ : ಶಾಲೆಯಲ್ಲಿ ವನಮಹೋತ್ಸವ ಆಚರಣೆ



■ ಕನ್ನಡ ಮಾತೃ ಭೂಮಿ ವಾರ್ತೆ

**ಹುಬ್ಬಳ್ಳಿ,**ಮುಖ್ಯ ಶಿಕ್ಷಕರಾಗಿ ಪದೋನ್ನತಿ ಹೊಂದಿ ಮಂಜುನಾಥನಗರ ಶಾಲೆಯಿಂದ ಬಸವೇಶ್ವರ ನಗರದ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಗೆ ವರ್ಗಾವಣೆಗೊಂಡು ಬಂದಿರುವ ಡಾ. ಎಚ್.ಬಿ. ಕೊರವರ ಅವರನ್ನು ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿ ಹಾಗೂ ಬಸವ ಪರಿಸರ ಸಂರಕ್ಷಣಾ ಸಮಿತಿಯ ವತಿಯಿಂದ ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಡಾ. ಕೊರವರ ಅವರಿಗೆ ಗ್ರಂಥಗಳನ್ನು ನೀಡಿ, ಪುಷ್ಪಮಾಲೆ ಹಾಕಿ ಶುಭಾಶಯ ಕೋರಲಾಯಿತು.

ಬಸವೇಶ್ವರ ನಗರದ ಸರ್ಕಾರಿ ಮಾದರಿ ಶಾಲೆಯು ಅವರ ನಾಯಕತ್ವದಲ್ಲಿ ಶೈಕ್ಷಣಿಕ ಹಾಗೂ ಸರ್ವತೋಮುಖ ಅಭಿವೃದ್ಧಿಯತ್ತ ಸಾಗಲಿ ಎಂದು ಗಣ್ಯರು ಹಾರೈಸಿದರು.

ಕಾರ್ಯಕ್ರಮದಲ್ಲಿ ನಿವೃತ್ತ ವೈದ್ಯಾಧಿಕಾರಿ ಡಾ. ವಿ.ಬಿ. ನಿಟಾಲಿ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿ ಹಾಗೂ ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ, ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾಟಕ ವಚನ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ ಹಾಗೂ ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನದ ಟ್ರಸ್ಟಿ ಮತ್ತು ಗ್ರಂಥಪಾಲಕರಾದ ಡಾ. ಸುರೇಶ ಡಿ. ಹೊರಕೇರಿ ಉಪಸ್ಥಿತರಿದ್ದರು.

ಶಿಕ್ಷಕಿಯರಾದ ಅಕ್ಕಮ್ಮ ವಿ. ಶೆಟ್ಟರ್, ಶಕುಂತಲಾ ಜಿ. ನವಲಗುಂದ, ಅನಸೂಯಾ ವೈ. ಮರಕುಂಬಿ, ವಿದ್ಯಾ ಬನ್ನಾ, ಸವಿತಾ ಪಿ. ಮಗದೂರ,

ಶ್ರೀದೇವಿ ಎಚ್. ಕುಲಕರ್ಣಿ,

ವೀಣಾ ಪ್ರ. ಪಾಟೀಲ, ಜ್ಯೋತಿ ಶಾ ಕೆಲದಿಮಠ, ಶಾಲೆಯ ವಿದ್ಯಾರ್ಥಿಗಳು, ಪಾಲಕರು ಹಾಗೂ ಇತರರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಇದೇ ಸಂದರ್ಭದಲ್ಲಿ ಶಾಲೆಯಲ್ಲಿ ವನಮಹೋತ್ಸವ ಆಚರಿಸಿ, ಪರಿಸರ ಸಂರಕ್ಷಣೆಯ ಸಂದೇಶ ಸಾರುವ ಉದ್ದೇಶದಿಂದ ಶಾಲಾ ಆವರಣದಲ್ಲಿ ವಿವಿಧ ಸಸಿಗಳನ್ನು ನೆಡಲಾಯಿತು.

# ಶ್ರೀಧರಗಡ್ಡೆ ಬೇಕರಿ ವೃತ್ತದಲ್ಲಿ ಭೀಕರ ಅಪಘಾತ ಬ್ರೇಕರ್ ಅಳವಡಿಕೆಗೆ ಗ್ರಾಮಸ್ಥರ ಒತ್ತಾಯ



■ ಕನ್ನಡ ಮಾತೃ ಭೂಮಿ ವಾರ್ತೆ

**ಬಳ್ಳಾರಿ,** ಬಳ್ಳಾರಿ ತಾಲೂಕಿನ ಶ್ರೀಧರಗಡ್ಡೆ ಗ್ರಾಮದ ಬೇಕರಿ ವೃತ್ತದ ಸಮೀಪ ರಸ್ತೆ ಬ್ರೇಕರ್‌ಗಳ ಕೊರತೆಯಿಂದ ಎರಡು ದ್ವಿಚಕ್ರ ವಾಹನಗಳು ಮುಖಾಮುಖಿ ಡಿಕ್ಕಿ ಹೊಡೆದು ಅಪಘಾತ ಸಂಭವಿಸಿದೆ.

ದಮ್ಮೂರು ಮತ್ತು ಕೊಳಗಲ್ ಗ್ರಾಮದ ಮೂಲದ ದ್ವಿಚಕ್ರ ವಾಹನ ಸವಾರರು ಪರಸ್ಪರ ಡಿಕ್ಕಿ ಹೊಡೆದ ಪರಿಣಾಮ, ಕೊಳಗಲ್ ಗ್ರಾಮದ ಓರ್ವ ವಾಹನ ಸವಾರ ಗಂಭೀರವಾಗಿ ಗಾಯಗೊಂಡಿದ್ದು, ಅವರನ್ನು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

ಶ್ರೀಧರಗಡ್ಡೆ ಗ್ರಾಮದಿಂದ ತಾಳೂರು ಕಡೆಗೆ ಹಾಗೂ ಶ್ರೀಧರಗಡ್ಡೆ ಗ್ರಾಮದಿಂದ ಸಿರಿವಾರ ಕಡೆಗೆ ವಾಹನ ಸಂಚಾರ ಹೆಚ್ಚಿರುವ ಈ ರಸ್ತೆಯಲ್ಲಿ, ವಿಶೇಷವಾಗಿ ಭಾರೀ ಲಾರಿಗಳ ಓಡಾಟ ಹೆಚ್ಚಿರುವುದರಿಂದ ಅಪಘಾತಗಳು ಪದೇ ಪದೇ ಸಂಭವಿಸುತ್ತಿವೆ ಎಂದು ಸ್ಥಳೀಯರು ತಿಳಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಶ್ರೀಧರಗಡ್ಡೆ ಗ್ರಾಮದ ಮುಖ್ಯ ರಸ್ತೆಯ ಬೇಕರಿ ವೃತ್ತದ ಬಳಿ ತಕ್ಷಣವೇ ರಸ್ತೆ ಬ್ರೇಕರ್ ಗಳನ್ನು ಅಳವಡಿಸಿ ಸಾರ್ವಜನಿಕರ ಸುರಕ್ಷತೆಗೆ ಕ್ರಮ ಕೈಗೊಳ್ಳಬೇಕು ಎಂದು ಗ್ರಾಮಸ್ಥರು ಪತ್ರಿಕಾ ಮಾಧ್ಯಮದ ಮೂಲಕ ಆಗ್ರಹಿಸಿದ್ದಾರೆ.

# ವಿದ್ಯುತ್ ವಿತರಣಾ ಕೇಂದ್ರಗಳ ಖಾಸಗೀಕರಣ ವಿರೋಧಿಸಿ ಕೆಪಿಟಿಸಿಎಲ್ ನೌಕರರಿಂದ ಪ್ರತಿಭಟನೆ

ಉದ್ಯೋಗದಲ್ಲಿ ದೊರೆಯುತ್ತಿರುವ ಮೀಸಲಾತಿಗೆ ಧಕ್ಕೆಯಾಗಲಿದೆ. ವಿದ್ಯುತ್ ದರ ಏರಿಕೆಯಿಂದ ಸಣ್ಣ ಹಾಗೂ ಗುಡಿ ಕೈಗಾರಿಕೆಗಳು ಸಂಕಷ್ಟಕ್ಕೆ ಸಿಲುಕಲಿದ್ದು, ಸಾವಿರಾರು ವಿದ್ಯುತ್ ಗುತ್ತಿಗೆದಾರರು ಉದ್ಯೋಗ ಕಳೆದುಕೊಳ್ಳುವ ಪರಿಸ್ಥಿತಿ ಎದುರಾಗುತ್ತದೆ ಎಮದು ದೂರಿದರು.

ಅನೇಕ ನೌಕರರು ತಮ್ಮ ಪ್ರಾಣವನ್ನೇ ಪಣಕ್ಕಿಟ್ಟು ಕಟ್ಟಿಬೆಳೆಸಿರುವ ವಿದ್ಯುತ್ ವ್ಯವಸ್ಥೆಯನ್ನು ಲಾಭದ ಉದ್ದೇಶ ಹೊಂದಿರುವ ಖಾಸಗಿ ಸಂಸ್ಥೆಗಳಿಗೆ ನೀಡುವುದು ಜನಸಾಮಾನ್ಯರ ಹಿತಕ್ಕೆ ವಿರುದ್ಧವಾಗಲಿದೆ ಆರೋಪಿಸಿದರು.

ಸಾರ್ವಜನಿಕರ ತೆರಿಗೆ ಹಣದಲ್ಲಿ ನಿರ್ಮಾಣವಾಗಿರುವ ವಿದ್ಯುತ್ ಜಾಲವನ್ನು ಖಾಸಗಿ ಸಂಸ್ಥೆಗಳಿಗೆ ಒಪ್ಪಿಸುವುದು ಸಂವಿಧಾನದ ಆಶಯಗಳಿಗೆ ವಿರುದ್ಧವಾಗಿದೆ ಎಂದು ಆಪಾದಿಸಿದರು.ಇಲಾಖೆಯಲ್ಲಿ ಮಂಜೂರಾದ ಹುದ್ದೆಗಳಿಗಿಂತ ಅರ್ಧದಷ್ಟು ಸಿಬ್ಬಂದಿ ಕೊರತೆ ಇದ್ದರೂ ಸರ್ಕಾರದ ವಿವಿಧ ಯೋಜನೆಗಳನ್ನು ಸಮರ್ಪಕವಾಗಿ ಜಾರಿಗೊಳಿಸಿ, ಸಾರ್ವಜನಿಕರು, ರೈತರು ಹಾಗೂ ಕೈಗಾರಿಕೆಗಳಿಗೆ ದಕ್ಷ ಮತ್ತು ಪ್ರಾಮಾಣಿಕ ಸೇವೆ ನೀಡಲಾಗುತ್ತಿದೆ. ಹೀಗಿರುವಾಗ ಖಾಸಗೀಕರಣದ ಯಾವುದೇ ಪ್ರಯತ್ನವನ್ನು ಸರ್ಕಾರ ಕೈಬಿಡಬೇಕು ಎಂದು ಆಗ್ರಹಿಸಿದರು. ಈ ಸಂದರ್ಭದಲ್ಲಿ ಜೆ.ಎಲ್. ಗೋಪಿ, ಸಂಜೀವ್ ಕುಮಾರ್, ನರಸಪ್ಪ ಮಣ್ಣಿಗಿರಿ, ವೆಂಕಟೇಶ, ಮಲ್ಲಣ್ಣ, ಶಿವಮೂರ್ತಿ, ರಾಮಕೃಷ್ಣ, ಸೇರಿದಂತೆ ಅಧಿಕಾರಿ ಮತ್ತು ನೌಕರರು ಭಾಗವಹಿಸಿದ್ದರು.

# ಎಸ್‌ಐಟಿ ಮುಖ್ಯಸ್ಥರಿಗೆ ಕಳುಹಿಸಿ ಮಾಹಿತಿ ನೀಡಿದ್ದೆ-ನಟ ಪ್ರಕಾಶ್ ರಾಜ್

**ಬೆಂಗಳೂರು,ಜೂ.17**-ಧರ್ಮಸ್ಥಳ ಬುರುಡೆ ಪ್ರಕರಣದಲ್ಲಿ ದೂರುದಾರನಾಗಿದ್ದ ಚಿನ್ನಯ್ಯ ಜೊತೆ ಫೋನ್ ಕರೆಯಲ್ಲಿ ಮಾತನಾಡಿದ್ದು ನಿಜ, ಸತ್ಯವನ್ನು ಎಸ್‌ಐಟಿ ಅಧಿಕಾರಿಗಳಿಗೆ ಹೇಳುವಂತೆ ತಿಳಿಸಿದ್ದೆ ಹೊರತು, ಕೋಟ್ಯಂತರ ಭಕ್ತರು ನಂಬುವ ಧರ್ಮಸ್ಥಳ ಕ್ಷೇತ್ರವನ್ನು ಅಪ್ರಪಚಾರ ಮಾಡುವುದಾಗಲಿ ಅಥವಾ ಸಂಬಂಧಿತ ವ್ಯಕ್ತಿಗಳನ್ನು ತೇಜೋವಧೆ ಮಾಡುವ ಉದ್ದೇಶ ಇರಲಿಲ್ಲ ಎಂದು ಹಿರಿಯ ನಟ ಪ್ರಕಾಶ್ ರಾಜ್ ಸ್ಪಷ್ಟನೆ ನೀಡಿದ್ದಾರೆ. ಹೈಕೋರ್ಟ್‌ಗೆ ಚಿನ್ನಯ್ಯ ಸಲ್ಲಿಸಿದ್ದ ರಿಟ್ ಅರ್ಜಿಯಲ್ಲಿ ಪ್ರಕಾಶ್ ರಾಜ್ ಹೆಸರು ಕೇಳಿಬಂದಿತ್ತು. ಧರ್ಮಸ್ಥಳ ಕ್ಷೇತ್ರದ ಅಪ್ರಚಾರದ ಹಿಂದೆ 200 ಕೋಟಿ ರೂ. ಪ್ರಾಜೆಕ್ಟ್ ಇದಾಗಿದೆ ಎಂದು ಅರ್ಜಿಯಲ್ಲಿ ನಮೂದಿಸಿದ್ದ. ಈ ಬಗ್ಗೆ ಪರ-ವಿರೋಧ ಚರ್ಚೆಯಾಗುತ್ತಿದ್ದಂತೆ ಪ್ರಕಾಶ್ ರಾಜ್ ಅವರು ಪ್ರೆಸ್ ಕ್ಲಬ್‌ನಲ್ಲಿ ಇಂದು ಮಾಧ್ಯಮಗೋಷ್ಠಿ ಕರೆದು ಸ್ಪಷ್ಟನೆ ನೀಡಿದ್ದಾರೆ. ಮಂಡ್ಯ ಮೂಲದ ಚಿನ್ನಯ್ಯ ಧರ್ಮಸ್ಥಳದಲ್ಲಿ ಸರಣಿ ಕೊಲೆಗಳಾಗಿವೆ ಎಂದು ಬುರುಡೆ ಇಟ್ಟುಕೊಂಡು ದಿರ್ಘ ಹೇಳಿಕೆ ನೀಡಿದ್ದ.

# ಮಧ್ಯವರ್ತಿಗಳಿಂದ ಉದ್ಯೋಗ ಕೊಡಿಸುವದಾಗಿ ಹಣವಸೂಲಿ..?

ವ್ಯವಹಾರ ಶಾಲೆ ಶಿಕ್ಷಕರಿಗೆ ಸಮಸ್ಯೆಯಾಗಿ ಪರಿಣಮಿಸಲಿದೆ. ಶಾಲಾ ಮೇಲುಸ್ತುವಾರಿ ಸಮಿತಿಗಳಿಗೆ ಅಧಿಕಾರ ನೀಡಿದ್ದರೆ ಸ್ಥಳೀಯವಾಗಿ ನೇಮಕಾತಿ ನಡೆಯುತ್ತಿತ್ತು. ಬೇರೆ ಕಡೆಯಿಂದ ನಿಯುಕ್ತಿಗೊಂಡಿರುವ ಸ್ವಯಂಸೇವಾ ಸಂಸ್ಥೆಗಳು ಗ್ರಾಮ ಮಟ್ಟದ ಸಮಸ್ಯೆ, ಮಾಹಿತಿ ಕೊರತೆಯಿಂದ ಪ್ರಭಾವಕ್ಕೆ ಒಳಗಾಗಿ ನೇಮಕಾತಿ ಮಾಡುತ್ತಿರುವ ಪರಿಣಾಮ ಮಧ್ಯವರ್ತಿಗಳ ವ್ಯವಹಾರ ಪ್ರಾರಂಭವಾಗಲು ಕಾರಣವಾಗಿದೆ. ಶಿಕ್ಷಕರು ಹಾಗೂ ಎಸ್‌ಡಿಎಂಸಿಗಳ ಸಹಕಾರವಿಲ್ಲದೇ ಅಟೆಂಡರ್ ಸೇವೆ ನಿರ್ವಹಿಸುವದು ಸಹ ಹೊಸ ಸಮಸ್ಯೆಗೆ ಕಾರಣವಾದಂತಾಗಿದೆ. ಇನ್ನೂ ಪೂರ್ಣ ಪ್ರಮಾಣದಲ್ಲಿ ಅಟೆಂಡರ್ ಹುದ್ದೆಗಳು ನೇಮಕಾತಿ ನಡೆದಿಲ್ಲ. ಶಾಲಾ ಶಿಕ್ಷಣ ಇಲಾಖೆ, ಸಮಗ್ರ ಶಿಕ್ಷಣ ಯೋಜನೆ ಅಧಿಕಾರಿಗಳು ಎಚ್ಚರಗೊಂಡು ಅಕ್ರಮ ಹಣವಸೂಲಿಗೆ ಕಡಿವಾಣ ಹಾಕಬೇಕಿದೆ.ಹಣಕೊಟ್ಟವರ್ಯಾರು ಹಣನೀಡಿರುವ ಖಚಿತತೆಪಡಿಸಲು ಸಿದ್ದರಿಲ್ಲ. ಆಯ್ಕೆ ಸ್ವಯಂಸೇವಾ ಸಂಸ್ಥೆಗೂ ಗೊತ್ತಿಲ್ಲದೇ ವ್ಯವಹಾರ ನಡೆದಿರುವದು ಸಂಶಯಗಳಿಗೆ ಕಾರಣವಾಗಿದೆ.

OWNER, PUBLISHER, PRINTER BY: SHYAM SUNDER L. PUBLISHED FROM: H: NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA AND PRINTED AT: KANNADA MATHRUBHOOMI PRINTERS, SHOP NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA, EDITOR BY: SHYAM SUNDER L